ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೭

**ಪಟ್ಟಿ – ೧೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೈದನೇ ಅಧಿವೇಶನ**

**ಗುರುವಾರ, ದಿನಾಂಕ : ೨೦ನೇ ಮಾರ್ಚ್, ೨೦೨೫**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಉಪ ಮುಖ್ಯಮಂತ್ರಿಗಳು

೩. ಗೃಹ ಸಚಿವರು

೪. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

೫. ಅಬಕಾರಿ ಸಚಿವರು

೬. ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು

---

## ರಾಜ್ಯದಲ್ಲಿನ ನಕ್ಸಲರ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೧ (೧೩೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ನಕ್ಸಲರು ಶರಣಾಗತರಾಗುವುದರೊಂದಿಗೆ ಪೂರ್ಣ ಪ್ರಮಾಣದಲ್ಲಿ ನಕ್ಸಲ್ ಹಾವಳಿ ಕೊನೆಗೊಂಡಂತಾಗಿದೆಯೇ ;

(ಆ) ಶರಣಾದ ನಕ್ಸಲರಿಗೆ ಸರ್ಕಾರ ಕಲ್ಪಿಸಿರುವ ಅನುಕೂಲತೆಗಳೇನು ಮತ್ತು ಕೈಗೊಳ್ಳಬಹುದಾದ ಕಾನೂನು ಕ್ರಮಗಳೇನು ;

(ಇ) ಕರ್ನಾಟಕದಲ್ಲಿ ನಕ್ಸಲ್ ಮುಕ್ತಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಬೆಂಗಳೂರಿನಲ್ಲಿ ಅತ್ಯಾಧುನಿಕ ಕ್ರೀಡಾ ನಗರ ಸ್ಥಾಪಿಸುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೨ (೧೩೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಅತ್ಯಾಧುನಿಕ ಕ್ರೀಡಾ ನಗರ ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಪೂರ್ಣ ಪ್ರಮಾಣದ ಕ್ರೀಡಾ ನಗರ ಯಾವಾಗ ಅಸ್ತಿತ್ವಕ್ಕೆ ಬರಲಿದೆ ;

(ಇ) ಕ್ರೀಡಾ ನಗರದ ಪ್ರಮುಖ ಸೌಲಭ್ಯಗಳೇನು ? (ವಿವರ ಒದಗಿಸುವುದು)

## ರಾಜ್ಯದಲ್ಲಿ ವಿತ್ತೀಯ ಶಿಸ್ತಿನ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೦೩ (೧೩೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ವಿತ್ತೀಯ ಕೊರತೆ ಮಾಯವಾಗುತ್ತಿದ್ದು, ಈ ಕೊರತೆಯನ್ನು ನಿಭಾಯಿಸಲು ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ೨೦೨೪–೨೫ ನೇ ಹಣಕಾಸು ವರ್ಷದಲ್ಲಿ ಈವರೆಗೆ ಮಾಡಿರುವ ಸಾಲದ ಮೊತ್ತ ಎಷ್ಟು ; (ಸಂಪೂರ್ಣ ವಿವರ ಒದಗಿಸುವುದು)

(ಇ) ರಾಜ್ಯದಲ್ಲಿ ಸಂಪನ್ಮೂಲ ಕ್ರೂಢೀಕರಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ರಾಜ್ಯ ಸರ್ಕಾರ ಹೊಸದಾಗಿ ಲೇಬರ್ ಸೆಸ್, ಆಗ್ರಿಕಲ್ಚರ್ ಸೆಸ್ ಮತ್ತಿತ್ತರ ಸೆಸ್ ಹಾಕಲು ಚಿಂತನೆ ನಡೆಸಿದೆಯೇ ; (ವಿವರ ಒದಗಿಸುವುದು)

(ಉ) ರಾಜ್ಯದ ಹಣಕಾಸು ಪರಿಸ್ಥಿತಿ ಕುರಿತು ಶ್ವೇತ ಪತ್ರ ಹೊರಡಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಆನ್‌ಲೈನ್ ಗೇಮ್‌ಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೪ (೧೪೫೦) ಮಾನ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ಆನ್‌ಲೈನ್ ಗೇಮ್‌ಗಳಿಗೆ ಅಂಟಿಕೊಂಡು ಆಡುವವರ ಸಂಖ್ಯೆ ಜಾಸ್ತಿಯಾಗಿದ್ದು, ಇಂದಿನ ಯುವಕರು ಆನ್‌ಲೈನ್ ಗೇಮ್ಸ್‌ಗೆ ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಿರುವುದಲ್ಲದೇ ತಮ್ಮ ಜೀವವನ್ನೇ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಆನ್‌ಲೈನ್ ಗೇಮ್ ಗೀಳಿನಿಂದ ಹಣ ಕಳೆದುಕೊಂಡು ಆತ್ಮಹತ್ಯೆ ಪ್ರಯತ್ನ ಹಾಗೂ ಆತ್ಮಹತ್ಯೆ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು ;

(ಇ) ಆನ್‌ಲೈನ್ ಗೇಮ್ ರದ್ದುಪಡಿಸಲು ಅಥವಾ ನಿಯಂತ್ರಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಎನ್.ಪಿ.ಎಸ್ ಯೋಜನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೫ (೧೪೪೧) ಮಾನ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಷೇರು ಮಾರುಕಟ್ಟೆ ಆಧಾರಿತ ಎನ್.ಪಿ.ಎಸ್ ಯೋಜನೆಯು ಕೇಂದ್ರ ಸರ್ಕಾರದ ಪಿ.ಎಫ್. ಆರ್.ಡಿ.ಎ (PFRDA) ಕಾಯಿದೆ ಅಡಿ ಬರುವುದು ನಿಜವೇ ; ಹೌದಾದಲ್ಲಿ, PFRDA ಕಾಯಿದೆ ಯಾವ ಯಾವ ಷರತ್ತುಗಳಿಗೆ ಒಳಪಟ್ಟಿರುತ್ತದೆ ;

(ಆ) PFRDA ಕಾಯಿದೆ ಅಡಿ ಈ ಯೋಜನೆ ಬರುವುದರಿಂದ ರಾಜ್ಯ ಸರ್ಕಾರ ಪೂರ್ಣ ಪ್ರಮಾಣದ ನಿಶ್ಚಿತ ಪಿಂಚಣಿ ಯೋಜನೆ ಜಾರಿಗೊಳಿಸಲು ಕ್ರಮ ಕೈಗೊಂಡಲ್ಲಿ, ಏಪ್ರಿಲ್–೨೦೦೬ ರಿಂದ ಕಟಾವಣೆಯಾಗಿರುವ ಎನ್.ಪಿ.ಎಸ್ ವಂತಿಗೆಯ ಮೊತ್ತ ಮರಳಿ ನೌಕರರ ಜಿ.ಪಿ.ಎಫ್ ಖಾತೆಗೆ ವರ್ಗಾವಣೆಗೊಳ್ಳುವುದೆ ;

(ಇ) ಏಪ್ರಿಲ್ ೨೦೦೬ಕ್ಕೆ ಹಿಂದೆ ಇದ್ದ ನಿಶ್ಚಿತ ಪಿಂಚಣಿ ಯೋಜನೆಯನ್ನು ಯಥವತ್ತಾಗಿ ಮರುಸ್ಥಾಪಿಸಲು ರಾಜ್ಯ ಸರ್ಕಾರ ಯಾವ ಯಾವ ಕ್ರಮ ತೆಗೆದುಕೊಂಡಿದೆ ;

(ಈ) ಇತ್ತೀಚೆಗೆ ಕೇಂದ್ರ ಸರ್ಕಾರಿ ನೌಕರರಿಗೆ ಯು.ಪಿ.ಎಸ್. ಜಾರಿ ಮಾಡಿದ್ದು, ರಾಜ್ಯ/ಕೇಂದ್ರ ಸರ್ಕಾರಿ ನೌಕರರು ಈ ಮಾರ್ಪಡಿತ ಯೋಜನೆಯನ್ನು ಒಪ್ಪದೇ ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ, ಯಾವ ಮಾರ್ಪಾಡನ್ನೂ ಒಳಗೊಳ್ಳದೆ ಹಿಂದಿನ ನಿಶ್ಚಿತ ಪಿಂಚಣಿ ರಾಜ್ಯದಲ್ಲಿ ಜಾರಿ ಮಾಡುವ ಯೋಜನೆಯನ್ನು ಮರುಸ್ಥಾಪಿತವಾಗುವುದೆ ; ಹೌದಾದಲ್ಲಿ, ಯಾವ ಕಾಲಮಿತಿಯೊಳಗೆ ಈ ಸಂಬಂಧ ಆದೇಶ ಹೊರಡಿಸಲಾಗುವುದು ?

## ತುಂಗಾ ಹಾಗೂ ಭದ್ರಾ ಅಣೆಕಟ್ಟು ಯೋಜನೆ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೬ (೧೪೪೯) ಮಾನ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಾ ಅಣೆಕಟ್ಟು ಹಾಗೂ ಭದ್ರಾ ಅಣೆಕಟ್ಟು ಯೋಜನೆಗೆ ಸಂಬಂಧಿಸಿದಂತೆ ಮುಳುಗಡೆಗೊಂಡ ಎಷ್ಟು ಸಂತ್ರಸ್ಥ ಕುಟುಂಬಗಳಿಗೆ ಪರಿಹಾರ ಹಾಗೂ ಪುರ್ನವಸತಿ ಕಲ್ಪಿಸಿ ಜಮೀನು ಮಂಜೂರು ಮಾಡಲಾಗಿದೆ ;

(ಆ) ಇದಕ್ಕಾಗಿ ಅಧಿಸೂಚಿತ ಅರಣ್ಯ ಪ್ರದೇಶದಲ್ಲಿ ಎಷ್ಟು ಎಕರೆ ಜಮೀನು ಮಂಜೂರು ಮಾಡಲಾಗಿದೆ ;

(ಇ) ಈ ಅರಣ್ಯ ಜಮೀನುಗಳನ್ನು ಡಿ–ನೋಟಿಫಿಕೇಶನ್ ಹಾಗೂ ಕಾಯ್ದಿರಿಸದಿರುವ ಬಗ್ಗೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ಮಾಹಿತಿ ನೀಡುವುದು)

## ವಸತಿ ನಿವೇಶನಗಳಲ್ಲಿ ಮಂಜೂರಾತಿ ನಕ್ಷೆ ಉಲ್ಲಂಘನೆ ಮಾಡಿ ಅನ್ಯ ವಾಣಿಜ್ಯ ಉದ್ದೇಶಗಳಿಗೆ ಕಟ್ಟಡ ನಿರ್ಮಾಣ ಮಾಡುವ ಕಾಮಗಾರಿ ತಡೆಯುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ ) :–**

೧೨೦೭ (೧೪೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಅನೇಕ ಬಡಾವಣೆಗಳಲ್ಲಿ ವಸತಿ ಉದ್ದೇಶದ ನಿವೇಶನಗಳಲ್ಲಿ ವಾಣಿಜ್ಯ ಕಟ್ಟಡಗಳು, ಪಿ.ಜಿ ಹೀಗೆ ಅನೇಕ ಮಾದರಿಯ ವಾಣಿಜ್ಯ ಚಟುವಟಿಕೆಗಳನ್ನು ಪ್ರಾರಂಭಿಸಿರುವುದರಿಂದ ಇಲ್ಲಿಯ ನಿವಾಸಿಗಳಿಗೆ ತೊಂದರೆಯುಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ವಾರ್ಡ್ ಸಂಖ್ಯೆ ೧೮೮ರ ಸ್ವತ್ತಿನ ಸಂಖ್ಯೆ ೨/೧, ದೇವಸಂದ್ರ ಸರ್ವೆ ನಂ.೩೪/೧ ರಾಧಕೃಷ್ಣ ದೇವಸ್ಥಾನದ ಹತ್ತಿರ ಬೆಂಗಳೂರು ಪಿ.ಐ.ಡಿ ನಂ.೧೦೦–೩೭೧–೨/೧ರಲ್ಲಿ ವಸತಿ ಕಟ್ಟಡ ನಿರ್ಮಿಸಲು ನಕ್ಷೆ ಮಂಜೂರಾತಿ ಪಡೆದು ಅದರ ಅನ್ವಯ ನಿರ್ಮಾಣ ಮಾಡದೇ ಪಿ.ಜಿಗಾಗಿ ಕಟ್ಟಡ ನಿರ್ಮಾಣ ಮಾಡುತ್ತಿರುವ ಕುರಿತು ಸುತ್ತಮುತ್ತಲಿನ ನಿವಾಸಿಗಳು ದೂರು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ದೂರಿನ ಕುರಿತು ದಿನಾಂಕ:೩೦.೦೫.೨೦೨೪ ರಂದು ಸಹಾಯಕ ನಿರ್ದೇಶಕರು, ನಗರ ಯೋಜನೆ ಪೂರ್ವ ಇವರು ನಕ್ಷೆ ಉಲ್ಲಂಘಿಸಿ, ಕಟ್ಟುತ್ತಿರುವ ಕಟ್ಟಡದ ಮಾಲೀಕರಿಗೆ ತಿಳುವಳಿಕೆ ಪತ್ರವನ್ನು ನೀಡಿದ್ದು, ಆದಾಗ್ಯೂ ನಕ್ಷೆ ಉಲ್ಲಂಘನೆ ಮಾಡಿ ಕಟ್ಟಡ ನಿರ್ಮಾಣ ಕಾರ್ಯವನ್ನು ಮುಂದುವರೆಸಿದ್ದು, ಸಂಬಂಧಪಟ್ಟ ಸ್ಥಳೀಯ ಅಧಿಕಾರಿಗಳ ಈ ಬಗ್ಗೆ ಯಾವುದೇ ಕ್ರಮಕೈಗೊಳ್ಳದಿರಲು ಕಾರಣವೇನು ;

(ಈ) ಇಂತಹ ಸಾರ್ವಜನಿಕ ದೂರುಗಳನ್ನು ಬಳಕೆ ಮಾಡಿಕೊಂಡು ನಕ್ಷೆ ಉಲ್ಲಂಘನೆ ಮಾಡುವ ಕಟ್ಟಡ ಮಾಲೀಕರುಗಳಿಂದ ಹಣ ವಸೂಲಿ ಮಾಡುವುದು ದಂಧೆಯಾಗಿದ್ದು ; ಕಟ್ಟಡ ನಿರ್ಮಾಣ ಮಾಡಲು ಸಹಕಾರ ನೀಡುವಂತಹ ಅಧಿಕಾರಿಗಳ ವಿರುದ್ಧ ಯಾವ ಕಾಲಮಿತಿಯೊಳಗೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ;

(ಉ) ನಕ್ಷೆ ಉಲ್ಲಂಘಿಸಿ ನಿರ್ಮಾಣ ಮಾಡುತ್ತಿರುವ ಕಟ್ಟಡ ಕಾಮಗಾರಿಯನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕೂಡಲೇ ತಡೆಗಟ್ಟಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ?

## ಬೆಂಗಳೂರು ನಗರದ ಉದ್ಯಾನವನಗಳ ಅಭಿವೃದ್ಧಿಯ ಬಗ್ಗೆ

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರ) :–**

೧೨೦೮ (೧೩೬೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರಕ್ಕೆ ಉದ್ಯಾನ ನಗರಿ ಎಂದು ಹೆಸರು ಬರಲು ಕಾರಣಗಳೇನು ;

(ಆ) ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿರುವ ಉದ್ಯಾನಗಳ ಸಂಖ್ಯೆ ಎಷ್ಟು; (ಬೃಹತ್, ಮಧ್ಯಮ ಮತ್ತು ಸಣ್ಣ ಉದ್ಯಾನಗಳ ವಿವರ ನೀಡುವುದು)

(ಇ) ಬೆಂಗಳೂರಿನ ಉದ್ಯಾನಗಳ ನಿರ್ಮಾಣ, ನಿರ್ವಹಣೆ ಹಾಗೂ ರಕ್ಷಣೆಯ ಜವಾಬ್ದಾರಿಯನ್ನು ಯಾರಿಗೆ ನೀಡಲಾಗಿದೆ; ಪ್ರತಿ ಉದ್ಯಾನ ನಿರ್ಮಾಣ, ನಿರ್ವಹಣೆ ಮತ್ತು ರಕ್ಷಣೆಗಾಗಿ ಮಾಡಲಾಗುತ್ತಿರುವ ವೆಚ್ಚ ಎಷ್ಟು; (ಕಳೆದ ಐದು ವರ್ಷದ ವಿವರ ನೀಡುವುದು)

(ಈ) ಬೆಂಗಳೂರಿನಲ್ಲಿ ಇತ್ತೀಚೆಗೆ ಮರಗಳನ್ನು ಕಡಿದು ಒಳಾಂಗಣ ಕ್ರೀಡಾಂಗಣಗಳನ್ನು ರಿಕ್ರಿಯೇಷನ್ ಕ್ಲಬ್ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದದೆಯೇ; ಬಂದಿದ್ದಲ್ಲಿ, ಮರಗಳನ್ನು ಕಡಿಯುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಬೆಂಗಳೂರಿನ ವಾಯು ಗುಣಮಟ್ಟ ಸೂಚ್ಯಂಕವೆಷ್ಟು; (ಕಳೆದ ಐದು ವರ್ಷದ ಮಾಹಿತಿ ನೀಡುವುದು) ವಾಯು ಗುಣಮಟ್ಟ ಸೂಚ್ಯಂಕ ಉತ್ತಮಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಊ) ನಗರದ ಜನತೆಗೆ ಶುದ್ಧ ಗಾಳಿಯನ್ನು ನೀಡುವ ಸಲುವಾಗಿ ಗುಣಮಟ್ಟದ ಉದ್ಯಾನ ನಿರ್ಮಾಣ ಮಾಡಲು ಸರ್ಕಾರ ಕೈಗೊಂಡಿರುವ ಯೋಜನೆಗಳು ಏನು ;

(ಋ) ನಗರದಲ್ಲಿ ಇ.ವಿ. ವಾಹನ ಬಳಕೆ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

# ಸಂಜಯನಗರದ ರೈಲ್ವೆ ಗೇಟ್ ಬಳಿ ಟ್ರಾಫಿಕ್ ಜಾಮ್ ನಿಯಂತ್ರಿಸುವ ಬಗ್ಗೆ

**ಶ್ರೀ ಚಿದಾನಂದ್ ಎಂ ಗೌಡ (ಪದವೀಧರರ ಕ್ಷೇತ್ರ) :–**

೧೨೮೯ (೧೩೫೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಿಗೆಹಳ್ಳಿಯಿಂದ ಭದ್ರಪ್ಪ ಲೇಔಟ್ ಮುಖಾಂತರ ಸಂಜಯನಗರ ಬಳಿ ರೈಲ್ವೆ ಗೇಟ್ ಬಳಿ ನಿತ್ಯ ಟ್ರಾಫಿಕ್ ಜಾಮ್ ಉಂಟಾಗಿ ವಿದ್ಯಾರ್ಥಿಗಳು, ವಾಹನ ಸವಾರರು ನರಕ ಯಾತನೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಲ್ಲಿ ಟ್ರಾಫಿಕ್ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ನಗರ ಹೊರಭಾಗದಲ್ಲಿ ಟ್ರಾಫಿಕ್ ನಿಯಂತ್ರಿಸುವ ಸಲುವಾಗಿ ರೈಲ್ವೆ ಗೇಟ್ ಬಳಿ ಅಂಡರ್ ಪಾಸ್, ಫ್ಲೈಓವರ್ ನಿರ್ಮಾಣ ಮಾಡುತ್ತಿದ್ದು, ನಗರದ ಮಧ್ಯ ಭಾಗದಲ್ಲಿ ಈ ರೈಲ್ವೆ ಗೇಟ್ ಬಳಿ ಅಂಡರ್ ಪಾಸ್ ಅಥವಾ ಫ್ಲೈಓವರ್ ನಿರ್ಮಿಸುವ ಪ್ರಸ್ತಾವ ಸರ್ಕಾರದ ಮುಂದೆ ಇದೆಯೇ ; ಇಲ್ಲದಿದ್ದಲ್ಲಿ, ಸದರಿ ಟ್ರಾಫಿಕ್ ಸಮಸ್ಯೆ ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ನಾಗಶೆಟ್ಟಿಹಳ್ಳಿ ಭದ್ರಪ್ಪ ಲೇಔಟ್ ಜಂಕ್ಷನ್‌ನಲ್ಲಿ ರೈಲ್ವೆ ಗೇಟ್ ಬಳಿ ದುರ್ನಾತ ಬೀರುವ ಕಸದರಾಶಿ ಬಿದ್ದು, ದುರ್ನಾತ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಸ್ವಚ್ಛಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮೈಕ್ರೋ ಫೈನಾನ್ಸ್‌ನಿಂದ ಆಗುತ್ತಿರುವ ಕಿರುಕುಳದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೦ (೧೪೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಮೈಕ್ರೋಫೈನಾನ್ಸ್ ಕಂಪನಿಗಳು ಸಹಕಾರ ಇಲಾಖೆಯಿಂದ ನೋಂದಣಿ ಮಾಡಿಕೊಂಡಿದೆಯೇ ; ಫೈನಾನ್ಸ್ ಸಂಸ್ಥೆ ಮತ್ತು ಚಿಟ್‌ಫಂಡ್ ಸಂಸ್ಥೆಗಳನ್ನು ನೋಂದಣಿ ಮಾಡಿಕೊಳ್ಳಲು ಯಾವ ಮಾನದಂಡವನ್ನು ಅಳವಡಿಸಲಾಗಿದೆ ;

(ಆ) ಸರ್ಕಾರದ ಮತ್ತು ಆರ್.ಬಿ.ಐ ನಿಯಮ ಉಲ್ಲಂಘಿಸಿ ಸಾಲ ನೀಡಿದ ಮೈಕ್ರೋ ಫೈನಾನ್ಸ್ ಕಂಪನಿಗಳ ಪರವಾನಗಿ ರದ್ದುಪಡಿಸಲು ಕೈಗೊಂಡಿರುವ ಕ್ರಮಗಳೇನು ;

(ಇ) ಮೈಕ್ರೋ ಫೈನಾನ್ಸ್ ಕಂಪನಿಗಳ ಕಿರುಕುಳಕ್ಕೆ ರಾಜ್ಯದಲ್ಲಿ ಇದುರವರೆಗೂ ಎಷ್ಟು ಜನರು ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ ; ಹಾಗೂ ಮೃತಪಟ್ಟವರಿಗೆ ಸರ್ಕಾರದಿಂದ ರೂಪದಲ್ಲಿ ಎಷ್ಟು ಹಣವನ್ನು ನೀಡಲಾಗಿದೆ ;

(ಈ) ಮೈಕ್ರೋ ಫೈನಾನ್ಸ್ ಕಂಪನಿಗಳು ಕಿರುಕುಳ ನೀಡುತ್ತಿರುವುದರ ಬಗ್ಗೆ ಸಾರ್ವಜನಿಕರಿಂದ ಎಷ್ಟು ದೂರುಗಳು ದಾಖಲಾಗಿದೆ ; ಇವರ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಮೈಕ್ರೋ ಫೈನಾನ್ಸ್ ಕಂಪನಿಗಳ ಮೇಲೆ ಕಟ್ಟು ನಿಟ್ಟಿನ ಕ್ರಮಕೈಗೊಳ್ಳಲು ಹಾಗೂ ಇತ್ತೀಚೆಗೆ ಸರ್ಕಾರ ಹೊರಡಿಸಿರುವ ಆದೇಶವೇನು ? (ಆದೇಶದ ಪ್ರತಿಯನ್ನು ಒದಗಿಸುವುದು)

# ಓಕಳಿಪುರಂನಲ್ಲಿ ನಿರ್ಮಾಣ ಮಾಡಿರುವ ಅಷ್ಟಪಥ ರಸ್ತೆ ಅವೈಜ್ಞಾನಿಕವಾಗಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೧ (೧೪೭೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಓಕಳಿಪುರಂನಿಂದ ರೈಲ್ವೆ ನಿಲ್ದಾಣದವರೆಗೂ ನಿರ್ಮಾಣ ಮಾಡಲಾಗಿರುವ ಅಷ್ಟಪಥ ರಸ್ತೆಯ ಕಾಮಗಾರಿಯು ಎಂದು ಪ್ರಾರಂಭವಾಯಿತು ಹಾಗೂ ಪ್ರಸ್ತುತ ಯಾವ ಹಂತದಲ್ಲಿದೆ ;

(ಆ) ಈ ಕಾಮಗಾರಿಯನ್ನು ಯಾವ ಯಾವ ಗುತ್ತಿಗೆದಾರರಿಗೆ ನೀಡಲಾಗಿತ್ತು ; ಕಾಮಗಾರಿ ಪೂರ್ಣಗೊಳಿಸಲು ನೀಡಲಾದ ಕಾಲಾವಧಿ ಎಷ್ಟು ; ನೀಡಲಾಗಿರುವ ಕಾಲಾವಧಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿದ್ದಾರೆಯೇ ;

(ಇ) ಸರ್ಕಾರದ ನಿಯಮದಡಿ ಗುತ್ತಿಗೆದಾರರ ಮೇಲೆ ಯಾವ ಕ್ರಮ ತೆಗೆದುಕೊಳ್ಳಲಾಗುತ್ತದೆ ;

(ಈ) ಈ ಯೋಜನೆಗೆ ಪ್ರಾರಂಭದಲ್ಲಿ ಎಷ್ಟು ಕೋಟಿ ರೂಪಾಯಿಗೆ ಟೆಂಡರ್‌ಗೆ ಅನುಮತಿ ನೀಡಲಾಗಿದೆ ; ತದನಂತರ ಹೆಚ್ಚುವರಿಯಾಗಿ ಬಿಡುಗಡೆಯಾಗಿರುವ ಅನುದಾನದ ಮೊತ್ತವೆಷ್ಟು ; (ಕಾರಣಗಳೊಂದಿಗೆ ಪೂರ್ಣ ವಿವರ ಒದಗಿಸುವುದು)

(ಉ) ಈ ಯೋಜನೆಯು ಅವೈಜ್ಞಾನಿಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಒಂದು ಕಡೆಯಿಂದ ರಸ್ತೆ ದೊಡ್ಡದಾಗಿದ್ದು. ತದನಂತರ ರಸ್ತೆ ಕಿರಿದಾಗಿರುವುದರಿಂದ. ಟ್ರಾಫಿಕ್ ಜಾಮ್

ಆಗುತ್ತಿರುವುದು ಹಾಗೂ ಮಳೆಯ ನೀರಿನಿಂದ ಸಂಚಾರ ಮಾಡಲು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ, ಇದನ್ನು ಸರಿಪಡಿಸಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

## ಶಾಖಾಧಿಕಾರಿ ಹುದ್ದೆಗಳನ್ನು ಸಚಿವಾಲಯದಲ್ಲಿ ಕಡಿತಗೊಳಿಸುತ್ತಿರುವ ಕುರಿತು

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೨ (೧೪೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದ ವೃಂದ ಮತ್ತು ನೇಮಕಾತಿ ನಿಯಮಗಳು, ೧೯೭೨ ಮತ್ತು ೨೦೧೯ರನ್ವಯ ಶಾಖಾಧಿಕಾರಿ ವೃಂದದಲ್ಲಿ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ; ಹಾಗೂ ದಿನಾಂಕ:೦೧.೦೧.೧೯೭೨ ರಿಂದ ೦೧.೦೨.೨೦೨೫ ರವರೆವಿಗೂ ಸಚಿವಾಲಯದ ಶಾಖಾಧಿಕಾರಿ ವೃಂದದಲ್ಲಿ ಸೃಜನೆ ಮಾಡಿರುವ ಹಾಗೂ ರದ್ದು ಮಾಡಿರುವ ಎಲ್ಲಾ ಹುದ್ದೆಗಳ ಸಂಖ್ಯೆ ಎಷ್ಟು ; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಶಾಖಾಧಿಕಾರಿ ವೃಂದದಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ; (ಸ್ಥಳ ನಿರೀಕ್ಷಣೆ ನಿಯೋಜನೆ ಹಾಗೂ ಅನ್ಯ ಕರ್ತವ್ಯದ ಮೇಲೆ ಸೇವೆ ಸಲ್ಲಿಸಿರುವ ಸಚಿವಾಲಯದ ಶಾಖಾಧಿಕಾರಿಗಳ ವಿವರದೊಂದಿಗೆ ಮಾಹಿತಿ ಒದಗಿಸುವುದು) ಸೃಳೀಯ ವೃಂದ ಮತ್ತು ಕಲ್ಯಾಣ ಕರ್ನಾಟಕ ಶಾಖಾಧಿಕಾರಿ ವೃಂದದ ಅಧಿಕಾರಿಗಳ ಬಗ್ಗೆ ಪ್ರತ್ಯೇಕವಾಗಿ ಮಾಹಿತಿಯನ್ನು ನೀಡುವುದು ;

(ಇ) ಆರ್ಥಿಕ ಇಲಾಖೆಯು ಹಿಂಬರಹ ಸಂಖ್ಯೆ:ಆಇ/೪೪೪೦/ ವೆಚ್ಚ–೧೨/೨೦೨೪, ದಿನಾಂಕ: ೩೦.೦೯.೨೦೨೪ರನ್ವಯ ಆರ್ಥಿಕ ಇಲಾಖೆಯು ಸರ್ಕಾರದ ಸಚಿವಾಲಯದಲ್ಲಿ ೧೨ ಶಾಖಾಧಿಕಾರಿ ಹುದ್ದೆಗಳನ್ನು ಯಾವ ಆಧಾರದ ಮೇಲೆ ಕಡಿಮೆಗೊಳಿಸಲು ಸಹಮತಿಯನ್ನು ನೀಡಿದೆ ; (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಆರ್ಥಿಕ ಇಲಾಖೆಗೆ ಸಲ್ಲಿಸಿರುವ ಪ್ರಸ್ತಾವನೆಯ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಈ) ಸಚಿವಾಲಯದಲ್ಲಿ ಇಲಾಖಾವಾರು ಹಾಗೂ ಶಾಖಾವಾರು ಮಂಜೂರಾದ ಶಾಖಾಧಿಕಾರಿ ವೃಂದದ ಹುದ್ದೆಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ನೀಡುವುದು ? (ಹುದ್ದೆ ಸೃಜನೆಯಾದ ಆದೇಶದೊಂದಿಗೆ ಮಾಹಿತಿ ನೀಡುವುದು)

## ಹೆಚ್ಚುವರಿ ಅಡ್ವೋಕೇಟ್ ಜನರಲ್‌ಗಳು ಮತ್ತು ಸರ್ಕಾರಿ ವಕೀಲರನ್ನು ನೇಮಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೩ (೧೩೮೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಹೆಚ್ಚುವರಿ ಅಡ್ವೋಕೇಟ್ ಜನರಲ್‌ಗಳು, ಸರ್ಕಾರಿ ವಕೀಲರು ಮತ್ತು ವಕೀಲರನ್ನು ನೇಮಿಸಲಾಗುತ್ತದೆ ;

(ಆ) ರಾಜ್ಯದಲ್ಲಿ ಹೆಚ್ಚುವರಿ ಅಡ್ವೋಕೇಟ್ ಜನರಲ್‌ಗಳು ಮತ್ತು ಸರ್ಕಾರಿ ವಕೀಲರು/ವಕೀಲರ ನೇಮಕಾತಿಗೆ ಯಾವುದೇ ಮಿತಿಯನ್ನು ನಿಗದಿಪಡಿಸಲಾಗಿದೆಯೇ ;

(ಇ) ಹೆಚ್ಚುವರಿ ಅಡ್ವೋಕೇಟ್ ಜನರಲ್‌ಗಳು ಮತ್ತು ಇತರ ಸರ್ಕಾರಿ ವಕೀಲರು/ವಕೀಲರನ್ನು ನೇಮಿಸಲು ಮಾನದಂಡ ಮತ್ತು ಅರ್ಹತೆ ಏನು ; (ವಿವರ ನೀಡುವುದು)

(ಈ) ವಿವಿಧ ನ್ಯಾಯಾಲಯಗಳಲ್ಲಿನ ಮೊಕದ್ದಮೆಗಳಿಗೆ ಸರ್ಕಾರವು ಖರ್ಚು ಮಾಡಿರುವ ಹಣ ಎಷ್ಟು? (ಕಳೆದ ಮೂರು ವರ್ಷಗಳ ಮಾಹಿತಿಯನ್ನು ವರ್ಷವಾರು ವಿವರ ನೀಡುವುದು)

## ಕೆ.ಪಿ.ಎಸ್.ಸಿ ಆಯ್ಕೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೪ (೧೩೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಎಸ್.ಸಿ ನೇಮಕಾತಿಯ ಅಸಮರ್ಥತೆಯಿಂದಾಗಿ ವಿವಿಧ ನ್ಯಾಯಾಲಯಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳು ದಾಖಲಾಗಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಕಳೆದ ಐದು ವರ್ಷಗಳಲ್ಲಿ ವಿವಿಧ ನ್ಯಾಯಾಲಯಗಳಲ್ಲಿ ಕೆ.ಪಿ.ಎಸ್.ಸಿ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿವೆ ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ೦೫ ವರ್ಷಗಳಲ್ಲಿ ಇದಕ್ಕಾಗಿ ಕೆ.ಪಿ.ಎಸ್.ಸಿ., ಎಷ್ಟು ಹಣ ಖರ್ಚು ಮಾಡಿದೆ ; (ವರ್ಷವಾರು ವಿವರ ನೀಡುವುದು)

(ಈ) ತನ್ನ ಕಾರ್ಯನಿರ್ವಹಣೆಯನ್ನು ಸುಧಾರಿಸಲು ಮತ್ತು ರಾಜ್ಯ ಖಜಾನೆಯ ಮೇಲಿನ ಈ ಹೊರೆಯನ್ನು ತಡೆಯಲು ಕೆ.ಪಿ.ಎಸ್.ಸಿ. ಯಾವ ಕ್ರಮ ತೆಗೆದುಕೊಂಡಿದೆ ? (ವಿವರ ನೀಡುವುದು)

## ನೈತಿಕ ಪೊಲೀಸ್‌ಗಿರಿಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೫ (೧೩೯೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೈತಿಕ ಪೊಲೀಸ್‌ಗಿರಿ ನೆಪದಲ್ಲಿ ಸಾರ್ವಜನಿಕರ ಮೇಲೆ ನಡೆಯುತ್ತಿರುವ ದಾಳಿಗಳಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯ ಯುವಕರು ಜಿಲ್ಲೆಯಲ್ಲಿ ವೃತ್ತಿ ಜೀವನ ನಡೆಸಲು ಆಸಕ್ತಿ ಕಳೆದುಕೊಳ್ಳುತ್ತಿದ್ದಾರೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೈತಿಕ ಪೊಲೀಸ್‌ಗಿರಿ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನೈತಿಕ ಪೊಲೀಸ್‌ಗಿರಿಗಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಆರೋಪ ಪಟ್ಟಿಗಳನ್ನು ಸಲ್ಲಿಸಲಾಗಿದೆ ;

(ಈ) ಸಾರ್ವಜನಿಕರು ಕಾನೂನನ್ನು ಕೈಗೆತ್ತಿಕೊಳ್ಳದಂತೆ ತಡೆಯಲು ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೬ (೧೩೯೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸೈಬರ್ ಅಪರಾಧಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಈ ಬಗ್ಗೆ ಹತ್ತೋಟಿಗೆ ತರಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ಮಂಗಳೂರು ನಗರದಲ್ಲಿ ಪೊಲೀಸ್ ವಸತಿ ಗೃಹಗಳನ್ನು ಎಷ್ಟು ಮಂದಿಗೆ ವಿತರಿಸಲಾಗಿದೆ ; ಎಷ್ಟು ವಿತರಿಸಲು ಬಾಕಿ ಉಳಿದಿದೆ ; (ವಿವರ ನೀಡುವುದು)

(ಇ) ಮಂಗಳೂರು ಕಮಿಷನರೇಟ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನಗರ ಪೊಲೀಸ್ ಠಾಣೆ ಇನ್ನೂ ಖಾಸಗಿ ಮನೆಯಲ್ಲಿ ಕಾರ್ಯನಿರ್ವಹಿಸುತ್ತಿದೆಯೇ ; ಸ್ವಂತ ಕಟ್ಟಡ ಒತ್ತಡಕ್ಕೆ ಪ್ರಸ್ತಾವನೆ ಸಲ್ಲಿಸದೇ ಇರಲು ಕಾರಣಗಳೇನು ; ಈ ಬಗ್ಗೆ ನಿರ್ಲಕ್ಷ್ಯ ವಹಿಸುತ್ತಿರುವುದು ಸರಿಯೇ ;

(ಈ) ಮಂಗಳೂರು ನಗರದ ನಾಗೂರಿ ಪೊಲೀಸ್ ಠಾಣೆಯು ಖಾಸಗಿ ಮನೆಯಲ್ಲಿ ಕಾರ್ಯನಿರ್ವಹಿಸುತ್ತಿರಲು ಕಾರಣಗಳೇನು ;

(ಉ) ಮಂಗಳೂರು ಕಮಿಷನರೇಟ್ ವ್ಯಾಪ್ತಿಯಲ್ಲಿ ಎಷ್ಟು ಪೊಲೀಸ್ ಹೆಡ್‌ಕಾನ್‌ಸ್ಟೇಬಲ್ ಮತ್ತು ಸಿಎಸ್‌ಐ ಹುದ್ದೆಗಳು ಖಾಲಿ ಇದೆ ? (ಠಾಣೆವಾರು ವಿವರ ನೀಡುವುದು)

## ಬಿ.ಬಿ.ಎಂ.ಪಿಯಲ್ಲಿ ತೆರಿಗೆ ಬಾಕಿ ಇರುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೭ (೧೪೩೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿ.ಬಿ.ಎಂ.ಪಿಯ ೮ ವಲಯಗಳಿಂದ ತೆರಿಗೆ ಬಾಕಿ ಉಳಿಸಿಕೊಂಡಿರುವ ಸುಸ್ತಿದಾರರ ಸಂಖ್ಯೆ ಎಷ್ಟು ; ಎಷ್ಟು ತೆರಿಗೆ ಬಾಕಿ ಉಳಿಸಿಕೊಂಡಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಾಕಿ ಉಳಿಸಿಕೊಂಡಿರುವ ತೆರಿಗೆಯನ್ನು ವಸೂಲು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಹಾಗೆಯೇ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿರುವ ಸಾರ್ವಜನಿಕ ಆಸ್ತಿಗಳಿಗೆ ಹೊಸದಾಗಿ ಇ–ಖಾತೆ ಮಾಡಲು ಮತ್ತು ಖಾತೆ ವರ್ಗಾವಣೆ ಮಾಡಲು ಇಲ್ಲಿಯ ತನಕ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಂದಿರುವ ಅರ್ಜಿಗಳಲ್ಲಿ ಖಾತೆ ಮಾಡಿರುವ/ಖಾತೆ ವರ್ಗಾವಣೆ ಮಾಡಿರುವ ಸಂಖ್ಯೆ ಎಷ್ಟು ;

(ಈ) ಬಾಕಿ ಇರುವ ಪ್ರಕರಣಗಳನ್ನು ಎಷ್ಟು ದಿನದೊಳಗಾಗಿ ಪೂರ್ಣಗೊಳಿಸಲಾಗುವುದು ? (ವಲಯವಾರು, ವ್ಯಾಪ್ತಿ ಒಳಗೊಂಡಂತೆ ಸಂಪೂರ್ಣ ಅಂಕಿ–ಅಂಶಗಳ ಮಾಹಿತಿ ಒದಗಿಸುವುದು)

## ಎತ್ತಿನಹೊಳೆ ಯೋಜನೆಯಿಂದ ಕುಡಿಯುವ ನೀರಿನ ಲಭ್ಯತೆ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೮ (೧೪೩೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗಿದೆ ಹಾಗೂ ಈ ಯೋಜನೆಯ ಒಟ್ಟು ಮೊತ್ತವೆಷ್ಟು ; (ವಿವರವಾದ ಮಾಹಿತಿ ಒದಗಿಸುವುದು)

(ಆ) ಇಲ್ಲಿಯ ತನಕ ಖರ್ಚು ಮಾಡಿ ಕೈಗೊಂಡಿರುವ ಅಥವಾ ಪೂರ್ಣಗೊಳಿಸಿರುವ ಕಾಮಗಾರಿಗಳಾವುವು ಮತ್ತು ಆ ಕಾಮಗಾರಿಗಳಿಗೆ ಖರ್ಚು ಮಾಡಿರುವ ಮೊತ್ತವೆಷ್ಟು ; (ವಿವರ ಒದಗಿಸುವುದು)

(ಇ) ಈ ಯೋಜನೆಯನ್ನು ಸಂಪೂರ್ಣವಾಗಿ ಪೂರ್ಣಗೊಳಿಸಲು ಇನ್ನು ಎಷ್ಟು ಸಮಯ ಬೇಕಾಗಬಹುದು ಮತ್ತು ಬಾಕಿ ಇರುವ ಕಾಮಗಾರಿಗಳಾವುವು ; (ವಿವರ ನೀಡುವುದು)

(ಈ) ಈ ಯೋಜನೆಯ ಪ್ರಯೋಜನ ಪಡೆಯುವ ಜಿಲ್ಲೆಗಳು ಮತ್ತು ತಾಲ್ಲೂಕುಗಳು ಯಾವುವು ; ಯಾವ ಯಾವ ಜಿಲ್ಲೆಗಳಿಗೆ/ ತಾಲ್ಲೂಕುಗಳಿಗೆ/ಗ್ರಾಮಗಳಿಗೆ ಎಷ್ಟೆಷ್ಟು ಪ್ರಮಾಣದ ನೀರನ್ನು ಹರಿಸಲಾಗುವುದು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) ಸಮಗ್ರ ಯೋಜನಾ ವರದಿಯೊಂದಿಗೆ ಈ ಯೋಜನೆಗೆ ಪ್ರಾರಂಭದಲ್ಲಿ ನಿಗದಿಪಡಿಸಿದ ಮೊತ್ತವೆಷ್ಟು ; ಹಾಲಿ ಹೆಚ್ಚುವರಿಯಾಗಿ ಖರ್ಚಾಗಿರುವ ಮೊತ್ತವೆಷ್ಟು ; (ಮಾಹಿತಿ ಒದಗಿಸುವುದು)

(ಊ) ಈ ಯೋಜನೆ ಪೂರ್ಣಗೊಂಡಲ್ಲಿ ಲಭ್ಯವಾಗುವ ನೀರಿನ ಪ್ರಮಾಣವೆಷ್ಟು ? (ವಿವರ ನೀಡುವುದು)

## ಮಾಗಡಿ ಮುಖ್ಯರಸ್ತೆ ಸಂಪರ್ಕಿಸುವ ಕರಿಹೊಬನಹಳ್ಳಿ ಇಂದಿರಾನಗರ ಗ್ರಾಮದ ಬಳಿ ಟ್ರಾಫಿಕ್ ಸಿಗ್ನಲ್ ದೀಪ ಅಳವಡಿಸುವ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೯ (೧೪೪೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಪೀಣ್ಯ ಕೈಗಾರಿಕಾ ಪ್ರದೇಶ ೮ನೇ ಮೈಲಿ ಮತ್ತು ಮಾಗಡಿ ಮುಖ್ಯ ರಸ್ತೆ ಸಂಪರ್ಕಿಸುವ ಕರಿಹೊಬನಹಳ್ಳಿ ಇಂದಿರಾನಗರ ಗ್ರಾಮದ ಗಣೇಶ ದೇವಸ್ಥಾನದ ಬಳಿ ಪ್ರತಿ ದಿನವೂ ಬೆಳಿಗ್ಗೆ ಮತ್ತು ಸಂಜೆಯ ಸಮಯದಲ್ಲಿ ವಿಪರೀತ ಟ್ರಾಫಿಕ್ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆವಿಗೂ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಸದರಿ ಜಂಕ್ಷನ್‌ನಲ್ಲಿ ಬೆಳಿಗ್ಗೆ ಶಾಲೆಗೆ ಹೋಗುವ ವಿದ್ಯಾರ್ಥಿಗಳು, ಕೆಲಸಗಳಿಗೆ ಹೋಗುವ ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತಿದ್ದು, ಈ ಜಂಕ್ಷನ್‌ಗೆ ಹೊಂದಿಕೊಂಡಂತೆ ೩–೪ ಶೈಕ್ಷಣಿಕ ಸಂಸ್ಥೆಗಳಿದ್ದು, ಅಲ್ಲಿನ ವಿದ್ಯಾರ್ಥಿಗಳಿಗೆ ರಸ್ತೆ ದಾಟಲು ಸಹ ಆಗದೆ ಸಾವಿರಾರು ಗೂಡ್ಸ್ ವಾಹನಗಳು ಖಾಸಗಿ ವಾಹನಗಳು, ಬಿ.ಎಂ.ಟಿ.ಸಿ ಬಸ್‌ಗಳು ಸಂಚರಿಸುತ್ತಿದ್ದು, ಟ್ರಾಫಿಕ್ ಸಿಗ್ನಲ್ ದೀಪಗಳನ್ನು ಹಾಕಲು ಸರ್ಕಾರ ಕ್ರಮವಹಿಸುವುದೇ ? (ಮಾಹಿತಿ ನೀಡುವುದು)

## ಆರ್.ಆರ್. ನಗರ ವಲಯಕ್ಕೆ ಸೇರಿದ ವಾರ್ಡ್ ನಂ.೨೬ರಲ್ಲಿ ಬರುವ ತಿಪ್ಪೇನಹಳ್ಳಿ ಪಾರ್ಕ್ ಅಭಿವೃದ್ಧಿ ಪಡಿಸುವ ಕುರಿತು

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೦ (೧೪೭೨) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಆರ್.ಆರ್ ನಗರ ವಲಯಕ್ಕೆ ಸೇರಿದ ವಾರ್ಡ್ ನಂ.೨೬ರಲ್ಲಿ ಬರುವ ತಿಪ್ಪೇನಹಳ್ಳಿ ಕಾಲ ಭೈರವೇಶ್ವರಸ್ವಾಮಿ ದೇವಸ್ಥಾನದ ಪಕ್ಕದಲ್ಲಿ ಪಾರ್ಕ್ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಪಾರ್ಕ್ ಅನ್ನು ಅಭಿವೃದ್ಧಿ ಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ತಿಪ್ಪೇನಹಳ್ಳಿ, ಕರಿಯೋಬನಹಳ್ಳಿ ದೊಡ್ಡಬಿದರಕಲ್ಲು, ಗಂಗೊಂಡನಹಳ್ಳಿ ಮತ್ತು ಚೆನ್ನ ನಾಯಕನ ಪಾಳ್ಯದ ನಿವಾಸಿಗಳು ಈ ಪಾರ್ಕಿನಲ್ಲಿ ಬೆಳಿಗ್ಗೆ ಸಂಜೆ ವಾಯು ವಿಹಾರ, ವ್ಯಾಯಾಮ ಮಾಡುವುದರ ಜೊತೆಗೆ ಆ ಗ್ರಾಮಗಳ ಮಕ್ಕಳಗಳು ಸಹ ದಿನನಿತ್ಯ ಆಟೋಪಚಾರಗಳನ್ನು ಆಡಲು ಸರಿಯಾದ ರೀತಿ ಸಲಕರಣೆಗಳು ಹಾಗೂ ಯಾವುದೇ ಮೂಲ ಸೌಕರ್ಯಗಳು ಇಲ್ಲದಿರುವುದು ಸರ್ಕಾರ ಗಮನಿಸಿದೆಯೇ ; (ವಿವರ ನೀಡುವುದು)

(ಈ) ಸದರಿ ಪಾರ್ಕ್‌ನಲ್ಲಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ತೆಗೆದುಕೊಳ್ಳವುದೇ ?

## ಪಿ.ಎಫ್.ಐ ಮತ್ತು ಎಸ್.ಡಿ.ಎಫ್.ಐ ಕಾರ್ಯಕರ್ತರ ಕೇಸ್‌ಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೧ (೧೪೫೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಎಷ್ಟು ಪಿ.ಎಫ್.ಐ ಮತ್ತು ಎಸ್.ಡಿ.ಎಫ್.ಐ ಕಾರ್ಯಕರ್ತರ ಮೇಲಿನ ಕೇಸ್‌ಗಳನ್ನು ಹಿಂಪಡೆಯಲಾಗಿದೆ ; ಈ ಕೇಸ್‌ಗಳನ್ನು ಹಿಂಪಡೆಯಲು ಕಾರಣಗಳೇನು ;

(ಆ) ದಕ್ಷಿಣ ಕನ್ನಡ–ಉಡುಪಿ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಎಷ್ಟು ಪಿ.ಎಫ್.ಐ ಮತ್ತು ಎಸ್.ಡಿ.ಎಫ್.ಐ ಕಾರ್ಯಕರ್ತರ ಮೇಲಿನ ಕೇಸ್‌ಗಳನ್ನು ಹಿಂಪಡೆಯಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಕೋಮು ಗಲಭೆ ಪ್ರಕರಣಗಳಾಗಿವೆ ; ಪ್ರಕರಣಗಳು ಯಾವುವು ; ಎಷ್ಟು ಎಫ್.ಐ.ಆರ್.ಗಳನ್ನು ದಾಖಲು ಮಾಡಲಾಗಿದೆ ; (ವಿವರ ನೀಡುವುದು)

(ಈ) ಮೈಸೂರಿನ ಉದಯ ಗಿರಿ ಕೋಮು ಗಲಭೆ ಪ್ರಕರಣದಲ್ಲಿ ಈವರೆಗೆ ಒಟ್ಟು ಎಷ್ಟು ಜನರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ; ಎಷ್ಟು ಜನರನ್ನು ಬಂಧಿಸಲಾಗಿದೆ ?

## ಮದ್ಯದ ಗುಣಮಟ್ಟದ ಕುರಿತು

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೨ (೧೪೫೫) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮದ್ಯದ ಬೆಲೆ ಏರಿಕೆ ಮಾಡಿದ ಪರಿಣಾಮ ಕಡಿಮೆ ಬೆಲೆಯ ಮದ್ಯಗಳ ಗುಣಮಟ್ಟ ತೀರಾ ಕಳಪೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದಾಗಿ ಬಡ ಮತ್ತು ಮಧ್ಯಮ ವರ್ಗದ ಜನರ ಆರೋಗ್ಯದ ಮೇಲೆ ಪರಿಣಾಮ ಬೀರುವುದಿಲ್ಲವೇ ;

(ಆ) ರಾಜ್ಯದಲ್ಲಿ ಸರಬರಾಜು ಆಗುತ್ತಿರುವ ಮದ್ಯದ ಗುಣಮಟ್ಟವನ್ನು ಕಾಪಾಡಿಕೊಳ್ಳಲು ಸರ್ಕಾರ ಏನು ಕ್ರಮವಹಿಸಿದೆ ; ಕಳಪೆ ಗುಣಮಟ್ಟದ ಮದ್ಯ ಸರಬರಾಜು ಮಾಡಿರುವ ಪ್ರಕರಣಗಳೆಷ್ಟು ; (ವಿವರ ನೀಡುವುದು) ತಪ್ಪಿತಸ್ಥರ ಮೇಲೆ ಏನು ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ ೨ ವರ್ಷಗಳಲ್ಲಿ ಹೊಸದಾಗಿ ಎಷ್ಟು ಮದ್ಯದ ಅಂಗಡಿಗಳಿಗೆ ಪರವಾನಗಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ದಕ್ಷಿಣ ಕನ್ನಡ–ಉಡುಪಿ ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಹೊಸದಾಗಿ ಎಷ್ಟು ಮದ್ಯದ ಅಂಗಡಿಗಳಿಗೆ ಪರವಾನಗಿ ನೀಡಲಾಗಿದೆ ? (ಪರವಾನಗಿ ಪಡೆದವರ ತಾಲ್ಲೂಕುವಾರು ವಿವರ ನೀಡುವುದು)

## ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೩ (೧೪೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನವರಿ ೨೦೨೫ರ ಅಂತ್ಯಕ್ಕೆ ಇದ್ದಂತೆ ಸರ್ಕಾರದ ವಿವಿಧ ಇಲಾಖೆ/ ನಿಗಮ/ಮಂಡಳಿಗಳಲ್ಲಿ ಮಂಜೂರಾತಿಯಾದ, ಕಾರ್ಯನಿರತ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೪–೨೫ನೇ ಆರ್ಥಿಕ ವರ್ಷ ಒಳಗೊಂಡಂತೆ ಕಳೆದ ೫ ವರ್ಷಗಳಲ್ಲಿ (೨೦೨೦–೨೧ ೨೦೨೧–೨೨, ೨೦೨೨–೨೩, ೨೦೨೩–೨೪, ೨೦೨೪–೨೫ (ಡಿಸೆಂಬರ್–೨೦೨೪ವರೆಗೆ) ಅಕಾಲಿಕವಾಗಿ ಮೃತರಾದ ಸರ್ಕಾರಿ ನೌಕರರೆಷ್ಟು ; (ಇಲಾಖಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ೨೦೨೪–೨೫ನೇ ಆರ್ಥಿಕ ವರ್ಷ ಒಳಗೊಂಡಂತೆ ಕಳೆದ ೫ ವರ್ಷಗಳಲ್ಲಿ (೨೦೨೦–೨೧, ೨೦೨೧–೨೨, ೨೦೨೨–೨೩, ೨೦೨೩–೨೪, ೨೦೨೪–೨೫ (ಡಿಸೆಂಬರ್–೨೦೨೪ರವರೆಗೆ) ಮೃತ ಸರ್ಕಾರಿ ನೌಕರರ

ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದಲ್ಲಿ ನೇಮಕಗೊಂಡ ನೌಕರರ ಸಂಖ್ಯೆ ಎಷ್ಟು ; (ಇಲಾಖಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿ ಹುದ್ದೆಗಳಿಂದ ದಿನನಿತ್ಯದ ಆಡಳಿತಾತ್ಮಕ ಕಾರ್ಯದಲ್ಲಿ ಸಮಸ್ಯೆ ಆಗುತ್ತಿಲ್ಲವೇ, ಖಾಲಿ ಹುದ್ದೆಗಳ ನೇಮಕಾತಿಗಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು ?

## ನ್ಯಾಯಾಲಯಗಳಲ್ಲಿ ದಾಖಲಾಗುವ ಖಾಸಗಿ ದೂರುಗಳ ಕುರಿತು

**ಶ್ರೀ ಕೇಶವ ಪ್ರಸಾದ್. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೪ (೧೪೭೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಯಾಲಯಗಳಲ್ಲಿ ದಾಖಲಾಗುವ ಖಾಸಗಿ ದೂರಿಗೆ ಸಂಬಂಧಪಟ್ಟಂತೆ ನ್ಯಾಯಾಲಯದಿಂದ ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ದೂರಿನ ಬಗ್ಗೆ ಪರಿಶೀಲನೆ/ತನಿಖೆ ನಡೆಸಿ ವರದಿ ಅಥವಾ ಚಾರ್ಜ್‌ಶೀಟ್ ಸಲ್ಲಿಸಲು ಸೂಚಿಸಲಾಗುತ್ತಿದ್ದು, ಆ ಸಂದರ್ಭದಲ್ಲಿ ಸಂಬಂಧಪಟ್ಟ ಪೊಲೀಸರು ಪಾಲಿಸಬೇಕಾದ ನಿಯಮಗಳೇನು ;

(ಆ) ಹಲವು ಪೊಲೀಸ್ ಠಾಣೆಗಳು ನಿಯಮಗಳನ್ನು ಪಾಲಿಸದೆ, ಯಾರ ವಿರುದ್ಧ ದೂರು ದಾಖಲಾಗಿರುತ್ತದೆಯೋ ಅವರನ್ನು ಕರೆಸಿ ಅವರಿಂದ ದಾಖಲೆಗಳನ್ನು ಪಡೆಯದೆ ಅವರ ಹೇಳಿಕೆಯನ್ನು ದಾಖಲಿಸಿಕೊಳ್ಳದೆ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸುತ್ತಿದ್ದು, ಈ ಬಗ್ಗೆ ಸರ್ಕಾರ ಪೊಲೀಸರಿಗೆ ಅಗತ್ಯ ಮಾರ್ಗಸೂಚಿಗಳನ್ನು ಪಾಲಿಸುವಂತೆ ಸೂಚನೆ ನೀಡುವುದೇ ;

(ಇ) ಬೆಂಗಳೂರು ನಗರದಲ್ಲಿ ಪೊಲೀಸ್ ಉಪ ಆಯುಕ್ತರು, ಸೆಂಟ್ರಲ್ ವಿಭಾಗ ಇವರ ವ್ಯಾಪ್ತಿಯಲ್ಲಿ ಬರುವ ಪೊಲೀಸ್ ಠಾಣೆಗಳಿಗೆ ಈ ರೀತಿಯ ಖಾಸಗಿ ದೂರುಗಳಿಗೆ ಸಂಬಂಧಪಟ್ಟಂತೆ ನ್ಯಾಯಾಲಯದಿಂದ ಬಂದಿರುವ ಪ್ರಕರಣಗಳು ಎಷ್ಟು ; ಈ ಪೈಕಿ ಎಷ್ಟು ಪ್ರಕರಣಗಳಲ್ಲಿ ಪೊಲೀಸರು ಸಂಬಂಧಪಟ್ಟ ವ್ಯಕ್ತಿಗಳಿಂದ ಹೇಳಿಕೆ ಪಡೆಯದೆ, ದಾಖಲೆ ಪರಿಶೀಲಿಸದೆ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿರುತ್ತಾರೆ ; (ಪೊಲೀಸ್ ಠಾಣೆವಾರು ವಿವರ ನೀಡುವುದು)

(ಈ) ಈ ರೀತಿಯ ವಿಷಯಗಳಲ್ಲಿ ತಮ್ಮ ಕರ್ತವ್ಯವನ್ನು ಸರಿಯಾಗಿ ನಿರ್ವಹಿಸದ ಪೊಲೀಸರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸರ್ಕಾರದ ವಿವಿಧ ಇಲಾಖೆಗಳಲ್ಲಿ ಮಂಜೂರಾದ ಮತ್ತು ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆಗಳ ಬಗ್ಗೆ

**ಶ್ರೀ ಕೇಶವ ಪ್ರಸಾದ್. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೫ (೧೪೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನವರಿ–೨೦೨೫ರಲ್ಲಿದ್ದಂತೆ ಸರ್ಕಾರದ ವಿವಿಧ ಇಲಾಖೆ/ನಿಗಮ/ ಮಂಡಳಿಗಳಲ್ಲಿ ಮಂಜೂರಾತಿಯಾದ, ಕಾರ್ಯನಿರತ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೪–೨೫ನೇ ಆರ್ಥಿಕ ವರ್ಷ ಒಳಗೊಂಡಂತೆ ಕಳೆದ ಐದು ವರ್ಷಗಳಲ್ಲಿ ೨೦೨೦–೨೧, ೨೦೨೧–೨೨, ೨೦೨೨–೨೩, ೨೦೨೩–೨೪ ಮತ್ತು ೨೦೨೪–೨೫

(ಡಿಸೆಂಬರ್‌–೨೦೨೪ರವರೆಗೆ) ಅಕಾಲಿಕವಾಗಿ ಮೃತರಾದ ಸರ್ಕಾರಿ ನೌಕರರೆಷ್ಟು; (ಇಲಾಖಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ೨೦೨೪–೨೫ನೇ ಆರ್ಥಿಕ ವರ್ಷ ಒಳಗೊಂಡಂತೆ ಕಳೆದ ಐದು ವರ್ಷಗಳಲ್ಲಿ ೨೦೨೦–೨೧, ೨೦೨೧–೨೨, ೨೦೨೨–೨೩, ೨೦೨೩–೨೪ ಮತ್ತು ೨೦೨೪–೨೫ (ಡಿಸೆಂಬರ್‌–೨೦೨೪ರವರೆಗೆ) ಮೃತ ಸರ್ಕಾರಿ ನೌಕರರ ಕುಟುಂಬದ ಸದಸ್ಯರಿಗೆ ಅನುಕಂಪದ ಆಧಾರದಲ್ಲಿ ನೇಮಕಗೊಂಡ ನೌಕರರ ಸಂಖ್ಯೆ ಎಷ್ಟು ; (ಇಲಾಖಾವಾರು, ವೃಂದವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಖಾಲಿ ಹುದ್ದೆಗಳಿಂದ ದಿನನಿತ್ಯ ಆಡಳಿತಾತ್ಮಕವಾಗಿ ಸಮಸ್ಯೆ ಆಗುತ್ತಿಲ್ಲವೇ ; ಖಾಲಿ ಹುದ್ದೆಗಳ ನೇಮಕಾತಿಗಾಗಿ ಸರ್ಕಾರವು ಕೈಗೊಂಡ ಕ್ರಮಗಳೇನು ?

## ರಾಜ್ಯದ ಆರ್ಥಿಕ ಸ್ಥಿತಿಯ ಸಮಗ್ರ ಮಾಹಿತಿ ಕುರಿತು

**ಶ್ರೀ ಕೇಶವ ಪ್ರಸಾದ್. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೬ (೧೪೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಆರ್ಥಿಕ ಸ್ಥಿತಿಯ ಸಮಗ್ರ ೨೦೨೩–೨೪ ಮತ್ತು ೨೦೨೪–೨೫ನೇ ಸಾಲಿನ ಆಯವ್ಯಯದ ಮೊತ್ತ ಎಷ್ಟು ; ಎಷ್ಟು ತೆರಿಗೆ ಸಂಗ್ರಹ ಗುರಿ ಹೊಂದಲಾಗಿತ್ತು ; ಸಂಗ್ರಹವಾಗಿರುವ ತೆರಿಗೆ ಎಷ್ಟು ; (ವರ್ಷವಾರು ಸಮಗ್ರ ವಿವರ ನೀಡುವುದು)

(ಆ) ಸದರಿ ವರ್ಷಗಳಲ್ಲಿ ಆಯುವ್ಯಯದಲ್ಲಿ ಇಲಾಖೆಗಳಿಗೆ/ ಯೋಜನೆಗಳಿಗೆ ಘೋಷಣೆ ಮಾಡಿದ ಮತ್ತು ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ವಿವರವನ್ನು ವರ್ಷವಾರು ಒದಗಿಸುವುದು)

(ಇ) ಆಯವ್ಯಯದಲ್ಲಿ ಘೋಷಿಸಿದ ಅನುದಾನ ಬಿಡುಗಡೆ ಆಗದೆ ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಭಿವೃದ್ಧಿ ಕಾರ್ಯಗಳಿಗೆ ಅಗತ್ಯ ಅನುದಾನವನ್ನು ಬಿಡುಗಡೆ ಮಾಡಲಾಗುವುದೇ ;

(ಈ) ಗ್ಯಾರಂಟಿ ಯೋಜನೆ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪದಿರುವುದು ನಿಜವೇ ; (ವಿವರವನ್ನು ವರ್ಷವಾರು/ಇಲಾಖಾವಾರು ಒದಗಿಸುವುದು)

(ಉ) ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆ ಮಾಡಿದ ಅನುದಾನದಲ್ಲಿ ಪರಿಶಿಷ್ಟ ಜಾತಿ/ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿದ್ದ ಮೊತ್ತ ಎಷ್ಟು ; ಅನುದಾನವನ್ನು ಅನ್ಯ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗಿದೆ ; ಈ ರೀತಿ ಬಳಕೆ ಮಾಡಿಕೊಳ್ಳಲು ನಿಯಮಾವಳಿಯಲ್ಲಿ ಅವಕಾಶ ಇಲ್ಲದಿದ್ದರೂ ಸಹ ಬಳಕೆ ಮಾಡಿಕೊಂಡಿರುವುದನ್ನು ಸರ್ಕಾರ ಯಾವ ರೀತಿ ಸಮರ್ಥಿಸಿಕೊಳ್ಳಲಿದೆ ? (ವಿವರ ನೀಡುವುದು)

## ರಾಜ್ಯದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳ ಕುರಿತು

**ಶ್ರೀ ಕೇಶವ ಪ್ರಸಾದ್. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೭ (೧೪೭೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳು ಏರಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೦೨ ವರ್ಷದಿಂದ ಎಷ್ಟು ಪ್ರಕರಣಗಳು ವರದಿಯಾಗಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳು ಹೆಚ್ಚಳವಾಗಲು ಕಾರಣಗಳೇನು ; ಈ ಕುರಿತು ಪರಿಶೀಲನೆ ನಡೆದಿದೆಯೇ ; (ವಿವರ ನೀಡುವುದು)

(ಇ) ಮಾನವ ಹಕ್ಕುಗಳಿಗೆ ಸಂಬಂಧಿಸಿದಂತೆ ದೂರುಗಳನ್ನು ಸ್ವೀಕರಿಸಲು ಮತ್ತು ದೂರುಗಳಿಗೆ ಪರಿಹಾರ ಕಲ್ಪಿಸಲು ಮಾಡಿರುವ ವ್ಯವಸ್ಥೆಗಳೇನು ; ಈವರೆಗೆ ಎಷ್ಟು ದೂರುಗಳಿಗೆ ಪರಿಹಾರ ಕಲ್ಪಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳನ್ನು ಕಡಿಮೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಸರ್ಕಾರಿ ನೌಕರರ ಕುರಿತು

**ಶ್ರೀ ಕೇಶವ ಪ್ರಸಾದ್. ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೮ (೧೪೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಸರ್ಕಾರಿ ನೌಕರರ ಒಟ್ಟು ಸಂಖ್ಯೆ ಎಷ್ಟು ; ಈ ಪೈಕಿ ಎನ್.ಪಿ.ಎಸ್ ಮತ್ತು ಓ.ಪಿ.ಎಸ್ ಯೋಜನೆಯಡಿ ಬರುವ ನೌಕರರ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಎನ್.ಪಿ.ಎಸ್. ರದ್ದುಪಡಿಸಿ ಹಳೆ ಪಿಂಚಣಿ ಯೋಜನೆ ಜಾರಿಗೆ ತರುವ ಕುರಿತು ಸರ್ಕಾರದ ನಿಲುವೇನು ; ಈ ನಿಟ್ಟಿನಲ್ಲಿ ಆಗಿರುವ ಪ್ರಗತಿ ಏನು ;

(ಇ) ಓ.ಪಿ.ಎಸ್. ಜಾರಿ ಸಂಬಂಧ ಸರ್ಕಾರ ನೇಮಕ ಮಾಡಿದ ಸಮಿತಿ ಈವರೆಗೆ ಎಷ್ಟು ಸಭೆಗಳನ್ನು ನಡೆಸಿದೆ; ಯಾವ ಯಾವ ರಾಜ್ಯಗಳಿಗೆ ಭೇಟಿ ನೀಡಿದೆ ; ಸಂಗ್ರಹಿಸಿರುವ ಮಾಹಿತಿಗಳೇನು ; ಸಮಿತಿಗೆ ನೀಡಿರುವ ಕಾಲಾವಕಾಶ ಎಷ್ಟು ;

(ಈ) ಪ್ರಸ್ತುತ ಜಾರಿಯಲ್ಲಿರುವ ಎನ್.ಪಿ.ಎಸ್. ಯೋಜನೆಗೆ ಕೇಂದ್ರ ಸರ್ಕಾರ ಕೆಲವು ತಿದ್ದುಪಡಿ ತಂದಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ರಾಜ್ಯದಲ್ಲಿ ಸರ್ಕಾರಿ ನೌಕರರಿಗೆ ಕೇಂದ್ರ ಸರ್ಕಾರ ತಂದಿರುವ ತಿದ್ದುಪಡಿಯನ್ನು ರಾಜ್ಯ ಸರ್ಕಾರಿ ನೌಕರರಿಗೆ ಅಳವಡಿಸಿಕೊಳ್ಳಲು ಸರ್ಕಾರ ಕ್ರಮ ಕೈಗೊಂಡಿದೆಯೇ ?

## ಪ್ರಖರ ಬೆಳಕು ಹೊರಸೂಸುವ ವಾಹನಗಳ ವಿರುದ್ಧ ಕ್ರಮವಹಿಸುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೨೨೯ (೧೪೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಖರ ಬೆಳಕು ಹೊರಸೂಸುವ ಮತ್ತು ಕಣ್ಣು ಕುಕ್ಕುವ ಎಲ್.ಇ.ಡಿ. ದೀಪಗಳನ್ನು ಅಳವಡಿಸಿಕೊಂಡ ವಾಹನಗಳು ರಸ್ತೆಗೆ ಇಳಿಯುತ್ತಿರುವುದರಿಂದ ಸುರಕ್ಷಿತ ಪ್ರಯಾಣಕ್ಕೆ ತೊಂದರೆ ಆಗುತ್ತಿದ್ದು, ಅಪಘಾತಗಳಿಗೆ ಕಾರಣವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದ್ದಲ್ಲಿ, ಇದನ್ನು ನಿಯಂತ್ರಿಸಲು ಅಥವಾ ಸಂಪೂರ್ಣ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕೇಂದ್ರ ಮೋಟಾರು ಕಾಯ್ದೆಯ ಮಾನದಂಡದಂತೆ ವಾಹನಗಳಿಗೆ ಅಳವಡಿಸಬೇಕಾದ ದೀಪಗಳ (ಹೆಡ್‌ಲೈಟ್) ಬೆಳಕು ಹೊರಸೂಸುವ ಪ್ರಮಾಣ ಎಷ್ಟಿರಬೇಕು ; ಈ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕೈಗೊಳ್ಳಬಹುದಾದ ಕಾನೂನು ಕ್ರಮಗಳೇನು ;

(ಈ) ರಾಜ್ಯದಲ್ಲಿ ಈ ಸಂಬಂಧ ಪ್ರತಿ ನಿತ್ಯ ದಾಖಲಿಸಲಾಗುತ್ತಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಕಳೆದ ೩ ವರ್ಷಗಳಲ್ಲಿ ದಾಖಲಿಸಲ್ಪಟ್ಟ ಪ್ರಕರಣಗಳ ಸಂಖ್ಯೆ ಹಾಗೂ ವಸೂಲಿಸಲ್ಪಟ್ಟ ದಂಡದ ಮೊತ್ತ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ವಿಶೇಷ ಕಾರ್ಯಾಚರಣೆ ಮೂಲಕ ಈ ರೀತಿಯ ಅಪರಾಧ ಪ್ರಕರಣಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆ ಉದ್ದೇಶಿಸಿದೆಯೇ ?

## ಮಂಡ್ಯ ಜಿಲ್ಲೆಯಲ್ಲಿನ ಅಪರಾಧ ಪ್ರಕರಣಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೨೩೦ (೧೪೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ೨೦೨೦ ರಿಂದೀಚೆಗೆ ರೌಡಿ ಶೀಟರ್ ಪಟ್ಟಿಯಲ್ಲಿರುವವರ ಸಂಖ್ಯೆ ಹಾಗೂ ಈ ಪಟ್ಟಿಯಿಂದ ಕೈಬಿಡಲಾಗಿರುವವರ ಸಂಖ್ಯೆ ಎಷ್ಟು ; (ವರ್ಷವಾರು, ತಾಲ್ಲೂಕುವಾರು ಮತ್ತು ಠಾಣಾವಾರು ಮಾಹಿತಿ ನೀಡುವುದು)

(ಆ) ಇದೇ ಅವಧಿಯಲ್ಲಿ ೬೫ ವರ್ಷ ಮೇಲ್ಪಟ್ಟವರು. ಮೃತಪಟ್ಟವರು, ಸಂಪೂರ್ಣ ವಿಕಲಚೇತನ ಅಥವಾ ಅಸ್ವಸ್ಥ ಹಾಗೂ ಸನ್ನಡತೆ ಆಧಾರದ ಮೇಲೆ ರೌಡಿ ಶೀಟರ್ ಪಟ್ಟಿಯಿಂದ ಹೆಸರು ಕೈಬಿಡಲಾಗಿರುವವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಯಾವ ಯಾವ ಸ್ವರೂಪದ ಅಪರಾಧಗಳನ್ನು ಎಸಗಿದ ಕಾರಣಕ್ಕೆ ರೌಡಿ ಶೀಟರ್ ಪಟ್ಟಿಗೆ ಹೆಸರು ಸೇರಿಸಲಾಗುತ್ತದೆ ;

(ಈ) ಮಂಡ್ಯ ಜಿಲ್ಲೆಯಲ್ಲಿ ೨೦೨೦ ರಿಂದೀಚೆಗೆ ದಾಖಲಾದ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು ; ಈ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳ ಸಂಖ್ಯೆ ಹಾಗೂ ಬಂಧಿಸಲಾದ ಆರೋಪಿಗಳ ಸಂಖ್ಯೆ ಎಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಉ) ಈ ಅವಧಿಯಲ್ಲಿ ಆದ ಕೊಲೆಗಳ ಸಂಖ್ಯೆ ಎಷ್ಟು ; ಕೊಲೆ ಹಾಗೂ ಕೊಲೆ ಯತ್ನ ಸಂಬಂಧ ದಾಖಲಾದ ಪ್ರಕರಣಗಳೆಷ್ಟು ;

(ಊ) ಮಂಡ್ಯ ಜಿಲ್ಲೆಯಲ್ಲಿ ಅಪರಾಧ ಚಟುವಟಿಕೆಗಳನ್ನು ತಗ್ಗಿಸಲು ಪೊಲೀಸ್ ಇಲಾಖೆ ವತಿಯಿಂದ ಕೈಗೊಂಡಿರುವ ಸುಧಾರಣಾ ಕ್ರಮಗಳೇನು ?

## ಕೌಟುಂಬಿಕ ನ್ಯಾಯಾಲಯಗಳಲ್ಲಿ ವಿಚ್ಛೇದನ ಕೋರಿ ದಾಖಲಾಗುತ್ತಿರುವ ಪ್ರಕರಣಗಳ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೨೩೧ (೧೪೮೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ರಾಜ್ಯದಾದ್ಯಂತ ಕೌಟುಂಬಿಕ ನ್ಯಾಯಾಲಯಗಳಲ್ಲಿ ವಿಚ್ಛೇದನ ಕೋರಿ ದಾಖಲಾಗುತ್ತಿರುವ ಪ್ರಕರಣಗಳ ಸಂಖ್ಯೆಯಲ್ಲಿ ಗಮನಾರ್ಹ ಹೆಚ್ಚಳ ಆಗುತ್ತಿರುವುದು ನಿಜವೇ ;

(ಆ) ಇದ್ದಲ್ಲಿ, ೨೦೨೦ ರಿಂದ ಈವರೆಗೆ ವಿಚ್ಛೇದನ ಕೋರಿ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಹಿಂದಿನ ವರ್ಷಗಳಿಗೆ ಹೋಲಿಸಿದರೆ ವಿಚ್ಛೇದನ ಕೋರಿರುವ ಅರ್ಜಿಗಳ ಸಂಖ್ಯೆಯಲ್ಲಿ ಶೇಕಡವಾರು ಎಷ್ಟು ಏರಿಕೆ ಆಗಿದೆ ; ರಾಜ್ಯದಲ್ಲಿ ಪ್ರತಿದಿನ ಸರಾಸರಿ ದಾಖಲಾತ್ತಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಈ ಪೈಕಿ ಮತ್ತೆ ಒಟ್ಟುಗೂಡಿಸಿ ಅರ್ಜಿ ಇತ್ಯರ್ಥಗೊಳಿಸಿದ, ವಿಚ್ಛೇದನ ನೀಡಲಾಗಿರುವ ಹಾಗೂ ವಿಚಾರಣೆ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ಆಪ್ತ ಸಮಾಲೋಚನೆ, ಮಧ್ಯಸ್ಥಿತಿಕೆ ಕೇಂದ್ರಗಳ ಮೂಲಕ ಕೌಟುಂಬಿಕ ಹಕ್ಕುಗಳನ್ನು ರಕ್ಷಿಸಲು ಸರ್ಕಾರ ಯಾವ ರೀತಿಯ ನೆರವು ಕಲ್ಪಿಸುತ್ತಿದೆ ? (ವಿವರ ನೀಡುವುದು)

## ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ ಮತ್ತು ನಿಯಂತ್ರಣಾ ಸಮಿತಿಗೆ ಪಾವತಿಸಬೇಕಾದ ಕಾರ್ಯನಿರ್ವಹಣೆಗೆ ವೆಚ್ಚ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :–**

೧೨೩೨ (೧೪೮೮) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರ ಹಾಗೂ ಕಾವೇರಿ ಜಲ ನಿಯಂತ್ರಣಾ ಸಮಿತಿಯ ಕಾರ್ಯನಿರ್ವಹಣೆಗೆ ಸಂಬಂಧಿಸಿದಂತೆ ತಗಲುವ ವೆಚ್ಚವನ್ನು ರಾಜ್ಯ ಸರ್ಕಾರ ಪ್ರತಿ ವರ್ಷ ಭರಿಸಬೇಕಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಇದ್ದಲ್ಲಿ, ರಾಜ್ಯ ಸರ್ಕಾರ ಭರಿಸಬೇಕಾದ ವೆಚ್ಚದ ಪಾಲು ಎಷ್ಟು; ಇದು ಪುನರಾವರ್ತಿತ ವೆಚ್ಚವೇ ;

(ಇ) ಸರ್ಕಾರ ಸದರಿ ವೆಚ್ಚವನ್ನು ಯಾವ ವರ್ಷದಿಂದ ಪಾವತಿಸಿಕೊಂಡು ಬರುತ್ತಿದೆ ; ಈವರೆವಿಗೂ ಪಾವತಿಸಿರುವ ಮೊತ್ತ ಎಷ್ಟು; (ವರ್ಷವಾರು ಪಾವತಿಸಿರುವ ಮೊತ್ತದ ಮಾಹಿತಿಯನ್ನು ನೀಡುವುದು)

(ಈ) ಕಾವೇರಿ ನದಿ ನಿರ್ವಹಣಾ ಪ್ರಾಧಿಕಾರ ಹಾಗೂ ಕಾವೇರಿ ಜಲ ನಿಯಂತ್ರಣಾ ಸಮಿತಿಗೆ ಮಾಹಿತಿ ಹಾಗೂ ಅಂಕಿಅಂಶಗಳನ್ನು ಒದಗಿಸಲು ಸಮಿತಿಯನ್ನು ರಚಿಸಲಾಗಿದೆಯೇ ;

(ಉ) ಇದ್ದಲ್ಲಿ, ಈ ಸಮಿತಿಯಲ್ಲಿ ಯಾರು ಯಾರು ಇದ್ದಾರೆ ; ಸಮಿತಿಯ ಕಾರ್ಯನಿರ್ವಹಣೆ ಕುರಿತು ಸಂಪೂರ್ಣ ಮಾಹಿತಿ ನೀಡುವುದು ?

## ಕರ್ನಾಟಕ ರಾಜ್ಯದಲ್ಲಿ ಎಲ್ಲಾ ಇಲಾಖೆಗಳಿಗೆ ಇ–ಕಛೇರಿ ಕಡ್ಡಾಯಗೊಳಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೩ (೧೪೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸುಮಾರು ೪೨ ಇಲಾಖೆಗಳ ಸಹಿತ ಎಲ್ಲಾ ನಿಗಮ ಮಂಡಳಿ ಹಾಗೂ ಇತರ ಸರ್ಕಾರಿ ಸಂಸ್ಥೆಗಳ ಪೈಕಿ ಎಷ್ಟು ಕಛೇರಿಗಳಲ್ಲಿ ಇ–ಕಛೇರಿ ಮೂಲಕ ಇ–ಕಡತ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ಎಲ್ಲಾ ಇಲಾಖೆಗಳಿಗೆ ಸಲ್ಲಿಸಲ್ಪಡುವ ಎಲ್ಲಾ ರೀತಿಯ ಪತ್ರ/ಮನವಿ ಇತ್ಯಾದಿಗಳಿಗೆ ಸೂಕ್ತ ಸ್ಪಂದನೆ ಹಿಂಬರಹ ನೀಡುವ ವ್ಯವಸ್ಥೆ ರೂಪಿಸಿದೆಯೇ ಹಲವು ವಿಶೇಷ ಪ್ರಕರಣಗಳನ್ನು ಇಲಾಖಾ ಮುಖ್ಯಸ್ಥರ ಗಮನಕ್ಕೆ ತರುವ ವ್ಯವಸ್ಥೆಯಿದೆಯೇ ;

(ಇ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ನಡೆದ ಜನ ಸ್ಪಂದನೆ ಕಾರ್ಯಕ್ರಮಗಳಲ್ಲಿ ಸ್ವೀಕರಿಸಿದ ಮನವಿಗಳೆಷ್ಟು ; ಪರಿಹಾರವಾದ ಸಮಸ್ಯೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸರಕಾರವು ಇಲಾಖೆಗಳ ಮೂಲಕ ನೀಡುವ ಎಲ್ಲಾ ಸೇವೆಗಳಿಗೆ ಕಾಲಮಿತಿಯನ್ನು ನಿಗಧಿಪಡಿಸಲಾಗಿದೆಯೇ ; ನಿಗಧಿಪಡಿಸಿದ ಕಾಲಮಿತಿಯಲ್ಲಿ ಸೇವೆಗಳು ಲಭ್ಯವಾಗದಿರಲು ಹಾಗೂ ಮುಖ್ಯಮಂತ್ರಿಗಳ, ಸಚಿವರ ಹಾಗೂ ಜಿಲ್ಲಾ ಮಟ್ಟದ ಜನಸ್ಪಂದನ ಕಾರ್ಯಕ್ರಮದಲ್ಲಿ ಅತೀ ಹೆಚ್ಚು ಸಂಖ್ಯೆಯ ಮನವಿಗಳು ಸಲ್ಲಿಕೆಯಾಗಲು ಕಾರಣಗಳೇನು ;

(ಉ) ಜನಸ್ಪಂದನ ಕಾರ್ಯಕ್ರಮದಲ್ಲಿ ಸಮಸ್ಯೆ ಪರಿಹಾರವಾಗುವುದಾದರೆ ನಿಯಮಿತ ಕಚೇರಿ ನಿರ್ವಹಣೆಯ ಮೂಲಕ ಸದರಿ ಸಮಸ್ಯೆಗಳು ನಿವಾರಣೆಯಾಗದಿರಲು ಕಾರಣಗಳೇನು ಈ ಕುರಿತು ಇಲಾಖಾ ಮುಖ್ಯಸ್ಥರು ಪರಿಶೀಲಿಸಿದ್ದಾರೆಯೇ ; (ವಿವರ ನೀಡುವುದು)

(ಊ) ಸಾರ್ವಜನಿಕರು ಎದುರಿಸುತ್ತಿರುವ ಹಲವಾರು ಸಮಸ್ಯೆಗಳು ಮತ್ತು ಕುಂದುಕೊರತೆಗಳು ಒಂದು ಸೇವೆಗೆ ಸಂಬಂಧಿಸಿದಂತೆ ಹಲವಾರು ಇಲಾಖೆಗಳ ಸಹಯೋಗ ಮತ್ತು ಸಮನ್ವಯತೆಯ ಕೊರತೆ ಕಾರಣದಿಂದ ಉದ್ಭವಿಸುತ್ತಿದ್ದು ಇಲಾಖೆಗಳ ನಡುವೆ ಸಮನ್ವಯತೆ ಸಾಧಿಸಲು ಸರಕಾರ ಏನು ಕ್ರಮವಹಿಸಿದೆ ?

## ಕರ್ನಾಟಕ ರಾಜ್ಯದಲ್ಲಿ ಆರ್ಥಿಕ ಮಿತವ್ಯಯ ಸಾಧಿಸುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೪ (೧೪೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆರ್ಥಿಕ ಮಿತವ್ಯಯ ಸಾಧಿಸುವ ಕುರಿತಂತೆ ಯಾವ ಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ ; ಈ ಕುರಿತಂತೆ ವಿವಿಧ ಇಲಾಖೆ/ಕಛೇರಿಗಳಿಗೆ ನೀಡಿರುವ ಸೂಚನೆಗಳಾವುವು ; (ವಿವರ ನೀಡುವುದು)

(ಆ) ಸರ್ಕಾರದ ಎಲ್ಲಾ ಇಲಾಖೆಗಳ ಸಹಿತ ನಿಗಮ ಮಂಡಳಿ ಹಾಗೂ ಇತರ ಸರಕಾರಿ ಸಂಸ್ಥೆಗಳಲ್ಲಿ ಕಛೇರಿ ಮುಖ್ಯಸ್ಥರು ಮತ್ತು ಅಧಿಕಾರಿಗಳಿಗೆ ತಾವು ಹೊಂದಿರುವ ಕಛೇರಿ, ವಾಹನ ಮತ್ತಿತರ ಸವಲತ್ತುಗಳು ಸಾಕಷ್ಟು ಉತ್ತಮವಾಗಿದ್ದರೂ ಸುಧಾರಣೆಯ ಹೆಸರಿನಲ್ಲಿ ಹೊಸದಾಗಿ ನಿರ್ಮಾಣ ಮತ್ತು ಖರೀದಿಸುವಿಕೆ ನಿಷೇಧಿಸುವ ಬಗ್ಗೆ ಸರಕಾರ ಕೈಗೊಂಡ ಕ್ರಮಗಳಾವುವು ;

(ಇ) ಯಾವುದೇ ಇಲಾಖೆ/ಕಛೇರಿಗೆ ಯಾವುದೇ ಒಂದು ಸೌಲಭ್ಯವನ್ನು ಹೊಸದಾಗಿ ಒಂದು ಸಲ ಒದಗಿಸಿದ ನಂತರ ಅದರ ಕನಿಷ್ಟ ಇಂತಿಷ್ಟು ಅವಧಿಯವರೆಗೆ ಮತ್ತು ನವೀಕರಣ ಮತ್ತು ಪುನಃ ಖರೀದಿಸುವುದನ್ನು ನಿರ್ಬಂದಿಸಲು ಅವಕಾಶವಿದೆಯೇ ; ಇಂತಹ ನಿರ್ಬಂಧಗಳನ್ನು ಜಾರಿಗೊಳಿಸಲು ಸರಕಾರ ಯಾವ ಕ್ರಮ ವಹಿಸುತ್ತಿದೆ ;

(ಈ) ಎಲ್ಲಾ ರೀತಿಯ ವಸ್ತು ಮತ್ತು ಸೇವೆಗಳ ಖರೀದಿಗಾಗಿ ತಳ ಹಂತದ ಸ್ಥಳೀಯ ಕಛೇರಿಯಿಂದ ಇಲಾಖಾ ಮುಖ್ಯಸ್ಥರ

ಕಛೇರಿವರೆಗೆ ಅಗತ್ಯಕ್ಕನುಸಾರವಾಗಿ ಮೊತ್ತವನ್ನು ನಿಗಧಿಪಡಿಸಿ ಏಕರೂಪವಾಗಿ ಕೆಟಿಟಿಪಿ ನಿಯಮಗಳನ್ನು ಅನ್ವಯಿಸಲು ಏನು ತೊಂದರೆಯಿದೆ ; ಈ ಕುರಿತು ಸರಕಾರ ಯಾವಾಗ ಅಗತ್ಯಕ್ರಮ ವಹಿಸುವುದು ;

(ಉ) ಕೆಲವು ಕಾಮಗಾರಿ ನಿರ್ವಹಣಾ ಸಂಸ್ಥೆಗಳಿಗೆ ಟೆಂಡರ್ ಮತ್ತು ಕೆಟಿಟಿಪಿ ನಿಯಮಗಳಿಂದ ವಿನಾಯತಿ ನೀಡಿದ್ದು ಮತ್ತು ಕೆಲವು ಸಲ ನೇರ ಖರೀದಿಗೆ ಅವಕಾಶವಿದ್ದು, ಅವುಗಳ ಮೂಲಕ ನಿರ್ವಹಿಸಲಾದ ಕಾಮಗಾರಿ/ಸೇವೆಗಳು ಕಳಪೆ ಮಟ್ಟದ್ದಾಗಿದ್ದಲ್ಲಿ ಅದನ್ನು ಯಾವ ರೀತಿಯಲ್ಲಿ ಸರಿಪಡಿಸಲಾಗುವುದು ? (ವಿವರ ನೀಡುವುದು)

## ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಸಮುದಾಯಗಳಿಗೆ ಸೌಲಭ್ಯಗಳನ್ನು ನೀಡುವ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೫ (೧೪೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕದಲ್ಲಿ ಪರಿಶಿಷ್ಟ ಪಂಗಡಗಳ ಸಮುದಾಯಗಳಿಗೆ ಸೌಲಭ್ಯಗಳನ್ನು ನೀಡುವ ಬಗ್ಗೆ ಅನುಸರಿಸುತ್ತಿರುವ ಮಾನದಂಡಗಳು ಮತ್ತು ನಿಯಮಗಳು ಯಾವುವು ಈಗಾಗಲೇ ಸೌಲಭ್ಯಗಳನ್ನು ಪಡೆದ ಜನರನ್ನು ಹೊರತುಪಡಿಸಿ ಸೌಲಭ್ಯಗಳನ್ನು ಪಡೆಯದ ಅಥವಾ ಅತೀ ಕಡಿಮೆ ಸವಲತ್ತುಗಳನ್ನು ಪಡೆದ ಪರಿಶಿಷ್ಟ ಪಂಗಡದ ವ್ಯಕ್ತಿಗಳಿಗೆ ಸೌಲಭ್ಯಗಳನ್ನು ಒದಗಿಸಲು ಕಂಡುಕೊಂಡ ಮಾರ್ಗಸೂಚಿಗಳಾವುವು ;

(ಆ) ಕರ್ನಾಟಕದಲ್ಲಿ ಇರುವ ಪರಿಶಿಷ್ಟ ಪಂಗಡಗಳ ಸಮುದಾಯಗಳ ಸಂಖ್ಯೆ. ಇರುವ ಸ್ಥಳಗಳು, ಹರಡಿರುವಿಕೆ, ಈಗಾಗಲೇ ಅವರಿಗೆ ಲಭಿಸಿರುವ ಸವಲತ್ತುಗಳ ಬಗ್ಗೆ ಮೈಸೂರಿನ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ (ಟ್ರೈಬಲ್ ರಿಸರ್ಚ್ ಇನ್ಸಿಟ್ಯೂಟ್) ಅಥವಾ ಇತರ ಯಾವುದೇ ಸಂಶೋಧನಾ ಸಂಸ್ಥೆಯ ಮೂಲಕ ಸಂಗ್ರಹಿಸಿದ ದತ್ತಾಂಶ ಮತ್ತು ಮಾಹಿತಿ ಇಲಾಖೆಯ ಬಳಿಯಿದೆಯೇ ;

(ಇ) ಇಲ್ಲದಿದ್ದಲ್ಲಿ ಇವುಗಳ ಅನುಪಸ್ಥಿತಿಯಲ್ಲಿ (ಟಿಎಸ್‌ಪಿ) ಬುಡಕಟ್ಟು ಉಪ ಯೋಜನೆಯಡಿ ವಿವಿಧ ಇಲಾಖೆಗಳ ಅನುದಾನವನ್ನು ಹೇಗೆ ವೆಚ್ಚ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಈ) ಬುಡಕಟ್ಟು ಉಪ ಯೋಜನೆಯಡಿ ವಿವಿಧ ಇಲಾಖೆಗಳ ಅನುದಾನವನ್ನು ವೆಚ್ಚಮಾಡಬೇಕಾದರೆ ಆಯಾಯ ಪ್ರದೇಶದಲ್ಲಿ ಪರಿಶಿಷ್ಟ ಪಂಗಡಗಳ ಸಮುದಾಯಗಳ ಇಂತಿಷ್ಟು ಕುಟುಂಬಗಳು/ಮನೆಗಳು ಅಥವಾ ವ್ಯಕ್ತಿಗಳು ಇರತಕ್ಕದ್ದೆಂದು ನಿಯಾಮಾವಳಿಗಳಿದ್ದು ಹೆಚ್ಚಿನ ಪರಿಶಿಷ್ಟ ಪಂಗಡಗಳ ಜನರು ಹರಡಿಕೊಂಡ ರೀತಿಯಲ್ಲಿ ವಾಸ್ತವ್ಯವಿದ್ದು ಅನುದಾನ ಖರ್ಚು ಮಾಡಲು ಸಾಧ್ಯವಿಲ್ಲದಿರುವುದು ಸರ್ಕಾರ ಗಮನಿಸಿದೆಯೇ ; ಇಂತಹ ಎಷ್ಟು ಪ್ರಕರಣಗಳಿವೆ ಹಾಗೂ ಈ ಕುರಿತಂತೆ ಸೂಕ್ತ ಕಾನೂನು ತಿದ್ದುಪಡಿ ಮಾಡಲು ಇರುವ ತೊಡಕುಗಳೇನು ;

(ಉ) ಪರಿಶಿಷ್ಟ ಪಂಗಡಗಳ ಸಮುದಾಯಗಳ ಸಂಖ್ಯೆ, ಇರುವ ಸ್ಥಳಗಳು, ಹರಡಿರುವಿಕೆ ಇತ್ಯಾದಿ ಮಾಹಿತಿಯನ್ನು ಪರಿಶಿಷ್ಟ ಪಂಗಡಗಳ ಇಲಾಖೆ ಹೊಂದಿದೆಯೇ ಇಲ್ಲದಿದ್ದಲ್ಲಿ ಪ್ರತಿ ಸಲ ಸಮೀಕ್ಷೆ ನಡೆಸಿ ಕಾರ್ಯಕ್ರಮ ಅನುಷ್ಠಾನ ಸಂಸ್ಥೆಗೆ ವರದಿ ನೀಡಲಾಗುತ್ತಿದ್ದು ಸಮಿಕ್ಷಾ ಕಾರ್ಯ ಪುನರಾವರ್ತನೆ ಯಾಗುವುದನ್ನು ತಡೆಯಲು ಯಾವ ಕ್ರಮವಹಿಸಲಾಗಿದೆಯೇ ?

# ಇಲಾಖಾ ಸೇವೆಗಳು ಮತ್ತು ಸರ್ಕಾರಿ ಅಧಿಕಾರಿ ಸಿಬ್ಬಂದಿಗಳ ಸೇವಾ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೬ (೧೪೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿವಿಧ ತನಿಖಾ ಸಂಸ್ಥೆಗಳು ತಮಗೆ ಸಲ್ಲಿಸಲ್ಪಟ್ಟ ದೂರುಗಳಿಗೆ ಆಯಾಯ ಇಲಾಖೆಗಳ ನಿಯಮಗಳನ್ನು ಪರಿಶೀಲಿಸದೆ ತೀರ್ಪು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಇಲಾಖೆಯ ಮುಖ್ಯಸ್ಥರು ತನಿಖಾ ಸಂಸ್ಥೆ, ತನಿಖಾ ಪ್ರಾಧಿಕಾರ, ತನಿಖಾ ಅಧಿಕಾರಿಗಳ ಗಮನಕ್ಕೆ ತಂದಿರುವ ಪ್ರಕರಣಗಳೆಷ್ಟು ;

(ಆ) ಬದಲಾದ ಸನ್ನಿವೇಶಗಳಲ್ಲಿ ಆಯಾಯ ಇಲಾಖೆಯಲ್ಲಿ ಸೇವೆಗಳು ಮತ್ತು ದೂರುಗಳಿಗೆ ಸಂಬಂಧಿಸಿದಂತೆ ಸೂಕ್ತ ನಿಯಮಾವಳಿಗಳಿಲ್ಲದೆ ಒಂದೇ ವಿಷಯದ ಬಗ್ಗೆ ಒಂದೇ ಅಥವಾ ಪ್ರತ್ಯೇಕ ತನಿಖಾ ಸಂಸ್ಥೆಗಳು ತನಿಖಾ ಪ್ರಕರಣಗಳಲ್ಲಿ ಪರಸ್ಪರ ವೈರುಧ್ಯದ ತೀರ್ಪುಗಳೊಂದಿಗೆ ಶಿಸ್ತುಕ್ರಮಕ್ಕೆ ಶಿಫಾರಸ್ಸು ಮಾಡುತ್ತಿರುವ ಪ್ರಕರಣಗಳು ಆಡಳಿತಾತ್ಮಕ ಸಮಸ್ಯೆ ಸೃಷ್ಟಿಸಿರುವುದನ್ನು ಬಗೆಹರಿಸಲು ಇಲಾಖೆ ಯಾವ ರೀತಿ ಕ್ರಮವಹಿಸಿದೆ ;

(ಇ) ವಿವಿಧ ಇಲಾಖೆಗಳಲ್ಲಿ ಇಲಾಖಾ ವಿಚಾರಣೆ, ಲಘು/ಕಠಿಣ ದಂಡನೆ, ಶಿಸ್ತುಕ್ರಮ, ನಿಯಮಿತ ಮತ್ತು ವೇತನ ಬಡ್ತಿ, ಸೇವಾ ಹಿರಿತನ, ಇತ್ಯಾದಿ ವಿಷಯಗಳ ಬಗ್ಗೆ ಬಾಕಿಯಿರುವ ಪ್ರಕರಣಗಳೆಷ್ಟು; ಅವುಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ಇಲಾಖಾವಾರು ಇಂದೀಕೃತ ಮಾಹಿತಿ ನೀಡುವುದು)

(ಈ) ಆಯಾಯ ಇಲಾಖೆಗಳು ತಮ್ಮ ಕೆಳಹಂತದ ಅಧಿಕಾರಿ ಮತ್ತು ಸಿಬ್ಬಂದಿಗಳ ಸೇವಾ ವಿಷಯುಗಳನ್ನು ಕೆ.ಸಿ.ಎಸ್.ಆರ್. ನಿಯಮಾವಳಿಗಳಂತೆ ನಿರ್ವಹಿಸದೆ ಅನೇಶ ಅಧಿಕಾರಿ ಸಿಬ್ಬಂದಿಗಳು ತೊಂದರೆಗೀಡಾಗುತ್ತಿರುವುದು ಸರ್ಕಾರದ ಗಮನದಲ್ಲಿ ಇದೆಯೇ ; (ಈ ಕುರಿತು ಇಲಾಖೆಗಳಿಗೆ ಸಲ್ಲಿಸಿದ ಮೇಲ್ಮನವಿಗಳೆಷ್ಟು)

(ಉ) ಸೇವಾ ವಿಷಯಗಳಿಗೆ ಸಂಬಂಧಿಸಿದ ಪ್ರಕರಣಗಳ ಮೇಲ್ಮನವಿಗಳು ಆಯಾಯ ಇಲಾಖೆಗಳಲ್ಲಿ ಕ್ಷಿಪ್ತ ಸಮಯದಲ್ಲಿ ವಿಲೇವಾರಿ ಆಗದೆ ಒಟ್ಟಾಗಿ ತಿರಸ್ಕರಿಸುವುದು ಮತ್ತು ಅಂತಹ ಪ್ರಕರಣಗಳೇ ಕೆಎಟಿಯಲ್ಲಿ ಮತ್ತು ಉಚ್ಚ ನ್ಯಾಯಾಲಯದಲ್ಲಿ ದಾಖಲಾಗುವ ಸರ್ಕಾರದ ವಿರುದ್ಧದ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿರುವುದನ್ನು ಕಡಿಮೆಗೊಳಿಸಲು ಸರ್ಕಾರ ಯಾವ ಕ್ರಮ ಜರುಗಿಸುತ್ತಿದೆ ?

## ಪೊಲೀಸ್ ಕಾನ್ಸ್‌ಟೇಬಲ್‌ಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೭ (೧೪೪೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಪೊಲೀಸ್ ಕಾನ್ಸ್‌ಟೇಬಲ್‌ಗಳ ಸಂಖ್ಯೆ ಎಷ್ಟು;

(ಆ) ನಿಯುವಮಾನುಸಾರ ಎಷ್ಟು ಜನರಿಗೆ ಒಬ್ಬ ಪೊಲೀಸ್ ಕಾನ್ಸ್‌ಟೇಬಲ್‌ಗಳ ಇರಬೇಕು ;

(ಇ) ಆ ಪ್ರಕಾರ ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳನ್ನು ಭರ್ತಿ ಮಾಡದಿರಲು ಕಾರಣಗಳೇನು ;

(ಈ) ಪೊಲೀಸ್ ಕಾನ್ಸ್‌ಟೇಬಲ್‌ಗಳ ಹುದ್ದೆಗಳ ನೇಮಕಾತಿಗೆ ಸರ್ಕಾರವು ಕ್ರಮ ಕೈಗೊಳ್ಳವುದೇ ?

## ಸರ್ಕಾರದ ಪತ್ರಿಕಾ ಜಾಹಿರಾತುಗಳ ವೆಚ್ಚದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೮ (೧೪೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಕಳೆದ ಎರಡು ವರ್ಷಗಳಲ್ಲಿ ರಾಜ್ಯದ ವಿವಿಧ ಪತ್ರಿಕೆಗಳಲ್ಲಿ ನೀಡಿದ ಜಾಹಿರಾತುಗಳ ಸಂಖ್ಯೆ ಎಷ್ಟು;

(ಆ) ಇದಕ್ಕಾಗಿ ಸರ್ಕಾರಕ್ಕೆ ತಗುಲಿದ ಆರ್ಥಿಕ ವೆಚ್ಚವೆಷ್ಟು? (ವರ್ಷವಾರು ಮಾಹಿತಿ ನೀಡುವುದು)

## ಪೊಲೀಸರಿಗೆ ಪಿ–ಕ್ಯಾಪ್ ನೀಡುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೯ (೧೪೩೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಲ್ಲಾ ಪೊಲೀಸರಿಗೂ ಕೇರಳ, ಆಂಧ್ರ ಪ್ರದೇಶ ಮತ್ತು ತಮಿಳುನಾಡು ಪೊಲೀಸರ ಮಾದರಿಯಲ್ಲಿ ಪಿ–ಕ್ಯಾಪ್ ನೀಡಬೇಕೆನ್ನುವ ಪ್ರಸ್ತಾವನೆ ಹಲವು ವರ್ಷಗಳಿಂದ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈವರೆಗೂ ಪಿ–ಕ್ಯಾಪ್ ನೀಡದಿರಲು ಕಾರಣಗಳೇನು; ರಾಜ್ಯದ ಪೊಲೀಸರಿಗೆ ಪಿ–ಕ್ಯಾಪ್ ನೀಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

## ದಿನಗೂಲಿ ನೌಕರರಿಗೆ ಕಾಲಿಕ ದ್ವೀತಿಯ ವೇತನ ಶ್ರೇಣಿ ನೀಡುವ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೪೦ (೧೪೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರಿಗೆ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಕನಿಷ್ಠ ಕಾಲಿಕ ವೇತನವನ್ನು ದಿನಾಂಕ:೦೧.೦೮.೨೦೧೮ ರಿಂದ ಜಾರಿಗೆ ಬರುವಂತೆ ನೀಡಲು ಅದೇಶಿಸಲಾಗಿದೆಯೇ ;

(ಆ) ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆರವರು ತಮ್ಮ ಪತ್ರ ಸಂಖ್ಯೆ ಎಚಿಡಿ ೫೮ ಎಫ್ಐಎಂ ೨೦೨೪ ದಿನಾಂಕ:೦೭.೧೨.೨೦೨೪ ರಲ್ಲಿ ದಿನಾಂಕ:೦೧.೦೮.೨೦೧೮ ರಿಂದ ಜಾರಿಗೆ ಬರುವಂತೆ ಕಾಲಿಕ ದ್ವಿತೀಯ ವೇತನ ಶ್ರೇಣಿಯನ್ನು ನೀಡಲು ಅದೇಶಿಸಿರುವುದು ಕ್ರಮ ಬದ್ದವೇ ;

(ಇ) ಹಾಗಿದ್ದಲ್ಲಿ ಕಾಲಿಕ ದ್ವಿತೀಯ ವೇತನಶ್ರೇಣಿಯನ್ನು ಎಲ್ಲಾ ಇಲಾಖೆಯ ಕ್ಷೇಮಾಭಿವೃದ್ಧಿ ದಿನಗೂಲಿ ನೌಕರರಿಗೆ ನೀಡಲು ಕ್ರಮ ಕೈಗೊಳ್ಳಲಾಗುವುದೇ ?

## ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದ ಕಾರ್ಯ ನಿರ್ವಹಣೆ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೧ (೧೪೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ ಅತ್ಯಂತ ಹಳೇಯ ಕಾರ್ಖಾನೆಯಾಗಿದ್ದು ; ಇದು ಲಾಭದಲ್ಲಿದೆಯೇ ಅಥವಾ ನಷ್ಟದಲ್ಲಿದೆಯೇ ;

(ಆ) ಇಲ್ಲಿ ತಯಾರಿಸುವ ಮೈಸೂರು ಸ್ಯಾಂಡಲ್ ಸೋಪು ಈ ಹಿಂದೆ ಅತೀ ಹೆಚ್ಚಿನ ಪ್ರಸಿದ್ಧಿ ಹೊಂದಿದ್ದು, ಈಗ ಇದರ ಗುಣಮಟ್ಟ ಕಡಿಮೆಯಾಗಿದೆ ಎಂಬ ಆರೋಪ ಸಾರ್ವಜನಿಕ ವಲಯದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಇದನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕೆಲವು ದಿನಗಳ ಹಿಂದೆ ಇಲ್ಲಿ ಅವ್ಯವಹಾರ ನಡೆದಿದೆ ಎಂದು ವರದಿಯಾಗಿದ್ದು, ಈ ಬಗ್ಗೆ ತನಿಖೆಯಾಗಿ ವರದಿ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಮೈಸೂರು ಸ್ಯಾಂಡಲ್ ಸೋಪು ಮತ್ತಿತರ ಉತ್ಪನ್ನಗಳ ಜನಪ್ರಿಯತೆಯನ್ನು ಹೆಚ್ಚಿಸಲು ಯಾವ ಸುಧಾರಣಾ ಕಾರ್ಯವನ್ನು ಕೈಗೊಳ್ಳಲಾಗುವುದು ?

## ಸರ್ಕಾರಿ ನೌಕರರ ನೇಮಕಾತಿಗಿರುವ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೨ (೧೫೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರ ನೇಮಕಾತಿಗೆ ಗರಿಷ್ಠ ವಯೋಮಿತಿ ಸಾಮಾನ್ಯ ವರ್ಗದವರಿಗೆ ೩೫ ಮತ್ತು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದವರಿಗೆ ೩೮ ಇದ್ದು ಇದನ್ನು ಹೆಚ್ಚಿಸುವ ಆಲೋಚನೆ ಇದೆಯೇ ;

(ಆ) ರಾಜ್ಯ ಸರ್ಕಾರಿ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿ ಇದ್ದು ಅನೇಕ ವರ್ಷಗಳಿಂದ ನೇಮಕಾತಿಗಳು ನಡೆಯದಿರುವುದರಿಂದ ವಯೋಮಿತಿಯನ್ನು ೩ ವರ್ಷಗಳಿಗೆ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದೆ ;

(ಇ) ಹಲವಾರು ವರ್ಷಗಳಿಂದ ನೇಮಕಾತಿಗಳು ನಡೆಯದೆ ಯುವಕ ಯುವತಿಯರು ಅವಕಾಶ ವಂಚಿತರಾಗಿದ್ದು ಮೂರು ವರ್ಷಗಳ ವಯೋಮಿತಿಯನ್ನು ಹೆಚ್ಚಿಸಿ ಆದೇಶ ಹೊರಡಿಸಿ ನ್ಯಾಯ ದೊರಕಿಸಿ ಕೊಡಲಾಗುವುದೆ ?

## ಬಿ.ಡಿ.ಎ ನಿಂದ ಮುಖ್ಯಮಂತ್ರಿಗಳ ವಿವೇಚನಾ ಕೋಟಾದಡಿ ನಿವೇಶನಗಳನ್ನು ಹಂಚಿಕೆ ಮಾಡುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೩ (೧೫೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಖ್ಯಮಂತ್ರಿಗಳ ವಿವೇಚನಾ ಕೋಟಾದಡಿಯಲ್ಲಿ ಗಣ್ಯ ವ್ಯಕ್ತಿಗಳಿಗೆ ನಿವೇಶನಗಳನ್ನು ಹಂಚಿಕೆ ಮಾಡುವ ಯೋಜನೆಯನ್ನು ಸ್ಥಗಿತಗೊಳಿಸಲಾಗಿದೆಯೇ ಇದಕ್ಕೆ ಕಾರಣ ಏನು ;

(ಆ) ಈ ಯೋಜನೆಯನ್ನು ಮತ್ತೆ ಮುಂದುವರೆಸುವ ಆಲೋಚನೆ ಸರ್ಕಾರಕ್ಕಿದೆಯೇ ಇದ್ದರೆ ಎಷ್ಟು ದಿನಗಳಲ್ಲಿ ಪುನರಾರಂಭಿಸಲಾಗುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ವಿಶೇಷ ಸಂದರ್ಭ ಎಂದು ಪರಿಗಣಿಸಿ ಮುಖ್ಯ ಮಂತ್ರಿಗಳ ವಿವೇಚನಾ ಕೋಟಾದಡಿ ಯಾರಿಗಾದರೂ ನಿವೇಶನಗಳ ಹಂಚಿಕೆ ಮಾಡಲಾಗಿದೆಯೇ ? (ಹಂಚಿಕೆಯಾಗಿದ್ದರೆ ವಿವರ ನೀಡುವುದು)

## ಕರ್ತವ್ಯ ನಿರತ ಸಂಚಾರಿ ಪೊಲೀಸರು ಮೊಬೈಲ್ ಬಳಸುತ್ತಾ ಸಂಚಾರಿ ಅಪರಾಧಗಳ ಬಗ್ಗೆ ಗಮನ ನೀಡುದಿರುವುದು

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೪ (೧೫೦೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಅನೇಕ ಮುಖ್ಯ ರಸ್ತೆಗಳಲ್ಲಿ ಸಂಚಾರಿ ಪೊಲೀಸರಿದ್ದರೂ, ಕೆಲವರು ಮೊಬೈಲ್ ಬಳಸುತ್ತಾ ಸಂಚರಿಸುವ ಅಪರಾಧಗಳ ಬಗ್ಗೆ ಗಮನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಅ) ಈ ಬಗ್ಗೆ ತಪಾಸಣೆ ಮಾಡಿ ಮೇಲಾಧಿಕಾರಿಗಳು ಕ್ರಮ ಕೈಗೊಳ್ಳದಿರುವ ನಿದರ್ಶನಗಳವೆಯೇ: ಇದ್ದರೆ ಎಷ್ಟು ಪೊಲೀಸರ ಮೇಲೆ ಕ್ರಮ ಕೈಗೊಳ್ಳಲಾಗಿದೆ ;

(ಇ) ಕರ್ತವ್ಯ ನಿರತ ಸಂಚಾರಿ ಪೊಲೀಸರು ಮೊಬೈಲ್ ಬಳಕೆ ಮಾಡದಂತೆ ನಿರ್ದೇಶನ ನೀಡಿ ಆದೇಶ/ಸುತ್ತೋಲೆ ಹೊರಡಿಸಲು ಕ್ರಮ ಕೈಗೊಳ್ಳಲಾಗುವುದೆ ?

## ಫುಟ್‌ಪಾತ್‌ಗಳಲ್ಲಿ ತರಕಾರಿ ವ್ಯಾಪಾರ ಮಾಡುವುದರಿಂದ ಪಾದಚಾರಿಗಳಿಗೆ ಓಡಾಡಲು ತೊಂದರೆ ಉಂಟಾಗಿರುವ ಬಗ್ಗೆ

**ಡಾ॥ ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೫ (೧೫೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಫುಟ್‌ಪಾತ್‌ಗಳಲ್ಲಿ ತರಕಾರಿ ವ್ಯಾಪಾರ ಮಾಡುತ್ತಿದ್ದು ಪಾದಚಾರಿಗಳು ಓಡಾಡಲು ತೊಂದರೆಯಾಗುತ್ತಿದ್ದರೂ ಬಿ.ಬಿ.ಎಂ.ಪಿ ಯವರು ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಆ) ಫುಟ್‌ಪಾತ್ ಮಾತ್ರವಲ್ಲದೆ ರಸ್ತೆಯ ಎರಡೂ ಬದಿಗಳಲ್ಲಿ ತಳ್ಳುಗಾಡಿಗಳನ್ನಿಟ್ಟುಕೊಂಡು ವ್ಯಾಪಾರ ಮಾಡುತ್ತಾ ಜನ ಓಡಾಡಲು ಮತ್ತು ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿದ್ದರೂ ಕ್ರಮ ಕೈಗೊಳ್ಳದಿರಲು ಕಾರಣವೇನು :

(ಇ) ಈ ವಿಚಾರವನ್ನು ಗಂಭೀರವಾಗಿ ಪರಿಶೀಲಿಸಿ ಫುಟ್‌ಪಾತ್ ಮತ್ತು ರಸ್ತೆ ಬದಿಗಳಲ್ಲಿ ವ್ಯಾಪಾರ ಮಾಡುವುದನ್ನು ತಪ್ಪಿಸಲು ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲಾಗುವುದೆ ?

## ಬೆಂಗಳೂರು ನಗರ ವ್ಯಾಪ್ತಿಗೆ ಬರುವ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೪೬ (೧೩೮೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ವ್ಯಾಪ್ತಿಗೆ ಬರುವ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಜಿಲ್ಲಾ ಹೆದ್ದಾರಿ ಹಾಗೂ ಬಿ.ಬಿ.ಎಂ.ಪಿ. ವ್ಯಾಪ್ತಿಗೆ ಬರುವ ರಸ್ತೆಗಳು ಯಾವುವು ; (ಪೂರ್ಣ ವಿವರ ಒದಗಿಸುವುದು)

(ಆ) ಸದರಿ ರಸ್ತೆಗಳು ಹಾಳಾಗಿದ್ದು, ಇಲ್ಲಿಯವರೆಗೂ ಎಷ್ಟು ರಸ್ತೆಗಳನ್ನು ದುರಸ್ತಿ ಪಡಿಸಲಾಗಿದೆ ; (ವಿವರ ಒದಗಿಸುವುದು)

(ಇ) ಇಲ್ಲಿಯವರೆಗೂ ದುರಸ್ತಿ ಕಾರ್ಯ ಕೈಗೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸದರಿ ರಸ್ತೆಗಳ ದುರಸ್ತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಈ) ದಿನಾಂಕ:೦೧.೦೬.೨೦೨೩ ರಿಂದ ಇಲ್ಲಿಯವರೆಗೆ ಬೆಂಗಳೂರು ನಗರ ವ್ಯಾಪ್ತಿಗೆ ಬರುವ ರಸ್ತೆಗಳ ಅಭಿವೃದ್ಧಿಗೆ ಎಷ್ಟು ಅನುದಾನ ಮೀಸಲಿಡಲಾಗಿದೆ ; ಈವರೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ಸಂಪೂರ್ಣ ವಿವರ ಒದಗಿಸುವುದು)

## ರಾಜ್ಯದಲ್ಲಿರುವ ಪೊಲೀಸ್ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೪೭ (೧೩೮೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೦೩ ವರ್ಷಗಳಿಂದ ವರ್ಗಾವಣೆಯಾಗದೇ ಒಂದೇ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಇನ್ಸ್‌ಪೆಕ್ಟರ್‌ಗಳ ಸಂಖ್ಯೆ ಎಷ್ಟು ; (ಇನ್ಸ್‌ಪೆಕ್ಟರ್ ಹಾಗೂ ಠಾಣೆಗಳ ಜಿಲ್ಲಾವಾರು ವಿವರ ಒದಗಿಸುವುದು)

(ಆ) ಸದರಿ ಇನ್ಸ್‌ಪೆಕ್ಟರ್‌ಳನ್ನು ವರ್ಗಾವಣೆ ಮಾಡದೆ ಇರಲು ಕಾರಣವೇನು ; (ವಿವರ ಒದಗಿಸುವುದು)

(ಇ) ಇನ್ಸ್‌ಪೆಕ್ಟರ್‌ಳನ್ನು ವರ್ಗಾವಣೆ ಮಾಡಲು ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ? (ವಿವರ ಒದಗಿಸುವುದು)

## ನಮ್ಮ ಮೆಟ್ರೋ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೮ (೧೪೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಮ್ಮ ಮೆಟ್ರೋ ರೈಲು ಯೋಜನೆಯು ಬೆಂಗಳೂರು ನಗರದ ಸಂಚಾರ ವ್ಯವಸ್ಥೆಯ ಜೀವನಾಡಿಯಾಗಿದ್ದು, ೯ ಲಕ್ಷಕ್ಕೂ ಹೆಚ್ಚಿನ ಜನರು ಪ್ರತಿ ನಿತ್ಯ ಮೆಟ್ರೋ ಸೇವೆಯನ್ನು ಬಳಸುತ್ತಿರುವುದರಿಂದ ಇಲ್ಲಿಯವರೆಗೆ ಎಷ್ಟು ಕಿ.ಮೀ. ಉದ್ದದ ಸಂಚಾರಿ ಮಾರ್ಗ ಪೂರ್ಣಗೊಂಡಿದೆ ;

(ಆ) ೨೦೨೫–೨೬ನೇ ಸಾಲಿನಲ್ಲಿ ಸದರಿ ಸಂಸ್ಥೆಯಿಂದ ಎಷ್ಟು ಕಿ.ಮೀ. ಉದ್ದದ ಸಂಚಾರಿ ಮಾರ್ಗವನ್ನು ನಿರ್ಮಿಸಲು ಉದ್ದೇಶಿಸಿದೆ ; ಇದಕ್ಕಾಗಿ ಎಷ್ಟು ಅನುದಾನ ಮೀಸಲಿಡಲಾಗಿದೆ ;

(ಇ) ಇತ್ತೀಚಿನ ದಿನಗಳಲ್ಲಿ ಏಕಾಏಕಿ ದರವನ್ನು ೪೫%–೫೦%ಕ್ಕೆ ಏರಿಕೆ ಮಾಡಿರುವುದರಿಂದ ಈ ದರಗಳನ್ನು ಕಡಿಮೆಗೊಳಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ?

## ರಾಜ್ಯದ ವಿವಿಧ ಜಿಲ್ಲೆ/ತಾಲ್ಲೂಕುಗಳಲ್ಲಿ ವಿಜ್ಞಾನ ಕೇಂದ್ರ/ ತಾರಾಲಯಗಳನ್ನು ಆರಂಭಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೪೯ (೧೪೯೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ, ಹಾಸನ, ಮಡಿಕೇರಿ, ಶಿರಸಿ, ಬೆಳಗಾವಿ, ವಿಜಯಪುರ, ಬಾಗಲಕೋಟೆ, ಗದಗ ಮತ್ತು ಧಾರವಾಡದಲ್ಲಿ ವಿಜ್ಞಾನ ಕೇಂದ್ರ /ತಾರಾಲಯಗಳನ್ನು ಆರಂಭಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಸ್ಥಳಗಳಲ್ಲಿ ಪ್ರಾರಂಭಿಸಲಾಗಿದೆ ಮತ್ತು ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಖರ್ಚು ಮಾಡಲಾದ ಮೊತ್ತವೆಷ್ಟು ;

(ಇ) ಸದರಿ ಜಿಲ್ಲೆ/ತಾಲ್ಲೂಕುಗಳಲ್ಲಿ ವಿಜ್ಞಾನ ಕೇಂದ್ರ/ತಾರಾಲಯಗಳನ್ನು ಪ್ರಾರಂಭಿಸಲು ಆಗುತ್ತಿರುವ ಅಡಚಣೆಗಳೇನು ಮತ್ತು ಉಳಿದ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ನಿರ್ವಹಣೆ ಮಾಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೨೫೦ (೧೪೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸಿ.ಆ.ಸು. ಇಲಾಖೆಯು ಆದೇಶ/ಸುತ್ತೋಲೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸೂಚಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸದೆ ಮತ್ತು ನಿರ್ವಹಣೆ ಮಾಡದೇ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಇಲಾಖೆಗಳಲ್ಲಿ ನಿರ್ವಹಣೆ ಮಾಡಲಾಗುತ್ತಿದೆ ಮತ್ತು ನಿರ್ವಹಣೆ ಮಾಡಲಾಗುತ್ತಿಲ್ಲ ; ದಾಖಲಿಸದೆ ಹಾಗೂ ನಿರ್ವಹಣೆ ಮಾಡದೇ ಇದ್ದಲ್ಲಿ ಕಾರಣಗಳೇನು ;

(ಇ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು e-PRS(e-Performance Reporting System) ತಂತ್ರಾಂಶದ ಮೂಲಕ ದಾಖಲಿಸುವಂತೆ ಹಾಗೂ ಈ ಉದ್ದೇಶಕ್ಕಾಗಿ Custodian, Alternate Custodian, PAR Manager ಗಳನ್ನು ವಿವಿಧ ಇಲಾಖೆಗಳಲ್ಲಿ ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ಅವರುಗಳ ಸಂಪೂರ್ಣ ಮಾಹಿತಿ ನೀಡುವುದು ; ಗುರುತಿಸದೇ ಇದ್ದಲ್ಲಿ ಕಾರಣಗಳೇನು ; ಯಾವಾಗ ಗುರುತಿಸಲಾಗುವುದು ;

(ಈ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ ಈ ಕುರಿತು ಸರ್ಕಾರದ ನಿಲುವೇನು ;

(ಉ) ಸೇವಾನಿಯಮಗಳಿಗೆ ಸಂಬಂಧಿಸಿದಂತೆ ಬಡ್ತಿ, ಜ್ಯೇಷ್ಠತಾಪಟ್ಟಿ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ, ವಾರ್ಷಿಕ ಕಾರ್ಯನಿರ್ವಹಣಾ ವರದಿ, ಇತರೇ ವಿಷಯಗಳಿಗೆ ಸಂಬಂಧಿಸಿದಂತೆ ಸಿ.ಆ.ಸು.ಇಲಾಖೆಯಿಂದ ಆದೇಶ/ ಸುತ್ತೋಲೆಗಳನ್ನು ಹೊರಡಿಸಲಾಗಿದ್ದರೂ ಸಹ ವಿವಿಧ ಇಲಾಖೆಗಳು ಸಮಯೋಚಿತವಾಗಿ ಅನುಷ್ಠಾನಗೊಳಿಸುವಲ್ಲಿ ವಿಳಂಬ ಮತ್ತು ವಿಫಲವಾಗುತ್ತಿರಲು ಕಾರಣಗಳೇನು ; ಸಮಯೋಚಿತವಾಗಿ ಅನುಷ್ಠಾನಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಲೆಕ್ಕಪತ್ರ ಕಾರ್ಯಗಳಿಗೆ ಕೆಳಹಂತದ ಹುದ್ದೆಗಳಿಗೆ ಆಯಾ ಇಲಾಖೆಗಳಲ್ಲಿ ಬಡ್ತಿ ನೀಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೨೫೧ (೧೪೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಗೆ ಮಂಜೂರಾಗಿರುವ ಮತ್ತು ಈ ಇಲಾಖೆಯಿಂದ ಅನ್ಯ ಇಲಾಖೆ, ನಿಗಮ ಹಾಗೂ ಮಂಡಳಿಗಳಿಗೆ ನಿಯೋಜನೆ ಮೇರೆಗೆ ಮೀಸಲಿರಿಸಿದ ಗ್ರೂಪ್ ಎ. ಬಿ ಮತ್ತು ಸಿ ವೃಂದದ ಹುದ್ದೆಗಳು ಎಷ್ಟು ; ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಎಷ್ಟು ; ಖಾಲಿ ಹುದ್ದೆಗಳು ಎಷ್ಟು ; (ಹುದ್ದೆಗಳ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಕ.ರಾ.ಲೆ.ಪ. ಮತ್ತು ಲೆಕ್ಕಪತ್ರ ಇಲಾಖೆಯಿಂದ ನಿಯೋಜನೆಗೆ ಮೀಸಲಿರಿಸಿದ ಹುದ್ದೆಗಳನ್ನು ಹಂಚಿಕೆ ಮಾಡುವಲ್ಲಿನ ತೊಡಕುಗಳನ್ನು ನಿವಾರಿಸುವ ಕುರಿತು ಸರ್ಕಾರದ ಮುಖ್ಯಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಇಲ್ಲಿಯವರೆಗೆ ಎಷ್ಟು ಸಭೆಗಳನ್ನು ನಡೆಸಲಾಗಿದೆ ; (ನಡೆದಿರುವ ಎಲ್ಲಾ ಸಭೆಗಳ ಸಭಾ ನಡವಳಿಗಳ ಪ್ರತಿಗಳೊಂದಿಗೆ ದಿ:೩೧/೦೧/೨೦೧೭ರಂದು ಹೊರಡಿಸಿರುವ ಆದೇಶದ ಪ್ರತಿ ಒದಗಿಸುವುದು ರಾಜ್ಯ ಲೆಕ್ಕಪತ್ರ ಇಲಾಖೆಯಿಂದ ಇತರೆ ಇಲಾಖೆಗಳಲ್ಲಿ ನಿಯೋಜನೆ ಮೇರೆಗೆ ಮೀಸಲಿರಿಸಿದ ಹುದ್ದೆಗಳಿಗೆ ಹಂಚಿಕೆ ಮತ್ತು ನಿಯೋಜನೆ ಮಾಡುವ ಕುರಿತು ದಿ:೩೦.೧೦.೨೦೧೨ ರಿಂದ ಇಲ್ಲಿಯವರೆಗೆ ಆರ್ಥಿಕ ಇಲಾಖೆಯು ಹೊರಡಿಸಿರುವ ಆದೇಶವೇನು ; (ಎಲ್ಲಾ ಆದೇಶ ಸುತ್ತೋಲೆ ಹಾಗೂ ಮಾರ್ಗಸೂಚಿಗಳ ಪ್ರತಿಗಳನ್ನು ನೀಡುವುದು)

(ಇ) ಸಂಬಂಧಪಟ್ಟ ಇಲಾಖೆಗಳಲ್ಲಿನ ಪ್ರ.ದ.ಲೆ.ಸಹಾಯಕ ಹುದ್ದೆಗೆ ವೃಂದ ಮತ್ತು ನೇಮಕಾತಿ ನಿಯಮಗಳಿಲ್ಲದಿರುವುದರಿಂದ ದಿ:೩೦.೧೦.೨೦೧೨ರ ಮಾರ್ಗಸೂಚಿಗಳನ್ನು ಅನುಸರಿಸಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸುವ ಅಥವಾ ಕಾರ್ಯಕಾರಿ ಆದೇಶ ಹೊರಡಿಸಿರುವ ಕುರಿತು ಹಾಗೂ ಲೆಕ್ಕಪತ್ರ ಕಾರ್ಯಗಳಿಗಾಗಿ ಕೆಳಹಂತದ ಹುದ್ದೆಗಳಲ್ಲಿ ಕಿ/ದ್ವಿ.ಲೆ.ಸ.ಪ್ರ.ದ.ಲೆ.ಸ ಮತ್ತು ಲೆಕ್ಕಾಧೀಕ್ಷಕರು ಸಾಧಾರಣವಾಗಿ ವೃಂದಬಲದ ಶೇ.೫೦ಕ್ಕಿಂತ ಹೆಚ್ಚಾಗದಂತೆ ಸಂಬಂಧಪಟ್ಟ ಇಲಾಖೆಗಳಲ್ಲಿ ಕೌಶಲ್ಯ ಮತ್ತು ಅನುಭವ ಹೊಂದಿದ ಸಿಬ್ಬಂದಿಗಳಿಗೆ ಪದೋನ್ನತಿ ನೀಡುವ ಮೂಲಕ ಭರ್ತಿ ಮಾಡುವ ಕುರಿತು ಆದೇಶಗಳಿದ್ದಾಗ್ಯೂ ಕೆಲವೊಂದು ಇಲಾಖೆಗಳಲ್ಲಿ ಪಾಲಿಸದೇ ಇರುವುದರಿಂದ ಆ ಹುದ್ದೆಗಳು ಖಾಲಿಯೇ ಇದ್ದು, ಆಡಳಿತಾತ್ಮಕವಾಗಿ ತೊಂದರೆಯಾಗುತ್ತಿರುವ ಹಿನ್ನಲೆಯಲ್ಲಿ ಸಂಬಂಧಪಟ್ಟ ಇಲಾಖೆಗಳಲ್ಲಿ ಅರ್ಹರಿಗೆ ಪದೋನ್ನತಿ ನೀಡುವ ಮೂಲಕ

ಕೆಳಹಂತದ ಹುದ್ದೆಗಳನ್ನು ೫೦%ಗೆ ಹೆಚ್ಚಾಗದಂತೆ ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯ ಸ್ಪಷ್ಟ ನಿಲುವೇನು ? (ಈ ಕುರಿತು ಸಂಪೂರ್ಣ ಮಾಹಿತಿಯನ್ನು ನೀಡುವುದು)

## ಸರ್ಕಾರದ ಸಚಿವಾಲಯದ ಹುದ್ದೆಗಳನ್ನು ಕಡಿತ ಮಾಡಿರುವ ಬಗ್ಗೆ

**ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :–**

೧೨೫೨ (೧೪೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದ ವೃಂದ ಮತ್ತು ನೇಮಕಾತಿ ನಿಯಮಗಳು, ೧೯೯೨ ಮತ್ತು ೨೦೧೯ರನ್ವಯ ಶಾಖಾಧಿಕಾರಿ ವೃಂದದಲ್ಲಿ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ;

(ಆ) ದಿನಾಂಕ:೦೧.೦೧.೧೯೯೨ ರಿಂದ ೦೧.೦೨.೨೦೨೫ರವರೆಗೂ ಶಾಖಾಧಿಕಾರಿ ವೃಂದದಲ್ಲಿ ಸೃಜನೆ ಮಾಡಿರುವ ಹಾಗೂ ರದ್ದು ಮಾಡಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ಸದರಿ ವೃಂದದಲ್ಲಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿಗಳ ಸಂಖ್ಯೆ ಎಷ್ಟು ; (ಸ್ಥಳ ನಿರೀಕ್ಷಣೆ, ನಿಯೋಜನೆ ಹಾಗೂ ಅನ್ಯ ಕರ್ತವ್ಯದ ಮೇಲೆ ಸೇವೆ ಸಲ್ಲಿಸುತ್ತಿರುವ ಸ್ಥಳೀಯ ವೃಂದ ಮತ್ತು ಕಲ್ಯಾಣ ಕರ್ನಾಟಕ ಶಾಖಾಧಿಕಾರಿ ವೃಂದದ ಅಧಿಕಾರಿಗಳ ಮಾಹಿತಿಯನ್ನು ನೀಡುವುದು)

(ಈ) ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ ೪೪೦ ವೆಚ್ಚ–೧೨/೨೦೨೪ ದಿನಾಂಕ:೩೦.೦೯.೨೦೨೪ರನ್ವಯ ಆರ್ಥಿಕ ಇಲಾಖೆಯು ೧೨ ಶಾಖಾಧಿಕಾರಿ ಹುದ್ದೆಗಳನ್ನು ಯಾವ ಆಧಾರದ ಮೇಲೆ ಕಡಿಮೆಗೊಳಿಸಲು ಸಹಮತಿಯನ್ನು ನೀಡಿದೆ ; (ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಉ) ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಇಲಾಖಾವಾರು ಹಾಗೂ ಶಾಖಾವಾರು ಮಂಜೂರಾದ ಶಾಖಾಧಿಕಾರಿಗಳ ಸಂಖ್ಯೆ ಎಷ್ಟು ? (ಹುದ್ದೆ ಸೃಜನೆಯಾದ ಆದೇಶದೊಂದಿಗೆ ಮಾಹಿತಿ ನೀಡುವುದು)

## ನ್ಯಾಯಾಂಗ ಇಲಾಖೆಯಲ್ಲಿ ಮೂಲಸೌಕರ್ಯದ ಕೊರತೆ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೩ (೧೪೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನ್ಯಾಯಾಂಗ ಇಲಾಖೆಯ ಮೂಲಸೌಕರ್ಯ ಅಭಿವೃದ್ಧಿಗೆ ಸಾಕಷ್ಟು ಅನುದಾನ ದೊರೆಯದೇ ಇರುವುದರಿಂದ ನ್ಯಾಯಾಂಗ ಇಲಾಖೆಯ ಕಟ್ಟಡ ಸೇರಿದಂತೆ ಇತರ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ನ್ಯಾಯಾಂಗ ಇಲಾಖೆಯ ಮೂಲಸೌಕರ್ಯ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ದೊರೆತಿರುವ ಅನುದಾನ ಎಷ್ಟು ; (ವಿವರ ಒದಗಿಸುವುದು)

(ಇ) ಸದರಿ ಅನುದಾನದಲ್ಲಿ ನ್ಯಾಯಾಂಗ ಇಲಾಖೆಯ ಕಟ್ಟಡ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕೈಗೊಂಡಿರುವ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಈ) ನ್ಯಾಯಾಂಗ ಇಲಾಖೆಯಲ್ಲಿ ಪ್ರಸ್ತುತ ಮಂಜೂರಾಗಿರುವ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಉ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ ;

(ಊ) ಅವಶ್ಯಕ ಸಿಬ್ಬಂದಿ ಹಾಗೂ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಈ ಕೂಡಲೇ ಸೂಕ್ತ ಕ್ರಮ ವಹಿಸುವುದೇ ?

## ಹಲವಾರು ವಿದೇಶಿಗರು ಡ್ರಗ್ಸ್ ಪೆಡ್ಲರ್ಸ್ ಆಗಿ ದಂಧೆಯಲ್ಲಿ ತೊಡಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೪ (೧೪೭೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಲವಾರು ವಿದೇಶಿಗರು ಡ್ರಗ್ಸ್ ಪೆಡ್ಲರ್ಸ್ ಆಗಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಡ್ರಗ್ಸ್ ಮಾರಾಟ ದಂಧೆಯಲ್ಲಿ ತೊಡಗಿರುವ ಎಷ್ಟು ಜನ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಪ್ರಕರಣಗಳು ದಾಖಲಾಗಿವೆ ; (ವಿವರ ನೀಡುವುದು)

(ಇ) ಅಕ್ರಮವಾಗಿ ನೆಲೆಸಿರುವುದರ ಜೊತೆಗೆ ಡ್ರಗ್ಸ್ ಮಾರಾಟ ದಂಧೆಯಲ್ಲಿ ನಿರಂತರವಾಗಿ ಭಾಗಿಯಾಗುತ್ತಿರುವ ಈ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಕಾಲೇಜುಗಳ ವಿದ್ಯಾರ್ಥಿಗಳನ್ನೇ ಗುರಿಯಾಗಿಸಿಕೊಂಡು ಅವರನ್ನು ಡ್ರಗ್ಸ್ ಜಾಲಕ್ಕೆ ಸೆಳೆಯುತ್ತಿರುವ ಹಲವಾರು ಪ್ರಕರಣಗಳಲ್ಲಿ ಬಹು ಮುಖ್ಯವಾಗಿ ಈ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ಕೈವಾಡ ಕಂಡುಬಂದಿದ್ದು, ಸರ್ಕಾರ ಈಗಲಾದರೂ ವಿದೇಶಿ ಡ್ರಗ್ಸ್ ಪೆಡ್ಲರ್ಸ್‌ಗಳ ವಿರುದ್ಧ ಅತ್ಯಂತ ಕಠಿಣ ಕ್ರಮಗಳನ್ನು ಕೈಗೊಂಡು ವ್ಯಾಪಕವಾಗಿ ಹರಡಿರುವ ಡ್ರಗ್ಸ್ ಜಾಲಕ್ಕೆ ಶಾಶ್ವತವಾಗಿ ಕಡಿವಾಣ ಹಾಕಲು ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ ?

## ತೆಲಂಗಾಣಕ್ಕೆ ನೀರು ಬಿಟ್ಟಿರುವುದಕ್ಕೆ ರೈತರು ವಿರೋಧವಾಗಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೫ (೧೪೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯದಿಂದ ಬೇಸಿಗೆಯನ್ನು ಲೆಕ್ಕಿಸದೇ ಹಲವಾರು ಟಿ.ಎಂ.ಸಿ ಅಡಿಗಳಷ್ಟು ನೀರನ್ನು ತೆಲಂಗಾಣಕ್ಕೆ ಹರಿಸಿರುವುದಕ್ಕೆ ರೈತರು ವ್ಯಾಪಕ ವಿರೋಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದ ರೈತರ ಹಿತವನ್ನು ಸಂಪೂರ್ಣವಾಗಿ ಕಡೆಗಣಿಸಿ ಬಿರುಬೇಸಿಗೆಯನ್ನು ಲೆಕ್ಕಿಸದೇ ಹಲವಾರು ಟಿ.ಎಂ.ಸಿ ಅಡಿಗಳಷ್ಟು ನೀರನ್ನು ಹರಿಸಿರುವುದಕ್ಕೆ ಇರುವ ಕಾರಣಗಳೇನು ;

(ಇ) ತೆಲಂಗಾಣಕ್ಕೆ ನೀರು ಬಿಟ್ಟರೆ ಬೇಸಿಗೆಯಲ್ಲಿ ತೊಂದರೆ ಆಗುವ ಕಾರಣ ನೀರು ಬಿಡಬಾರದು ಎಂದು ಅಧಿಕಾರಿಗಳು ತಮ್ಮ ಸ್ಪಷ್ಟ ಅಭಿಪ್ರಾಯ ತಿಳಿಸಿದ್ದರೂ ಕೂಡ ಸರ್ಕಾರ ಅದನ್ನು ಮೀರಿ ನೀರು ಬಿಡುವ ಮೂಲಕ ರಾಜ್ಯದ ರೈತರ ಹಿತಾಸಕ್ತಿ ಕಾಪಾಡಲು ಸಂಪೂರ್ಣವಾಗಿ ವಿಫಲವಾಗಿದೆ ಎಂದು ರೈತರು ಆರೋಪಿಸಿದ್ದು. ಈ ಕುರಿತು ಸರ್ಕಾರದ ವಿವರಣೆಗಳೇನು ;

(ಈ) ಇನ್ನು ಮುಂದೆಯಾದರೂ ಈ ರೀತಿ ಬೇರೆ ರಾಜ್ಯಗಳಿಗೆ ನೀರು ಬಿಡುವ ಮೊದಲು ಸರ್ಕಾರ ಆ ವ್ಯಾಪ್ತಿಯ ರೈತರೊಂದಿಗೆ ಪೂರ್ವಭಾವಿ ಸಭೆ ನಡೆಸಿ ಅವರ ಅಭಿಪ್ರಾಯವನ್ನು ಆಲಿಸಿ ಪರಿಗಣಿಸಲು ಅಗತ್ಯ ಕ್ರಮ ವಹಿಸುವುದೇ ?

## ಸೈಬರ್ ಕ್ರೈಂ ಪ್ರಕರಣಗಳನ್ನು ತಡೆಯಲು ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೬ (೧೪೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ಸೈಬರ್ ಕ್ರೈಂ ಸಂಬಂಧಿತ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಆ) ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸೈಬರ್ ಕ್ರೈಂ ಪ್ರಕರಣಗಳು ವ್ಯಾಪಕವಾಗಿ ಮತ್ತು ನಿರಂತರವಾಗಿ ನಡೆಯುತ್ತಿದ್ದು ಅವುಗಳನ್ನು ನಿಯಂತ್ರಣಕ್ಕೆ ತರಲು ಸರ್ಕಾರ ಇದುವರೆಗೆ ವಿಫಲವಾಗಿರಲು ಕಾರಣಗಳೇನು ;

(ಇ) ರಾಜ್ಯದಲ್ಲಿ ವ್ಯಾಪಕವಾಗಿ ನಡೆಯುತ್ತಿರುವ ಸೈಬರ್ ಕ್ರೈಂ ಪ್ರಕರಣಗಳನ್ನು ಶಾಶ್ವತವಾಗಿ ತಡೆಯಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಮಂಜೂರು ಮಾಡುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೭ (೧೪೧೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆ, ಲಿಂಗಸುಗೂರು ತಾಲ್ಲೂಕಿನ ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಮಂಜೂರು ಮಾಡಬೇಕೆಂದು ಬೇಡಿಕೆ ಬಹುಕಾಲದಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಕಟ್ಟಡ ಮಂಜೂರು ಮಾಡಿ, ಅಗತ್ಯ ಸಿಬ್ಬಂದಿಗಳನ್ನು ಒದಗಿಸಿ ಆ ಮೂಲಕ ಅಗ್ನಿಶಾಮಕ ಠಾಣೆ ಕಾರ್ಯಾರಂಭ ಮಾಡಲು ಇದುವರೆವಿಗೂ ಸರ್ಕಾರ ಅಗತ್ಯ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಹಟ್ಟಿ ಪಟ್ಟಣಕ್ಕೆ ಅಗ್ನಿಶಾಮಕ ಠಾಣೆ ಕಟ್ಟಡ ಮಂಜೂರು ಮಾಡಿ ಅದು ಕಾರ್ಯಾರಂಭ ಮಾಡಲು ಸರ್ಕಾರ ಅಗತ್ಯ ಕ್ರಮ ವಹಿಸುವುದು ?

## ಕೆ.ಪಿ.ಎಸ್.ಸಿ. ನಡೆಸಿದ ೨೦೧೫ ಬ್ಯಾಚ್ ಗೆಜೆಟೆಡ್ ಪ್ರೊಬೇಷನರ್ಸ್ ಪರೀಕ್ಷೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೮ (೧೪೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ನೇ ಬ್ಯಾಚ್ ಗೆಜೆಟೆಡ್ ಪ್ರೋಬೇಷನರ್ಸ್ ಹುದ್ದೆಗಳ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿದ ನಂತರ ಅಂಕಗಳಿಗೆ ಯಾರು ದೃಢೀಕರಿಸಿ ಸಹಿ ಮಾಡಿರುತ್ತಾರೆ ;

(ಆ) ಪ್ರತಿ ಅಭ್ಯರ್ಥಿಯ ಪ್ರತಿ ಪತ್ರಿಕೆಯ ಮೌಲ್ಯಮಾಪನ ಮಾಡಿದ ನಂತರ ಆ ಅಂಕಗಳಿಗೆ ಯಾರು ದೃಢೀಕರಿಸಿರುತ್ತಾರೆ ; ಒಟ್ಟಾರೆ ಎಲ್ಲಾ ಅಭ್ಯರ್ಥಿಗಳ ಅಂಕಗಳಿಗೆ ಕೆ.ಪಿ.ಎಸ್.ಸಿ ವತಿಯಿಂದ ಯಾವ ಅಧಿಕಾರಿಗಳು ದೃಢೀಕರಿಸಿರುತ್ತಾರೆ ;

(ಇ) ಪರೀಕ್ಷಾ ನಿಯಂತ್ರಕರು ಮತ್ತು ಕೆ.ಪಿ.ಎಸ್.ಸಿ ಕಾರ್ಯದರ್ಶಿಗಳು ಈ ಅಂಕಪಟ್ಟಿಗಳನ್ನು ದೃಢೀಕರಿಸಿರುವುದಿಲ್ಲ ಎಂಬುದು ನಿಜವೇ ; ಹಾಗಿದ್ದಲ್ಲಿ, ಈ ಬ್ಯಾಚ್‌ನ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳ ಮೌಲ್ಯಮಾಪನದಲ್ಲಿ ಪಡೆದ ಅಂಕಗಳಿಗೆ ಯಾರು ದೃಢೀಕರಿಸಿ ಸಹಿ ಮಾಡಿರುತ್ತಾರೆ ;

(ಈ) ೨೦೧೫ನೇ ಬ್ಯಾಚ್‌ನ ಗೆಜೆಟೆಡ್ ಪ್ರೋಬೇಷನರ್ಸ್ ಹುದ್ದೆಗಳ ಮುಖ್ಯ ಪರೀಕ್ಷೆಯು ಉತ್ತರ ಪತ್ರಿಕೆಗಳನ್ನು ಡಿಜಿಟಲ್ ಮೌಲ್ಯಮಾಪನ ಮಾಡಲು ಟಿ.ಸಿ.ಎಸ್ ಕಂಪನಿಗೆ ವಹಿಸಿದ್ದು ನಿಜವೇ; ಹಾಗಿದ್ದಲ್ಲಿ, ಯಾವ ದಿನಾಂಕದಂದು ಮೌಲ್ಯಮಾಪನವನ್ನು ಪ್ರಾರಂಭಿಸಲಾಗಿದೆ ಮತ್ತು ಯಾವ ದಿನಾಂಕದಂದು ಮೌಲ್ಯಮಾಪನವನ್ನು ಮುಕ್ತಾಯಗೊಳಿಸಲಾಗಿದೆ ;

(ಉ) ಈ ಬ್ಯಾಚ್‌ನ ಮುಖ್ಯ ಪರೀಕ್ಷೆಯ ಉತ್ತರ ಪತ್ರಿಕೆಗಳನ್ನು ಡಿಜಿಟಲ್ ಮೌಲ್ಯಮಾಪನ ಮಾಡಲು ಕೆ.ಪಿ.ಎಸ್.ಸಿ. ಮತ್ತು ಟಿ.ಸಿ.ಎಸ್ ಕಂಪನಿಗೆ ಗುತ್ತಿಗೆ ಕರಾರನ್ನು (Contract Agreement) or (Memorandum of Understanding) ಯಾವ ದಿನಾಂಕದಂದು ಮಾಡಿಕೊಳ್ಳಲಾಗಿದೆ ? (ಗುತ್ತಿಗೆ ಕರಾರಿನ ಪ್ರತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯಲ್ಲಿ ನಡೆದಿರುವ ಮನೆಗಳ್ಳತನ ಪ್ರಕರಣಗಳ ತನಿಖೆ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೯ (೧೪೯೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷದಿಂದ ಚಿಕ್ಕಮಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಮನೆಗಳ್ಳತನ ಪ್ರಕರಣಗಳು ದಾಖಲಾಗಿವೆ ; ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳನ್ನು ಪತ್ತೆ ಹಚ್ಚಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ಅಪರಾಧಿಗಳನ್ನು ಪತ್ತೆ ಹಚ್ಚಲು ಸಾಧ್ಯವಾಗಿರುವುದಿಲ್ಲ ; (ಪೊಲೀಸ್ ಠಾಣೆವಾರು ಪ್ರಕರಣಗಳ ವಿವರ ಒದಗಿಸುವುದು)

(ಆ) ಎಷ್ಟು ಪ್ರಕರಣಗಳಲ್ಲಿ ಕಳವಾದ ವಸ್ತುಗಳನ್ನು ವಶಪಡಿಸಿಕೊಂಡು ಮಾಲೀಕರಿಗೆ ಹಿಂದಿರುಗಿಸಲಾಗಿದೆ ; (ವಿವರ ಒದಗಿಸುವುದು)

(ಇ) ನಗರ ವ್ಯಾಪ್ತಿಯಲ್ಲಿ ಸಿಬ್ಬಂದಿಗಳ ಕೊರತೆಯಿಂದ ರಾತ್ರಿ ಗಸ್ತನ್ನು ವ್ಯವಸ್ಥಿತವಾಗಿ ಮಾಡಲು ಕಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಏನು ಕ್ರಮಕೈಗೊಂಡಿದೆ ? (ವಿವರ ಒದಗಿಸುವುದು)

## ಲೋಕಾಯುಕ್ತ ದಾಳಿಗೊಳಗಾದ ಅಧಿಕಾರಿ/ನೌಕರರ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೦ (೧೪೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಿಂದ ರಾಜ್ಯದಲ್ಲಿ ಲೋಕಾಯುಕ್ತ ದಾಳಿಗೆ ಒಳಗಾದ ಸರ್ಕಾರಿ ಅಧಿಕಾರಿ/ನೌಕರರ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

(ಆ) ದಾಳಿ ವೇಳೆ ಈ ಅಧಿಕಾರಿ/ನೌಕರರಿಂದ ವಶಪಡಿಸಿಕೊಳ್ಳಲಾದ ಆಸ್ತಿ–ಪಾಸ್ತಿಗಳೆಷ್ಟು ; (ಅಧಿಕಾರಿ/ನೌಕರರ ಹೆಸರು ಸಹಿತ ವಿವರ ನೀಡುವುದು)

(ಇ) ದಾಳಿಗೆ ಒಳಗಾದ ಎಷ್ಟು ಅಧಿಕಾರಿ/ನೌಕರರನ್ನು ಸೇವೆಯಿಂದ ಅಮಾನತ್ತು ಮಾಡಲಾಗಿದೆ; ಲೋಕಾಯುಕ್ತ ಸಂಸ್ಥೆಯಿಂದ ಅಧಿಕಾರಿ/ನೌಕರರ ಅಮಾನತ್ತು ಸಂಬಂಧ ಸರ್ಕಾರಕ್ಕೆ ಕೋರಿಕೆ ಸಲ್ಲಿಕೆಯಾಗಿದೆಯೇ ; (ಸಮಗ್ರ ಮಾಹಿತಿ ನೀಡುವುದು)

(ಈ) ಲೋಕಾಯುಕ್ತ ದಾಳಿಗೆ ಒಳಗಾದ ಎಷ್ಟು ಜನ ಅಧಿಕಾರಿ/ನೌಕರರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಸರ್ಕಾರಕ್ಕೆ ಕೋರಿಕೆ ಬಂದಿದೆ ; ರಾಜ್ಯ ಸರ್ಕಾರ ಎಷ್ಟು ಪ್ರಕರಣಗಳಲ್ಲಿ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದೆ ?

## ರಾಜ್ಯದಲ್ಲಿ ಹೆಚ್ಚಳಗೊಂಡಿರುವ ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ವಿಫಲವಾಗಿರುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೧ (೧೪೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಕೊಲೆ, ಅತ್ಯಾಚಾರ, ಮಹಿಳೆ–ಮಕ್ಕಳ ಮೇಲಿನ ದೌರ್ಜನ್ಯ, ಗಲಭೆ, ಗ್ಯಾಂಗ್‌ವಾರ್ ಸೇರಿದಂತೆ ಅಪರಾಧ ಪ್ರಕರಣಗಳು ಹೆಚ್ಚಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಳೆದ ಎರಡು ವರ್ಷದಿಂದ (೨೦೨೪, ನವೆಂಬರ್ ಅಂತ್ಯದವರೆಗೆ) ನಡೆದಿರುವ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಅಪರಾಧ ಪ್ರಕರಣಗಳು ಹೆಚ್ಚಳವಾಗಲು ಕಾರಣಗಳೇನು ; ಅಪರಾಧ ಪ್ರಕರಣಗಳನ್ನು ತಡೆಯುವಲ್ಲಿ ಸರ್ಕಾರ ಏಕೆ ವಿಫಲವಾಗಿದೆ ;

(ಇ) ಎಷ್ಟು ಪ್ರಕರಣಗಳಲ್ಲಿ ಎಫ್.ಐ.ಆರ್. ದಾಖಲಾಗಿದೆ; ಪತ್ತೆ ಹಚ್ಚಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಅಪರಾಧ ಕೃತ್ಯಗಳನ್ನು ತಡೆಯಲು ವಿಫಲವಾಗಿರುವ ಎಷ್ಟು ಜನ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಕ್ರಮಕೈಗೊಳ್ಳಲಾಗಿದೆ ?

## ಘನತ್ಯಾಜ್ಯ ನಿರ್ವಹಣಾ ಘಟಕಗಳನ್ನು ಸ್ಥಾಪನೆ ಮಾಡುವ ಕುರಿತು

**ಶ್ರೀ ಎಸ್. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೨ (೧೪೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೆಂಗಳೂರು ಮಹಾನಗರದಿಂದ ಉತ್ಪತ್ತಿಯಾಗುತ್ತಿರುವ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಬೆಂಗಳೂರು ನಗರದ ನಾಲ್ಕು ದಿಕ್ಕುಗಳಲ್ಲಿ ಘನತ್ಯಾಜ್ಯ ನಿರ್ವಹಣಾ ಘಟಕಗಳನ್ನು ನಿರ್ಮಾಣ ಮಾಡುವ ಯೋಜನೆಯನ್ನು ಸರ್ಕಾರ ರೂಪಿಸಿದೆಯೇ ; ರೂಪಿಸಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ?

## ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು

**ಶ್ರೀ ಎಸ್. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೩ (೧೪೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆಗಳ ವಿವರಗಳೊಂದಿಗೆ ಇಲಾಖಾವಾರು ಮಾಹಿತಿ ನೀಡುವುದು)

(ಆ) ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಬ್ಯಾಕ್‌ಲಾಗ್ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗಳು ಬಹಳ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಹುದ್ದೆಗಳನ್ನು ತ್ವರಿತವಾಗಿ ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಣ ಗ್ಯಾರಂಟಿ ಬಳಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೪ (೧೪೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೪೦,೦೦೦ ಕೋಟಿಯಷ್ಟು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರಿಗಾಗಿ ಮಿಸಲಿಟ್ಟ ಹಣ ಗ್ಯಾರಂಟಿ ಯೋಜನೆಗೆ ಬಳಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಪಂಚ ಗ್ಯಾರಂಟಿಗೆ ವೆಚ್ಚವಾಗುವ ರೂ.೫೨,೦೦೦ ಕೋಟಿಯಲ್ಲಿ ರೂ.೪೦,೦೦೦ ಕೋಟಿ ರೂ.ಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮೀಸಲಿಟ್ಟ ಹಣವನ್ನೇ ಬಳಸಿರುವುದು ನಿಜವೆ ; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಪಂಚ ಗ್ಯಾರಂಟಿಗೆ ವೆಚ್ಚವಾದ ಮೊತ್ತವೆಷ್ಟು ; (ಗ್ಯಾರಂಟಿವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಸರ್ಕಾರವು ಯಾವ ಯಾವ ಮೂಲಗಳಿಂದ ಎಷ್ಟು ಮೊತ್ತದ ಸಾಲವನ್ನು ಪಡೆದಿದೆ ? (ವಿವರ ನೀಡುವುದು)

## ಕೆ.ಸಿ.ವ್ಯಾಲಿ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೫ (೧೪೬೫) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಸಿ. ವ್ಯಾಲಿ ಯೋಜನೆಯ ಒಟ್ಟು ಯೋಜನಾ ವೆಚ್ಚ ವೆಷ್ಟು; ಇದುವರೆಗೆ ಆದ ವೆಚ್ಚ ಎಷ್ಟು; ಇದರಿಂದ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಕೆ.ಸಿ. ವ್ಯಾಲಿ ಯೋಜನೆಯ ಅನ್ವಯ ನಿರ್ಮಿಸಲಾದ ಕಾಲುವೆಯ ಒಟ್ಟು ಉದ್ದ ಎಷ್ಟು; ಇನ್ನು ಎಷ್ಟು ಉದ್ದದ ಕಾಲುವೆ ನಿರ್ಮಿಸಲು ಬಾಕಿ ಇದೆ ; ಕೆ.ಸಿ ವ್ಯಾಲಿ ಯೋಜನೆ ಯಾವಾಗ ಪೂರ್ಣಗೊಳ್ಳುತ್ತದೆ ? (ವಿವರ ನೀಡುವುದು)

## ಮದರಸದಲ್ಲಿ ಅನೈತಿಕ ಚಟುವಟಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೬ (೧೪೬೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮದರಸಗಳಲ್ಲಿ ದೊಡ್ಡ ಪ್ರಮಾಣದಲ್ಲಿ ಅನೈತಿಕ ಘಟನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಥಣಿಸಂದ್ರದ ಮದರಸದಲ್ಲಿ ಅಪ್ರಾಪ್ತ ಹೆಣ್ಣು ಮಗುವಿನ ಮೇಲೆ ದೌರ್ಜನ್ಯ ನಡೆಸಿದ ಆರೋಪಿಯ ಮೇಲೆ ಪೋಕ್ಸೋ ಪ್ರಕರಣ ದಾಖಲು ಮಾಡಲಾಗಿದೆಯೇ ; (ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಮದರಸಗಳಲ್ಲಿ ಅಕ್ರಮ ವಾಸ ಮಾಡುತ್ತಿದ್ದ ಎಷ್ಟು ವಿದೇಶಿಯರನ್ನು ಬಂಧಿಸಲಾಗಿದೆ ; (ವಿವರ ನೀಡುವುದು)

(ಇ) ಮದರಸಗಳಲ್ಲಿ ಅಕ್ರಮ ಶಸ್ತ್ರಾಸ್ತ್ರ ಸೇರಿದಂತೆ ಕಲ್ಲು ಪೆಟ್ರೋಲ್ ಬಾಂಬು, ಮಾದಕ ದ್ರವ್ಯಗಳನ್ನು ಸಂಗ್ರಹಿಸಿ ಇಡುವ ಪ್ರದೇಶವಾಗಿರುವ ಕುರಿತು ಸರ್ಕಾರದ ನಿಲುವೇನು; ಕಾಲಕಾಲಕ್ಕೆ ಮದರಸಗಳ ಪರಿಶೀಲನೆಯ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಸೈಬರ್ ವಂಚನೆ ಮತ್ತು ಡಿಜಿಟಲ್ ಅರೆಸ್ಟ್ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೭ (೧೪೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಲ್ಲಿ ಸೈಬರ್ ವಂಚನೆ ಮತ್ತು ಡಿಜಿಟಲ್ ಅರೆಸ್ಟ್ ಕುರಿತಂತೆ ಎಷ್ಟು ಪ್ರಕರಣಗಳು ದಾಖಲಾಗಿವೆ ; (ಜಿಲ್ಲಾವಾರು ಪ್ರಕರಣಗಳ ಎಫ್ಐಆರ್ ಸಂಖ್ಯೆ ಪೊಲೀಸ್ ಠಾಣೆಯ ಹೆಸರಿನೊಂದಿಗೆ ಮಾಹಿತಿ ನೀಡುವುದು)

(ಆ) ಸೈಬರ್ ವಂಚನೆ ಮತ್ತು ಡಿಜಿಟಲ್ ಅರೆಸ್ಟ್ ನಿಂದ ವಂಚನೆ ಆಗಿರುವ ಒಟ್ಟು ಮೊತ್ತ ಎಷ್ಟು; ಶೋಷಣೆಗೆ ಒಳಗಾಗಿರುವ ಜನರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಸೈಬರ್ ವಂಚನೆ ಮತ್ತು ಡಿಜಿಟಲ್ ಅರೆಸ್ಟ್‌ನ ಎಷ್ಟು ಆರೋಪಿಗಳನ್ನು ಬಂಧಿಸಲಾಗಿದೆ ; ವಸೂಲಿ ಮಾಡಲಾಗಿರುವ ಮೊತ್ತ ಎಷ್ಟು ? (ವಿವರ ನೀಡುವುದು)

## ರಸ್ತೆ ವಿಭಾಜಕಗಳ ಅಕ್ರಮ ತೆರವು ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೮ (೧೪೬೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಲ್ಕ್ ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ ೨೦ ಮತ್ತು ೨೧ರ ನಡುವಿನ ರಾಷ್ಟ್ರೀಯ ಹೆದ್ದಾರಿಯ ೭ರ ನಡುವಿನ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿದ ಬಳಿಕ ಈ ಪ್ರದೇಶದಲ್ಲಿ ಆದ ಅಫಘಾತಗಳ ಸಂಖ್ಯೆ ಎಷ್ಟು; ಇದರಿಂದ ಪ್ರಾಣ ಹಾನಿ ಮತ್ತು ಶಾಶ್ವತ ಅಂಗವಿಕಲರಾದವರ ಸಂಖ್ಯೆ ಎಷ್ಟು ;

(ಆ) ಖಾಸಗಿ ಬಿಲ್ಡರ್‌ಗಳು ನೀಡಿದ ಲಂಚದ ಆಸೆಗಾಗಿ ಜನಸಾಮಾನ್ಯರ ಪ್ರಾಣದೊಂದಿಗೆ ಚೆಲ್ಲಾಟವಾಡುತ್ತಿರುವ ಸಂಬಂಧಿಸಿದ ಅಧಿಕಾರಿಗಳ ಮೇಲೆ ಕೈಗೊಂಡ ಕ್ರಮಗಳೇನು ;

(ಇ) ಈ ಪ್ರದೇಶದಲ್ಲಿ ಯಾವುದೇ ವ್ಯಕ್ತಿಯ ಪ್ರಾಣ ಹಾನಿಯಾದಲ್ಲಿ ಅದನ್ನು ಕೊಲೆ ಎಂಬುದಾಗಿ ಪರಿಗಣಿಸಿ ಈ ಅಧಿಕಾರಿಗಳ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಕ್ರಮ ಕೈಗೊಳ್ಳಲಾಗುವುದೆ ; ಈ ಬಗ್ಗೆ ಸರ್ಕಾರದ ನಿಲುವೇನು;

(ಈ) ೨೦ ಮತ್ತು ೨೧ರ ನಡುವಿನ ರಾಷ್ಟ್ರೀಯ ಹೆದ್ದಾರಿಯ ೭ರ ನಡುವಿನ ರಸ್ತೆ ವಿಭಾಜಕಗಳನ್ನು ಪೊಲೀಸ್ ಇಲಾಖೆ ವತಿಯಿಂದ ತೆರವುಗೊಳಿಸಲಾಗಿರುವ ಕುರಿತು ಸರ್ಕಾರದ ನಿಲುವೇನು ?

# ರಾಜ್ಯದ ಪೊಲೀಸ್ ಠಾಣೆಗಳಲ್ಲಿ ವರದಿಯಾಗಿರುವ ಪ್ರಕರಣಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೬೯ (೧೪೧೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪೋಲಿಸ್ ಠಾಣೆಗಳಲ್ಲಿ ವರದಿಯಾಗಿರುವ ಪ್ರಕರಣಗಳಲ್ಲಿ ಇಲ್ಲಿಯವರೆಗೆ ಮಾನ್ಯ ಉಚ್ಚ ನ್ಯಾಯಲಯದಿಂದ ತಡೆಯಾಜ್ಞೆ ನೀಡಿರುವ ಪ್ರಕರಣಗಳೆಷ್ಟು ; (ವರ್ಷವಾರು ಮಾಹಿತಿ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ತನಿಖಾಧಿಕಾರಿಯವರ ಅಭಿಪ್ರಾಯ ಪಡೆದ ನಂತರ ತಡೆಯಾಜ್ಞೆ ನೀಡಿರುವ ಪ್ರಕರಣಗಳು ಎಷ್ಟು ; (ತನಿಖಾಧಿಕಾರಿಯವರ ಅಭಿಪ್ರಾಯ ಪಡೆದ ನಂತರ ತಡೆಯಜ್ಞೆ ನೀಡಿರುವ ಪ್ರಕರಣಗಳು ಎಷ್ಟು) ತನಿಖಾಧಿಕಾರಿಯವರ ಅಭಿಪ್ರಾಯ ಪಡೆಯದೇ ನೇರವಾಗಿ ತಡೆಯಾಜ್ಞೆ ನೀಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಬಹಳ ಪ್ರಕರಣಗಳಲ್ಲಿ ತನಿಖೆಗೆ ತಡೆಯಾಜ್ಞೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ತರಹ ತನಿಖೆಗೆ ತಡೆಯಾಜ್ಞೆ ಇರುವುದರಿಂದ ನೊಂದವರು ಠಾಣೆಗಳಲ್ಲಿ ದೂರುಗಳನ್ನು ದಾಖಲಿಸಿದ್ದು, ಈ ಕ್ರಮದಿಂದ ಅವರಿಗೆ ಅನ್ಯಾಯ ಆಗುವುದಿಲ್ಲವೆ ; ತಡೆಯಾಜ್ಞೆ ತೆರವುಗೊಳಿಸದೇ ಇದ್ದಲ್ಲಿ, ಪೋಲಿಸ್ ಇಲಾಖೆ ಮೇಲೆ ಇಟ್ಟಿರುವ ಭರವಸೆಯುನ್ನು ಸಾರ್ವಜನಿಕರು ಕಳೆದುಕೊಂಡಂತೆ ಆಗುವುದಿಲ್ಲವೆ ;

(ಉ) ಸರ್ಕಾರದ ಮಟ್ಟದಲ್ಲಿ ತಡೆಯಾಜ್ಞೆ ನೀಡುವ ಪ್ರಕರಣಗಳ ಬಗ್ಗೆ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಧೀಶರ ಗಮನಕ್ಕೆ ತರಲಾಗಿದೆಯೇ ; ಈ ರೀತಿ ತಡೆ ನೀಡಿರುವುದರಿಂದ ಪೋಲಿಸ್ ತನಿಖೆಯ ಬಗ್ಗೆ ಅಪನಂಬಿಕೆ ಬರುವುದಿಲ್ಲವೇ ?

## ರಾಜ್ಯ ಸಿವಿಲ್ ಸೇವೆಯಲ್ಲಿನ ವಿವಿಧ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೭೦ (೧೪೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸಿವಿಲ್ ಸೇವೆಯಲ್ಲಿನ ವಿವಿಧ ವೃಂದದ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಖಾಯಂ ಪೂರ್ವ ಸೇವಾವಧಿಘೋಷಣೆ/ಸ್ವಯಂಚಾಲಿತ ವೇತನ ಬಡ್ತಿ/ಇತರೆ ಸಮಯದಲ್ಲಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಸಲ್ಲಿಸುವಂತೆ ಸಂಬಂಧಿಸಿದ ಅಧಿಕಾರಿಗಳು ಆದೇಶಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ವ್ಯವಸ್ಥಿತವಾಗಿ ಹಾಗೂ ಸಮರ್ಪಕವಾಗಿ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ನಿರ್ವಹಿಸದೇ ಇರುವುದರಿಂದ ಸಮಯೋಚಿತವಾಗಿ ಸಲ್ಲಿಸಲು ಕಷ್ಟಸಾಧ್ಯವಾಗುತ್ತಿರುವ ಕಾರಣ ಕೆಲವೊಂದು ಇಲಾಖಾಧಿಕಾರಿಗಳು ಸಂಬಂಧಪಟ್ಟ ಅಧಿಕಾರಿಗಳ ವಿಶೇಷ ವರದಿ ದೃಢೀಕರಣವನ್ನು ಪರಿಗಣಿಸುತ್ತಿರುವ ಕುರಿತು ಸರ್ಕಾರದ ನಿಲುವೇನು ;

(ಇ) ವಿಶೇಷ ವರದಿ ಪರಿಗಣಿಸುವುದಾದಲ್ಲಿ, ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲಾಗಿದೆಯೇ ; ಯಾವ ರೀತಿ ನಿರ್ದೇಶನ ನೀಡಲಾಗಿದೆ ; ವಿಶೇಷ ವರದಿ ಪರಿಗಣಿಸದೇ ಇದ್ದಲ್ಲಿ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆಯಾ ವರ್ಷದಲ್ಲಿ ಬರೆಯುವ ಮತ್ತು ನಿರ್ವಹಿಸುವ ಕುರಿತು ಸರ್ಕಾರದ ಆದೇಶಗಳಿದ್ದಾಗ್ಯೂ ಸಹ ಸಮಯೋಚಿತವಾಗಿ ನಿರ್ವಹಣೆ ಮಾಡುವ ಕುರಿತು ಸರ್ಕಾರಕ್ಕೆ ಕೈಗೊಂಡಿರುವ ಕ್ರಮಗಳೇನು ; ವ್ಯವಸ್ಥಿತವಾಗಿ ನಿರ್ವಹಣೆ ಮಾಡದೇ ಇದ್ದಲ್ಲಿ, ಕಾರಣಗಳೇನು ; ಅಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

## ಸರ್ಕಾರದ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತ್ವರಿತವಾಗಿ ರೂಪಿಸುವ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೧೨೭೧ (೧೪೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ತ್ವರಿತವಾಗಿ ರೂಪಿಸುವ ಹಾಗೂ ಮೂರು ವರ್ಷಗಳಿಗೊಮ್ಮೆ ಪರಿಶೀಲಿಸುವ ಕುರಿತು ಸರ್ಕಾರದಿಂದ ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಲಾಗಿದೆಯೇ ; ಹಾಗಿದ್ದಲ್ಲಿ, ಇಲಾಖೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲು ಅಗತ್ಯ ಕಾರಣಗಳು ಏನು ; ಯಾವ ಉದ್ದೇಶಗಳಿಗಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗುತ್ತದೆ ; (ಮಾಹಿತಿ ನೀಡುವುದು)

(ಆ) ೨೦೦೪ ರಿಂದ ಇಲ್ಲಿಯವರೆಗೆ ಸರ್ಕಾರದಿಂದ ಹಲವಾರು ಸುತ್ತೋಲೆಗಳು ಮತ್ತು ನೆನಪೋಲೆಗಳನ್ನು ಹೊರಡಿಸಲಾಗಿದ್ದರೂ ಇದುವರೆಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಮತ್ತು ಪರಿಷ್ಕರಿಸದಿರುವ ಇಲಾಖೆಗಳು ಯಾವುವು ; ಪರಿಷ್ಕರಿಸಿರುವ ಇಲಾಖೆಗಳಲ್ಲಿ ಪರಿಷ್ಕರಿಸಲು ಕಾರಣಗಳೇನು ; ಪರಿಷ್ಕರಿಸದಿರುವ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸುವ ಅಗತ್ಯವಿಲ್ಲವೇ ; ಅಗತ್ಯವಿದ್ದಲ್ಲಿ, ಇದುವರೆಗೆ ಪರಿಷ್ಕರಿಸದಿರಲು ಕಾರಣಗಳೇನು ;

(ಇ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ದೀರ್ಘಕಾಲದಿಂದ ಪರಿಷ್ಕರಿಸದಿರುವ ಇಲಾಖೆಗಳಲ್ಲಿ ಸಮಗ್ರವಾಗಿ ಪರಿಷ್ಕರಿಸುವ ಕುರಿತು ಸರ್ಕಾರ ಕ್ರಮ ವಹಿಸುವುದೇ ; ಹಾಗಿದ್ದಲ್ಲಿ, ಸರ್ಕಾರ ಯಾವುದಾದರೂ ಕಾಲಮಿತಿ ನಿಗದಿಪಡಿಸಿದೆಯೇ ; ಹಾಗಿದ್ದಲ್ಲಿ, ಕನಿಷ್ಟ ಮೂರು ಗರಿಷ್ಟ ಆರು ತಿಂಗಳೊಳಗಾಗಿ ಪರಿಷ್ಕರಣೆ ಮಾಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ; ಈ ಕುರಿತು ಸರ್ಕಾರದ ನಿಲುವೇನು ; (ಮಾಹಿತಿ ನೀಡುವುದು)

(ಈ) ಪರಿಷ್ಕರಿಸದಿರುವ ಇಲಾಖೆಗಳ ಮುಖ್ಯಸ್ಥರುಗಳ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು ? (ಮಾಹಿತಿ ನೀಡುವುದು)

## ಬಿ.ಬಿ.ಎಂ.ಪಿ ಯ ಆಡಳಿತದಲ್ಲಿ ೨೦೨೨–೨೩ನೇ ಸಾಲಿನ ಹಣಕಾಸು ಲೆಕ್ಕ ಪರಿಶೋಧನೆ ವರದಿಯ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೧೨೭೨ (೧೪೦೩) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜನಪ್ರತಿನಿಧಿಗಳಿಲ್ಲದೇ ಕೇವಲ ಅಧಿಕಾರಿಗಳೇ ನಡೆಸುತ್ತಿರುವ ಬಿ.ಬಿ.ಎಂ.ಪಿ ಯ ಆಡಳಿತದಲ್ಲಿ ೨೦೨೨–೨೩ನೇ ಸಾಲಿನ ಹಣಕಾಸು ನಿರ್ವಹಣೆಗೆ ಸಂಬಂಧಿಸಿದಂತೆ ಲೆಕ್ಕ ಪರಿಶೋಧನಾ ವರದಿಯಿಂದ ಬೆಳಕಿಗೆ ಬಂದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಆಕ್ಷೇಪಣಾ ವರದಿಯಲ್ಲಿ ಉಲ್ಲೇಖಿಸಿರುವ ಒಟ್ಟು ಮೊತ್ತ ಎಷ್ಟು;

(ಆ) ಲೆಕ್ಕಪರಿಶೋಧನಾ ವರದಿಯಲ್ಲಿ ಅಕ್ರಮಗಳಿಗೆ ಕಾರಣರಾಗಿರುವ ಅಧಿಕಾರಿಗಳಿಂದ ಹಾಗೂ ಗುತ್ತಿಗೆದಾರರಿಂದ ಅಕ್ರಮ ಹಣ ವಸೂಲಿಗೆ ಶಿಫಾರಸ್ಸು ಮಾಡಿದ್ದಲ್ಲಿ ಸದರಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರುಗಳು ಯಾರು ಅವರ ಹೆಸರುಗಳೇನು ;

(ಇ) ಬಿ.ಬಿ.ಎಂ.ಪಿ ಯಲ್ಲಿನ ೨೦೧೭–೧೮ನೇ ಸಾಲಿನಿಂದ ೨೦೨೧–೨೨ನೇ ಸಾಲಿನವರೆಗೆ ನಡೆಸಲಾಗಿರುವ ಲೆಕ್ಕಪರಿಶೋಧನೆಯಲ್ಲಿ ಪತ್ತೆ ಹಚ್ಚಲಾಗಿರುವ ಅಕ್ರಮಗಳಿಗೆ ಸಂಬಂಧಿಸಿದ ವರ್ಷಾವಾರು ಮೊತ್ತಗಳೆಷ್ಟು ;

(ಈ) ಈ ಅವಧಿಯಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದಂತೆ ಯಾವ ಯಾವ ಅಧಿಕಾರಿಗಳಿಂದ ಹಾಗೂ ಯಾವ ಯಾವ ಗುತ್ತಿಗೆದಾರರಿಂದ ಅಕ್ರಮ ಹಣ ವಸೂಲು ಮಾಡಲಾಗಿದೆ ;

(ಉ) ಸದರಿ ಅವಧಿಯಲ್ಲಿನ ಬಿ.ಬಿ.ಎಂ.ಪಿ ಅಕ್ರಮಗಳಿಗೆ ಸಂಬಂಧಿಸಿದಂತೆ ಸೂಕ್ತ ಸಮಜಾಯಿಷಿ ಸಲ್ಲಿಸದ ಕಾರಣ ಬಾಕಿ ಉಳಿದಿರುವ ಅಕ್ರಮಗಳಿಗೆ ಸಂಬಂಧಿಸಿದ ವರ್ಷಾವಾರು ಮೊತ್ತ ಎಷ್ಟು ;

(ಊ) ಸದರಿ ಅವಧಿಯಲ್ಲಿ ನಡೆದಿರುವ ಅಕ್ರಮಗಳಿಗೆ ಕಾರಣರಾದ ಯಾವ ಯಾವ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲಾಗಿದೆ ಹಾಗೂ ಯಾವ ಯಾವ ಗುತ್ತಿಗೆದಾರರ ವಿರುದ್ಧ ಕೇಸ್ ದಾಖಲಾಗಿದೆ ?

## “ಎ” ಹಾಗೂ “ಬಿ” ವೃಂದಕ್ಕೆ ಸೇರಿರುವ ಅಧಿಕಾರಿಗಳು ದಿನಾಂಕ : ೦೧–೦೨–೨೦೨೫ರ ದಿನಾಂಕದಿಂದ ಅನುಸಾರ ಸ್ಥಳ ನಿರೀಕ್ಷಣೆಯಲ್ಲಿರುವ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :–**

೧೨೭೩ (೧೪೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಜ್ಯದಲ್ಲಿ ಸರ್ಕಾರಿ ನೌಕರರ ಪೈಕಿ "ಎ" ಹಾಗೂ "ಬಿ" ವೃಂದಕ್ಕೆ ಸೇರಿದ ಎಷ್ಟು ಮಂದಿ ಅಧಿಕಾರಿಗಳು ದಿನಾಂಕ:೦೧.೦೨.೨೦೨೫ರ ದಿನಾಂಕದ ಅನುಸಾರ ಸ್ಥಳ ನಿರೀಕ್ಷಣೆಯಲ್ಲಿರುತ್ತಾರೆ: ಸರ್ಕಾರದ ಎಲ್ಲಾ ಇಲಾಖೆಯ ಸ್ಥಳ ನಿರೀಕ್ಷಣೆಯಲ್ಲಿರುವ ಅಧಿಕಾರಿಗಳ ವಿವರ ಒದಗಿಸುವುದು ; ಈ ಸ್ಥಳ ನಿರೀಕ್ಷಣೆಯಲ್ಲಿರುವ ಅಧಿಕಾರಿಗಳಿಗೆ ಸರ್ಕಾರದ ಬೊಕ್ಕಸದಿಂದ ಪ್ರತಿ ತಿಂಗಳು ನೀಡಲಾಗುತ್ತಿರುವ ವೇತನದ ಒಟ್ಟು ಮೊತ್ತ ಎಷ್ಟು ? (ವಿವರ ಒದಗಿಸುವುದು)

## ಕೆ.ಎಸ್.ಆರ್.ಪಿ ಹಾಗೂ ಐ.ಆರ್.ಬಿ ಘಟಕಗಳಲ್ಲಿ ಐದು ವರ್ಷಕ್ಕಿಂತಲೂ ಹೆಚ್ಚು ಕಾಲ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು ಹಾಗೂ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೭೪ (೧೫೦೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಪಿ ಹಾಗೂ ಐ.ಆರ್.ಬಿ ಘಟಕಗಳಲ್ಲಿ ಐದು ವರ್ಷಕ್ಕಿಂತಲೂ ಅಧಿಕವಾಗಿ ಒಂದೇ ಸ್ಥಳದಲ್ಲಿ ಕರ್ತವ್ಯ

ನಿರ್ವಹಿಸುತ್ತಿರುವ ಸ್ಪೆಷಲ್ ರಿಜರ್ವ್ ಪೊಲೀಸ್ ಇನ್ಸ್‌ಪೆಕ್ಟರ್ (ಶಿಬಿರ ನಾಯಕರು. ಸುಬೇದಾರ್, ಮೇಜರ್. ವಾಹನಸಾರಿಗೆ ಅಧಿಕಾರಿ. ಕಂಪನಿ ಕಮಾಂಡರ್)ಗಳ ಸಂಖ್ಯೆ ಎಷ್ಟು; ಅಂತಹವರನ್ನು ನಿಯಮಾವಳಿಯ ಪ್ರಕಾರ ವರ್ಗಾವಣೆ ಮಾಡದೇ ಇರಲು ಕಾರಣಗಳೇನು ;

(ಆ) ಸ್ಪೆಷಲ್ ರಿಜರ್ವ್ ಪೊಲೀಸ್ ಇನ್ಸ್‌ಪೆಕ್ಟರ್ ಹಾಗೂ ಸಹಾಯಕ ಕಮಾಂಡೆಂಟ್ ಹುದ್ದೆಯಲ್ಲಿ ಎಷ್ಟು ಬ್ಯಾಕ್‌ಲಾಗ್ ಹುದ್ದೆಗಳು ಖಾಲಿ ಇವೆ ? (ಮಾಹಿತಿ ನೀಡುವುದು)

## ಪಿ.ಎಸ್.ಐ–೫೪೫ ಹುದ್ದೆಗಳ ನೇಮಕಾತಿಯ ಆಯ್ಕೆ ಪಟ್ಟಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ೪೦ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡದೇ ಇರುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೭೫ (೧೫೦೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಎಸ್.ಐ–೫೪೫ ಹುದ್ದೆಗಳ ನೇಮಕಾತಿಯ ಆಯ್ಕೆ ಪಟ್ಟಿಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ೪೦ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡದಿರಲು ಕಾರಣವೇನು ;

(ಆ) WP–೧೬೩೪೩ ಈ ಪ್ರಕರಣವು RSI ಹುದ್ದೆಗಳಿಗೆ ಸಂಬಂಧಿಸಿದ್ದಾಗಿದ್ದು ಇದೇ ಕಾರಣವನ್ನು PSI– ೫೪೫ ಹುದ್ದೆಗಳಲ್ಲಿನ ಕಲ್ಯಾಣ ಕರ್ನಾಟಕ ಭಾಗದ ೪೦ ಅಭ್ಯರ್ಥಿಗಳಿಗೆ ಅನ್ವಯಿಸುತ್ತಿರಲು ಕಾರಣವೇನು ; (ಮಾಹಿತಿ ನೀಡುವುದು)

(ಇ) WP–೧೬೩೪೩ಗೆ ಸಂಬಂಧಿಸಿದಂತೆ ಈಗಾಗಲೇ RSI ಅಭ್ಯರ್ಥಿಗಳನ್ನು ತರಬೇತಿ ಮುಗಿಸಿ ಕೆಲಸಕ್ಕೆ ಸ್ಥಳ ನಿಯುಕ್ತಿಗೊಳಿಸಲಾಗಿದೆ ಹಾಗೂ PSI–೫೪೫ ಹುದ್ದೆಗಳಲ್ಲಿ ೫೦೫ ಅಭ್ಯರ್ಥಿಗಳು ಕೂಡ ಈಗಾಗಲೇ ತರಬೇತಿಗೆ ಹಾಜರಾಗಿದ್ದಾರೆ, ಆದರೆ ಇದರಿಂದಾಗಿ ಕಲ್ಯಾಣ ಕರ್ನಾಟಕ ಭಾಗದ ೪೦ ಅಭ್ಯರ್ಥಿಗಳು ಅತಂತ್ರ ಪರಿಸ್ಥಿತಿಯಲ್ಲಿ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಇವರಿಗೆ ನೇಮಕಾತಿ ಆದೇಶ ನೀಡಲಾಗುವುದು ? (ವಿವರಣೆ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸದಾಗಿ ಕೆಎಸ್‌ಐಎಸ್‌ಎಫ್ ಘಟಕವನ್ನು (ಬೆಟಾಲಿಯನ್) ಸೃಜಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೭೬ (೧೫೦೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೊಸದಾಗಿ ಕೆಎಸ್‌ಐಎಸ್‌ಎಫ್ ಘಟಕವನ್ನು (ಬೆಟಾಲಿಯನ್) ಸೃಜಿಸುವ ಯಾವುದಾದರು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಈ ಹಿಂದೆ ೨೦೧೯–೨೦ರಲ್ಲಿ ಮಾನ್ಯ ಡಿ.ಜಿ ಮತ್ತು ಐ.ಜಿ ರವರು ಕಲ್ಯಾಣ ಕರ್ನಾಟಕ ಭಾಗಕ್ಕೆ ಪ್ರತ್ಯೇಕವಾಗಿ ಘಟಕವನ್ನು ಸೃಜಿಸುವ ಪ್ರಸ್ತಾವನೆಯನ್ನು ನೀಡಿದ್ದರೂ ಕೂಡ ಇದನ್ನು ಪರಿಗಣನೆಗೆ ತೆಗೆದುಕೊಳ್ಳದೇ ಇತ್ತೀಚೆಗಷ್ಟೆ ಮೈಸೂರು ಜಿಲ್ಲೆಗೆ ಈ ಘಟಕವನ್ನು ಸ್ಥಾಪಿಸುವ ಪ್ರಸ್ತಾವನೆಯು ೨೦೨೩–೨೦೨೪ರಲ್ಲಿ ಸಲ್ಲಿಸಿರುವುದನ್ನು ಪರಿಗಣಿಸಲು ಕಾರಣವೇನು ;

(ಇ) ಪ್ರತ್ಯೇಕ ಘಟಕದ ಕೊರತೆಯಿಂದಾಗಿ ಈ ಕಲ್ಯಾಣ ಕರ್ನಾಟಕ ಭಾಗದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಮುಂಬಡ್ತಿಯಲ್ಲಿ ಅನ್ಯಾಯವಾಗುತ್ತಿದ್ದು, ಈ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಯಾವ ಕಾಲಮಿತಿಯಲ್ಲಿ ಪ್ರತ್ಯೇಕ ಕೆಎಸ್ಐಎಸ್ಎಫ್ ಘಟಕವನ್ನು ಸ್ಥಾಪಿಸಲಾಗುವುದೇ ?

## ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ನೌಕರರಿಂದ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ಆರ್ಥಿಕ ಹೊರೆಯ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೭೭ (೧೫೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹಾಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ನಿವೃತ್ತ ಸರ್ಕಾರಿ ನೌಕರರನ್ನು ಕೂಡಲೇ ಸೇವೆಯಿಂದ ಬಿಡುಗಡೆಗೊಳಿಸಿ, ಸದರಿ ಹುದ್ದೆಗಳಿಗೆ ಹಾಲಿ ಸರ್ಕಾರಿ ಸೇವೆಯಲ್ಲಿರುವ ಅಧಿಕಾರಿ, ನೌಕರರುಗಳನ್ನು ನಿಯೋಜನೆ ಮಾಡಲು ಆದೇಶಿಸಿದ್ದರು ಈ ಆದೇಶವು ಎಲ್ಲಾ ಇಲಾಖೆಗಳಲ್ಲಿ ಪಾಲಿಸಲಾಗುತ್ತಿದೆಯೇ ; ಪಾಲಿಸುತ್ತಿದ್ದಲ್ಲಿ, ಎಷ್ಟು ಜನ ನಿವೃತ್ತ ಅಧಿಕಾರಿಗಳನ್ನು ಸೇವೆಯಿಂದ ಬಿಡುಗಡೆಗೊಳಿಸಲಾಗಿದೆ ; (ಇಲಾಖಾವಾರು ವಿವರಣೆ ನೀಡುವುದು)

(ಆ) ಸರ್ಕಾರದ ವಿವಿಧ ಇಲಾಖೆಗಳ ಕಾರ್ಯದರ್ಶಿ, ಉಪ ಕಾರ್ಯದರ್ಶಿ ಹಾಗೂ ಇತರೆ ಹುದ್ದೆಗಳಲ್ಲಿ ಹಾಗೂ ಇಲಾಖೆಗಳ

ಅಡಿಯಲ್ಲಿ ಬರುವ ವಿವಿಧ ನಿಗಮ, ಮಂಡಳಿ, ಆಯುಕ್ತಾಲಯಗಳು ಹಾಗೂ ನಿರ್ದೇಶನಾಲಯಗಳಲ್ಲಿ ನಿವೃತ್ತ ಅಧಿಕಾರಿಗಳನ್ನು ನಿಯೋಜನೆ ಮಾಡಿಕೊಂಡಿರುವುದು ಈ ಬಗ್ಗೆ ಹಿಂದಿನ ಮುಖ್ಯ ಕಾರ್ಯದರ್ಶಿಗಳು ಬಿಡುಗಡೆಗೊಳಿಸಲು ಎಲ್ಲಾ ಇಲಾಖೆಗಳಿಗೆ ನಿರ್ದೇಶನ ನೀಡಿದ್ದರು ಬಿಡುಗಡೆಗೊಳಿಸದೇ ಇರಲು ಕಾರಣಗಳೇನು ; (ಇಲಾಖಾವಾರು ವಿವರಣೆ ನೀಡುವುದು)

(ಇ) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ನಿರ್ದೇಶನ ನೀಡಿದ್ದರು ಕೂಡ ಇಲ್ಲಿಯವರೆಗೂ ಬಿಡುಗಡೆ ಮಾಡದೇ ಇರಲು ಕಾರಣವೇನು ?

## ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿಗೆ ಆರ್ಥಿಕ ಅನುಮೋದನೆ ನೀಡುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೨೭೮ (೧೫೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ವಿವಿಧ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆಯೇ ; ಸಲ್ಲಿಕೆಯಾಗಿದ್ದಲ್ಲಿ ಯಾವ ಯಾವ ಇಲಾಖೆಗಳಿಂದ ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ ; ಅವುಗಳಲ್ಲಿ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅನುಮೋದನೆ ನೀಡಲಾಗಿದೆ ;

(ಆ) ಪ್ರಸ್ತುತ ರಾಜ್ಯ ಸರ್ಕಾರದಲ್ಲಿ ಖಾಲಿಯಿರುವ (ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಕಳಿಸಿರುವ ೩೮೪

ಹುದ್ದೆಗಳ ನೇಮಕಾತಿಯನ್ನು ಹೊರತು ಪಡಿಸಿ) ಕೆಎಎಸ್ ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳ ಸಂಖ್ಯೆ ಎಷ್ಟು; ಮಂಜೂರಾಗಿರುವ ಮತ್ತು ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು ವಿವರ ನೀಡುವುದು)

(ಇ) ಪ್ರಸ್ತುತ ನೇಮಕಾತಿ ಹಂತದಲ್ಲಿರುವ ೩೮೪ ಕೆಎಎಸ್ ಗೆಜೆಟೆಡ್ ಪ್ರೊಬೆಷನರ್ಸ್ ಹುದ್ದೆಗಳನ್ನು ಹೊರತುಪಡಿಸಿ ಇನ್ನೂ ಎಷ್ಟು ಹುದ್ದೆಗಳ ನೇಮಕಾತಿಗಾಗಿ ಅನುಮೋದನೆಯನ್ನು ನೀಡಲಾಗಿದೆ ? (ಮಾಹಿತಿಯನ್ನು ಒದಗಿಸುವುದು)

## ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಯ ಬುಡಕಟ್ಟು ಜನಾಂಗದ ಕಾಲೋನಿ ಅಭಿವೃದ್ಧಿ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು ) :–**

೧೨೭೯ (೧೪೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಬುಡಕಟ್ಟು ಜನಾಂಗಗಳು, ವಾಸಿಸುವ ಕುಟುಂಬಗಳು ಮತ್ತು ಗ್ರಾಮಗಳಲ್ಲಿರುವ ಜನಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ವಾಸಿಸುವ ಬುಡಕಟ್ಟು ಜನಾಂಗದ ಕಾಲೋನಿಗಳ ಅಭಿವೃದ್ಧಿಗೆ ೨೦೨೪–೨೫ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ? (ವಿವರ ನೀಡುವುದು)

## ಪ್ರವಾಸೋದ್ಯಮ ಇಲಾಖೆಯಲ್ಲಿ ಹೊಸ ಯೋಜನೆಗಳ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು ) :–**

೧೨೮೦ (೧೪೯೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರವು ಪ್ರವಾಸೋದ್ಯಮ ನೀತಿಯನ್ನು ಎಂದಿನಿಂದ ಜಾರಿಗೆ ತರಲಾಗಿದೆ ; ಹೊಸ ನೀತಿಯಡಿ ಪ್ರವಾಸಿಗರಿಗೆ ಸೌಲಭ್ಯಗಳನ್ನು ಒದಗಿಸಲು ತೆಗೆದುಕೊಂಡ ಕ್ರಮಗಳಾವುವು ; (ವಿವರ ನೀಡುವುದು)

(ಆ) ನೂತನ ನೀತಿಯಡಿ ರೂಪಿಸಲಾಗಿರುವ ಹೊಸ ಯೋಜನೆಗಳಾವುವು ; ಇದಕ್ಕೆ ಮೀಸಲಿಟ್ಟ ಅನುದಾನವೆಷ್ಟು ? (ವಿವರ ನೀಡುವುದು)

## ಕೆಪಿಎಸ್‌ಸಿ ನೇಮಕಾತಿ ಮತ್ತು ಪರೀಕ್ಷೆ ನಡೆಸುವಲ್ಲಿ ಆಗುತ್ತಿರುವ ವಿಳಂಬ ಮತ್ತು ಅಕ್ರಮ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೨೮೧ (೧೪೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪದವೀಧರರ ಆಶಾಕಿರಣವಾಗಬೇಕಿದ್ದ ಕೆಪಿಎಸ್‌ಸಿ ಇಂದು ನೇಮಕಾತಿ ಮತ್ತು ಪರೀಕ್ಷೆಗಳನ್ನು ನಡೆಸುವಲ್ಲಿ ಆಗುತ್ತಿರುವ ವಿಳಂಬ ಮತ್ತು ಅಕ್ರಮಗಳಿಗೆ ಕಾರಣಗಳೇನು ;

(ಆ) ಇಷ್ಟೆಲ್ಲಾ ಅಕ್ರಮಗಳು/ಹಗರಣಗಳು ನಡೆಯುತ್ತಿದ್ದರೂ ಸರ್ಕಾರ ಕ್ರಮವಹಿಸದಿರಲು ಕಾರಣಗಳೇನು ;

(ಇ) ಈ ಸಂಸ್ಥೆಯ ಮೇಲೆ ಹಗರಣಗಳು ಆಗುತ್ತಿದ್ದರು ಸರ್ಕಾರ ಕಠಿಣ ಕ್ರಮ ಕೈಗೊಂಡು ಸುಧಾರಣೆ ಮಾಡದಿರುವುದಕ್ಕೆ ಸಾವಿರಾರು ಉದ್ಯೋಗ ಆಕಾಂಕ್ಷಿ ಪದವೀಧರ ಯುವಕರ ಕನಸುಗಳನ್ನು ಸಾಕಾರಗೊಳಿಸಲು ಸರ್ಕಾರವೆ ನಿರ್ಲಕ್ಷ್ಯ ವಹಿಸುತ್ತಿದೆಯೇ ;

(ಈ) ಕೆಪಿಎಸ್‌ಸಿಯ ಅಧ್ಯಕ್ಷರು/ಸದಸ್ಯರುಗಳ ನಡುವೆ ಸಮನ್ವಯವಿಲ್ಲದಿರುವುದು ಕಾರಣವೇ ; ಈ ಬಗ್ಗೆ ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಕೆಪಿಎಸ್‌ಸಿ ಯು ಸುಧಾರಣೆಗಾಗಿ ಹೂಟಾ ಸಮಿತಿಯು ಶಿಫಾರಸ್ಸುಗಳನ್ನು ಜಾರಿಗೆ ತರಲಾಗಿದೆಯೇ ; ಇದರ ಸುಧಾರಣೆಗಾಗಿ ಕೇರಳ ಮಾದರಿಯಲ್ಲಿ ನೇಮಕಾತಿ ಪರೀಕ್ಷೆಗಳನ್ನು ನಡೆಸಲು ಕ್ರಮವಹಿಸಲಾಗುವುದೆ ?

## ಕಲಬುರಗಿ ನಗರದಲ್ಲಿ ಪ್ರಾರಂಭಿಸಿದ ರಾಜ್ಯ ಮಾಹಿತಿ ಹಕ್ಕು ಆಯೋಗ ಪೀಠದ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :–**

೧೨೮೨ (೧೪೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿಯಲ್ಲಿ ರಾಜ್ಯ ಮಾಹಿತಿ ಆಯೋಗದ ಕಲಬುರಗಿ ಪೀಠ ಇದ್ದು ಇಲ್ಲದಂತಾಗಿರಲು ಕಾರಣಗಳೇನು; ಇದು ಜನರಿಗೆ ಉಪಯೋಗವಾಗುವಂತೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಆ) ಕಲಬುರಗಿಯಲ್ಲಿ ಸ್ವೀಕರಿಸಿದ ಅರ್ಜಿಗಳನ್ನು ಅಲ್ಲಿಯೇ ವಿಲೇವಾರಿಯಾಗುವಂತೆ ಮಾಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ;

(ಇ) ಕಲಬುರಗಿಯ ಈ ಪೀಠಕ್ಕೆ ಪೂರ್ಣ ಪ್ರಮಾಣದ ಆಯುಕ್ತರನ್ನು ನೇಮಿಸಿ ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಅನುಕೂಲ ಆಗುವಂತೆ ಸರ್ಕಾರ ಕ್ರಮವಹಿಸಬಹುದೇ ;

(ಈ) ಕಲಬುರಗಿ ಪೀಠದಲ್ಲಿನ ಅಧಿಕಾರಿಗಳ/ಸಿಬ್ಬಂದಿಗಳ ಗೊಂದಲ ಮತ್ತು ಒಳಜಗಳ ಕಾರಣದಿಂದ ಸಂವಿಧಾನದತ್ತ ಮಾಹಿತಿ ಹಕ್ಕನ್ನು ಪಡೆಯಲು ಈ ಭಾಗದ ಜನರಿಗೆ ಅವಕಾಶ ಕಲ್ಪಿಸಲು ಕೈಗೊಂಡ ಕ್ರಮಗಳೇನು ?

## ೨೦೧೫ನೇ ಬ್ಯಾಚ್‌ನ ಗೆಜೆಟೆಡ್ ಪ್ರೋಬೇಷನರ್ಸ್ ಹುದ್ದೆಗಳ ಬಗ್ಗೆ

**ಡಾ. ಡಿ.ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೩ (೧೪೧೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ನೇ ಬ್ಯಾಚ್‌ನ ಗೆಜೆಟೆಡ್ ಪ್ರೊಬೇಷನರ್ಸ್ Deputy Superintendent of Police ಹುದ್ದೆಗಳಿಗೆ ಕೆ.ಪಿ.ಎಸ್.ಸಿ ಯಿಂದ ಆಯ್ಕೆಯಾಗಿ ಗೃಹ ಮತ್ತು ಒಳಾಡಳಿತ ಇಲಾಖೆಯಿಂದ ನೇಮಕಾತಿ ಆದೇಶ ನೀಡಿದ ನಂತರವೂ ಕರ್ತವ್ಯಕ್ಕೆ ಹಾಜರಾಗದ (Non Reported) ಅಭ್ಯರ್ಥಿಗಳ ಸಂಖ್ಯೆ ಎಷ್ಟು ;

(ಆ) ಅಂತಹ ಅಭ್ಯರ್ಥಿಗಳ ಹೆಸರು ಮತ್ತು ವಿಳಾಸ ಮತ್ತು ಮೀಸಲಾತಿಯ ಪ್ರವರ್ಗಗಳ ವಿವರಗಳೇನು ? (ಮಾಹಿತಿ ನೀಡುವುದು)

## ಕಳೆದ ಮೂರು ವರ್ಷಗಳಲ್ಲಿ ವಿವಿಧ ವರ್ಗಗಳಿಗೆ ಮೀಸಲಿಟ್ಟ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳ ಕುರಿತು

**ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೪ (೧೪೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳಿಗೆ (KAS) ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದು, ಇವುಗಳಲ್ಲಿ ವಿವಿಧ ವರ್ಗಗಳಿಗೆ ಮೀಸಲಿಟ್ಟ ಹುದ್ದೆಗಳ ಸಂಖ್ಯೆ ಎಷ್ಟು; (ವರ್ಷವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಅದರಲ್ಲಿ ಆಯ್ಕೆ ಮಾಡಲಾದ ವಿವಿಧ ಪ್ರವರ್ಗಗಳ ಸಂಖ್ಯೆ ಎಷ್ಟು; (ವರ್ಷವಾರು ಪ್ರತ್ಯೇಕವಾಗಿ ವಿವರ ನೀಡುವುದು)

(ಇ) ಈ ಹುದ್ದೆಗಳ ಪೈಕಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–೧, ಪ್ರವರ್ಗ–೨ಎ ಪ್ರವರ್ಗ–ಬಿ ಪ್ರವರ್ಗ–೩ಎ ಪ್ರವರ್ಗ–೩ಬಿನ ಮೀಸಲಾತಿಯಡಿಯಲ್ಲಿ ಅರ್ಜಿ ಸಲ್ಲಿಸಿ, ಮೆರಿಟ್ ಆಧಾರದ ಮೇಲೆ ಸಾಮಾನ್ಯ ವರ್ಗದಲ್ಲಿ ಬರುವ ಹುದ್ದೆಗಳಿಗೆ ಆಯ್ಕೆ ಮಾಡಲಾದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–೧, ಪ್ರವರ್ಗ–೨ಎ ಪ್ರವರ್ಗ–೨ಬಿ, ಪ್ರವರ್ಗ–೩ಎ, ಪ್ರವರ್ಗ–೩ಬಿ ಅಭ್ಯರ್ಥಿಗಳ ಸಂಖ್ಯೆಗಳನ್ನು ಪ್ರವರ್ಗವಾರು, ವರ್ಷವಾರು ಪ್ರತ್ಯೇಕವಾಗಿ ವಿವರ ನೀಡುವುದು ?

## ೨೦೧೫ನೇ ಬ್ಯಾಚ್‌ನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳಿಗೆ ನಡೆದ ಪರೀಕ್ಷೆಯ ಕುರಿತು

**ಡಾ. ಡಿ. ತಿಮ್ಮಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೫ (೧೪೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫ನೇ ಬ್ಯಾಚ್‌ನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳಿಗೆ ನಡೆಸಲಾದ ಮುಖ್ಯ ಪರೀಕ್ಷೆಯ ಎಲ್ಲಾ ವಿಷಯಗಳ ಮಾದರಿ ಉತ್ತರ ಪತ್ರಿಕೆಯನ್ನು ಮೌಲ್ಯಮಾಪಕರಿಗೆ ಮೌಲ್ಯಮಾಪನ ಮಾಡಲು ನೀಡಲಾಗಿದೆಯೇ ;

(ಆ) ನೀಡಿದ್ದಲ್ಲಿ, ಅದರ ಒಂದು ಪ್ರತಿಯನ್ನು ನೀಡುವುದು ?

## ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಐಕ್ಯಸ್ಥಳ ಅಭಿವೃದ್ಧಿ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮೬ (೧೪೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಚೌಡಯ್ಯದಾನಪುರ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಕಾಯಕ ಕ್ಷೇತ್ರ ಹಾಗೂ ಐಕ್ಯಸ್ಥಳ ಇದ್ದು ತುಂಗಭದ್ರ ನದಿಯ ದಡದಲ್ಲಿರುವುದು ನಿಜವೆ ;

(ಆ) ಮಳೆಗಾಲದಲ್ಲಿ ಇವರ ಗದ್ದುಗೆ ಪೂರ್ಣವಾಗಿ ಮುಳುಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಗದ್ದುಗೆ ಮತ್ತು ನಿಜಶರಣರ ಕಲ್ಲುದೋಣಿ ಇರುವ ಸ್ಥಳಗಳನ್ನು ಕೂಡಲ ಸಂಗಮದಲ್ಲಿ ಶ್ರೀ ಸಂಗಮನಾಥ ದೇವರಗುಡಿಗೆ ಈವರೆಗೆ ಕಲ್ಪಿಸಿದ ಮಾದರಿಯಲ್ಲಿ ನೀರಾವರಿ ಇಲಾಖೆಯಿಂದ ನಿರ್ಮಿಸಲು ಮತ್ತು ತುಂಗಭದ್ರಾ ನದಿ ದಡದಲ್ಲಿಯ ಅಭಿವೃದ್ಧಿ ಕಾಮಗಾರಿ ನಿರ್ವಹಿಸಲು ಕ್ರಮ ಜರುಗಿಸಲಾಗುವುದೇ ?

## ರಾಜ್ಯದಲ್ಲಿ ಕಳೆದ ೩ ವರ್ಷಗಳ ಕೌಟುಂಬಿಕ, ವರದಕ್ಷಿಣೆ, ಪ್ರೇಮ ಪ್ರಕರಣಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮೭ (೧೪೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಕೌಟುಂಬಿಕ ದೌರ್ಜನ್ಯ, ವರದಕ್ಷಿಣೆ ಕಿರುಕುಳ, ಅತ್ಯಾಚಾರ, ಲೈಂಗಿಕ ಕಿರುಕುಳ, ಪ್ರೇಮ

ಪ್ರಕರಣ, ವಿವಾಹ ವಿಚ್ಛೇಧನ ಸೇರಿದಂತೆ ಘಟಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಪೈಕಿ ಎಷ್ಟು ಪ್ರಕರಣಗಳು ದಾಖಲಾಗಿವೆ; ಎಷ್ಟು ಪ್ರಕರಣಗಳು ಈವರೆಗೆ ಇತ್ಯರ್ಥಗೊಂಡಿವೆ ;

(ಇ) ಇಂತಹ ಪ್ರಕರಣಗಳಲ್ಲಿ ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕನ್ನಡ ಚಲನಚಿತ್ರಗಳಿಗೆ ಪ್ರಶಸ್ತಿಗಳನ್ನು ನೀಡುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೨೮೮ (೧೪೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡ ಚಲನಚಿತ್ರಗಳಿಗೆ ಪ್ರಶಸ್ತಿಗಳನ್ನು ನೀಡುವ ಪದ್ಧತಿಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಆಯ್ಕೆಯಾದ ಚಿತ್ರಗಳಿಗೆ ಪ್ರಶಸ್ತಿಯ ಜೊತೆಗೆ ಗೌರವಧನ ಹಣವನ್ನು ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಪ್ರತಿ ಚಿತ್ರಕ್ಕೆ ಎಷ್ಟು ಹಣ ನೀಡಲಾಗಿದೆ ;

(ಇ) ಕಲಾವಿದರು–ತಂತ್ರಜ್ಞಾನರಿಗೂ ಪ್ರಶಸ್ತಿ ನೀಡಲಾಗುತ್ತಿದೆಯೇ; ಯಾವ ಯಾವ ರೀತಿಯ ವಿಭಾಗಗಳಲ್ಲಿ ದುಡಿದ ತಂತ್ರಜ್ಞಾನರಿಗೆ ಪ್ರಶಸ್ತಿ ನೀಡಲಾಗುತ್ತಿದೆ; ಈ ಪ್ರಶಸ್ತಿಯೊಂದಿಗೆ ಹಣವನ್ನು ನೀಡಲಾಗುತ್ತಿದೆಯೇ; ಇದರ ಮೊತ್ತವೆಷ್ಟು ;

(ಈ) ಚಲನಚಿತ್ರ ಪ್ರಶಸ್ತಿ ಕೆಲವು ವರ್ಷಗಳಿಂದ ನೀಡದಿರಲು ಕಾರಣವೇನು ?

## ಸಾಂಸ್ಕೃತಿಕ, ಐತಿಹಾಸಿಕ, ಧಾರ್ಮಿಕ ಸ್ಥಳಗಳಲ್ಲಿ ಚಲನಚಿತ್ರ ನಿರ್ಮಾಣ ಮಾಡುವುದರ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೨೮೯ (೧೪೬೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಾದ್ಯಂತ ಚಲನಚಿತ್ರ ಸ್ನೇಹಿ ತಾಣಗಳನ್ನು ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ, ಅವು ಯಾವುವು; ಈ ತಾಣಗಳಲ್ಲಿ ಈಗ ಚಿತ್ರೀಕರಣ ನಡೆಸಲು ಅವಕಾಶ ನೀಡಲಾಗಿದೆಯೇ ;

(ಆ) ರಾಜ್ಯಾದಾದ್ಯಂತ ಗುರುತಿಸಿರುವ ಈ ಸಾಂಸ್ಕೃತಿಕ, ಐತಿಹಾಸಿಕ, ಧಾರ್ಮಿಕ, ತಾಣಗಳಲ್ಲಿ ಎಷ್ಟು ಚಲನಚಿತ್ರ ನಿರ್ಮಾಣಕ್ಕೆ ಅವಕಾಶ ಮತ್ತು ಅನುಮತಿ ನೀಡಲಾಗಿದೆ ;

(ಇ) ಹಾಗಿದ್ದಲ್ಲಿ, ಎಷ್ಟು ವಾಣಿಜ್ಯ ಚಲನಚಿತ್ರ ಪ್ರಾದೇಶಿಕ ಚಲನಚಿತ್ರ, ಸಾಕ್ಷ ಚಿತ್ರ, ಟಿ.ವಿ. ಧಾರವಾಹಿಗಳು, ಓ.ಟಿ.ಟಿ ಚಿತ್ರಗಳ ಚಿತ್ರೀಕರಣಕ್ಕೆ ಅವಕಾಶ ನೀಡಲಾಗಿದೆ ? (ವಿವರ ನೀಡುವುದು)

## ಚಲನ ಚಿತ್ರೋತ್ಸವಗಳ ಪ್ರದರ್ಶನಗಳನ್ನು ನಡೆಸುವ ಬಗ್ಗೆ

**ಡಾ॥ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೨೯೦ (೧೪೬೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತ್ಯೇಕ ಚಲನಚಿತ್ರ ಪ್ರವಾಸೋದ್ಯಮ ನೀತಿಯನ್ನು ರೂಪಿಸಲು ಸರ್ಕಾರ ಯೋಚಿಸಿದೆಯೇ ; ಹಾಗಿದ್ದಲ್ಲಿ, ಯಾವಾಗ ರೂಪಿಸಲಾಗುವುದು ;

(ಆ) ಕರ್ನಾಟಕದತ್ತ ಹೆಚ್ಚು ಪ್ರವಾಸಿಗರನ್ನು ಸೆಳೆಯಲು ಚಲನಚಿತ್ರೋತ್ಸವಗಳ ಪ್ರದರ್ಶನಗಳು ಪ್ರವಾಸೋದ್ಯಮ ಇಲಾಖೆಯಿಂದ ನಡೆದಿದೆಯೇ ; ಹಾಗಿದ್ದಲ್ಲಿ, ಎಲ್ಲೆಲ್ಲಿ ನಡೆಸಲಾಗಿದೆ ;

(ಇ) ಪ್ರವಾಸೋದ್ಯಮದ ವತಿಯಿಂದ ೨೦೧೮–೨೦೨೪ರವರೆಗೆ ನಿರ್ಮಾಣವಾದ ಚಲನಚಿತ್ರಗಳು ಯಾವುವು ;

(ಈ) ಈ ರೀತಿಯ ಚಿತ್ರಗಳನ್ನು ನಿರ್ಮಾಣ ಮಾಡಿದರೆ ಪ್ರವಾಸಿಗರನ್ನು ಹೆಚ್ಚು ಅಕರ್ಷಿಸಲು ಅನುಕೂಲವಾಗುವುದಲ್ಲವೇ ?

## ಕಾರಾಗೃಹಗಳಲ್ಲಿ ಸಿ.ಸಿ.ಟಿ.ವಿ ಅಳವಡಿಸುವ ಬಗ್ಗೆ

**ಡಾ|| ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೨೯೧ (೧೪೬೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಾರಾಗೃಹಗಳ ಸಂಖ್ಯೆ ಎಷ್ಟು ; ಪ್ರತಿ ಕಾರಾಗೃಹದಲ್ಲಿ ಎಷ್ಟು ಬ್ಯಾರಿಕ್‌ಗಳು ಇವೆ ; ಈ ಎಲ್ಲಾ ಬ್ಯಾರಿಕ್‌ಗಳಲ್ಲೂ ಸಿ.ಸಿ.ಟಿ.ವಿ ಅಳವಡಿಸಲಾಗಿದೆಯೇ ; (ಕಾರಾಗೃಹವಾರು ಅಳವಡಿಸಿರುವ ಸಿ.ಸಿ.ಟಿ.ವಿ ಅಳವಡಿಕೆ ಸಂಪೂರ್ಣವಾಗಿ ವಿವರ ನೀಡುವುದು)

(ಆ) ಸಿ.ಸಿ.ಟಿ.ವಿ ಇದ್ದಾಗ್ಯೂ ಜೈಲಿನ ಖೈದಿಗಳು ಅಕ್ರಮ ಚಟುವಟಿಕೆಯಲ್ಲಿ ಭಾಗಿಯಾಗುತ್ತಿರುವುದಾಗಿ ತಿಳಿದು ಬಂದಿದ್ದು ಇದು ಸರ್ಕಾರದ ಗಮನದಲ್ಲಿದೆಯೇ ;

(ಇ) ಹಾಗಿದ್ದಲ್ಲಿ, ಇನ್ನೂ ಹೆಚ್ಚಿನ ರೀತಿಯಲ್ಲಿ ತಂತ್ರಜ್ಞಾನ ಬಳಸಿ ಇದನ್ನು ನಿಯಂತ್ರಿಸಲು ಸಾಧ್ಯವಾಗುವುದರಿಂದ ಈ ರೀತಿಯ ಪ್ರಯತ್ನ ಮಾಡಲಾಗುವುದೆ ?

## ಕಾವೇರಿ ನೀರಾವರಿ ನಿಗಮ ನಿಯಮಿತದಡಿ ಭೂ ಪರಿಹಾರದ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೨ (೧೪೩೦) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ನೀರಾವರಿ ಯೋಜನೆಗಳಿಗೆ ಎಷ್ಟು ಎಕರೆ ಭೂಮಿಯನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿಯನ್ನು ಸರ್ಕಾರಿ ಮತ್ತು ಖಾಸಗಿ ಭೂಮಿವಾರು ಒದಗಿಸುವುದು)

(ಆ) ಈವರೆಗೆ ಸ್ವಾಧೀನ ಪಡಿಸಿಕೊಂಡ ಒಟ್ಟು ಭೂಮಿಯಲ್ಲಿ ಎಷ್ಟು ಎಕರೆ ಭೂಮಿಗೆ ಭೂ ಪರಿಹಾರ ನೀಡಲಾಗಿದೆ ; ಇನ್ನು ಎಷ್ಟು ಭೂಮಿಗೆ ಭೂ ಪರಿಹಾರ ನೀಡಿರುವುದಿಲ್ಲ ; ಎಷ್ಟು ಭೂ ಪರಿಹಾರ ಪ್ರಕರಣಗಳು ಬಾಕಿ ಇವೆ; ಬಾಕಿ ಇರಲು ಕಾರಣವೇನು ; (ವಿಧಾನ ಸಭಾ ಕ್ಷೇತ್ರವಾರು ವಿವರ ಒದಗಿಸುವುದು)

(ಇ) ಭೂ ಪರಿಹಾರವನ್ನು ಯಾವಾಗ ನೀಡಲಾಗುವುದು ?

## ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಅನುದಾನ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೩ (೧೪೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಕೇಂದ್ರ ಸರ್ಕಾರ ರಾಜ್ಯಕ್ಕೆ ಘೋಷಿಸಿದ ಮತ್ತು ಅಂತಿಮವಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು ; (ಯೋಜನೆವಾರು ಮತ್ತು ವರ್ಷವಾರು ಮಾಹಿತಿ ಒದಗಿಸುವುದು)

(ಆ) ಈ ಯೋಜನೆಗಳಿಗೆ ಕೇಂದ್ರ ಸರ್ಕಾರವು ೨೦೨೩-೨೪ ಮತ್ತು ೨೦೨೪-೨೫ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನ ಹಿಂದಿನ ವರ್ಷಗಳಿಗೆ ಹೋಲಿಸಿದರೆ ಕಡಿಮೆಯಾಗಿದೆಯೇ ; ಹಾಗಿದ್ದಲ್ಲಿ, ಅನುದಾನ ಕಡಿತಕ್ಕೆ ಕಾರಣಗಳೇನು ? (ವಿವರ ಒದಗಿಸುವುದು)

## ಸಿರಸಿ ವೃತ್ತಿದಿಂದ ಕೆಂಗೇರಿವರೆಗೂ ಮೇಲ್ಸೇತುವೆ ರಸ್ತೆ ನಿರ್ಮಿಸುವ ಕುರಿತು

**ಡಾ. ಯತೀಂದ್ರ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೪ (೧೪೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೆಂಗಳೂರು–ಮೈಸೂರು ರಸ್ತೆಯಲ್ಲಿ ಸಿರಸಿ ವೃತ್ತದಿಂದ ಕೆಂಗೇರಿವರೆಗೂ ಸಾಕಷ್ಟು ಸಂಚಾರ ದಟ್ಟಣೆಯಾಗುತ್ತಿದ್ದು ಮೈಸೂರಿಗೆ ಪ್ರಯಾಣಿಸುವವರಿಗೆ ಸಾಕಷ್ಟು ಸಮಯ ತೆಗೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಶಿರಸಿ ವೃತ್ತದಿಂದ ಕೆಂಗೇರಿವರೆಗೂ ಮೇಲ್ಸೇತುವೆ ರಸ್ತೆ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ಒದಗಿಸುವುದು)

## ಗೆಜೆಟೆಡ್ ಪ್ರೊಬೇಷನರ್ಸ್–೨೦೧೫ ಮುಖ್ಯ ಪರೀಕ್ಷೆಯ ಅಂಕ ಪಟ್ಟಿಗಳ ಕುರಿತು

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೫ (೧೪೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಎಸ್.ಸಿ ಯು ಹಿಂದಿನ ಗೆಜೆಟೆಡ್ ಪ್ರೊಬೇಷನರ್ಸ್ ಬ್ಯಾಚ್ ಗಳಲ್ಲಿ ಅಂದರೆ ೧೯೯೮, ೧೯೯೯, ೨೦೦೪, ೨೦೦೬, ೨೦೦೮,

೨೦೧೦, ೨೦೧೧ರ ಬ್ಯಾಚ್‌ಗಳ ಅಭ್ಯರ್ಥಿಗಳು ಮುಖ್ಯ ಪರೀಕ್ಷೆಗಳಲ್ಲಿ ಗಳಿಸಿರುವ ವಿಷಯವಾರು ಅಂಕ ಪಟ್ಟಿಗಳಿಗೆ ಕೆ.ಪಿ.ಎಸ್.ಸಿ ಯ ಕಾರ್ಯದರ್ಶಿ ಅಥವಾ ಕೆ.ಪಿ.ಎಸ್.ಸಿ.ಯ ಪರೀಕ್ಷಾ ನಿಯಂತ್ರಕರು ಅಥವಾ ಕೆ.ಪಿ.ಎಸ್.ಸಿ.ಯ ಗೆಜೆಟೆಡ್ ಅಧಿಕಾರಿಯು ದೃಢೀಕರಿಸಿ ಸಹಿ ಮಾಡಿರುವುದು ನಿಜವೇ ;

(ಆ) ಕೆ.ಪಿ.ಎಸ್.ಸಿ ೨೦೧೫ನೇ ಬ್ಯಾಚ್ ನ ಗೆಜೆಟೆಡ್ ಪ್ರೊಬೇಷನರ್ಸ್ ಹುದ್ದೆಗಳಿಗೆ ನಡೆಸಿದ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಗಳಿಸಿರುವ ವಿಷಯವಾರು ಅಂಕಪಟ್ಟಿಗಳಿಗೆ ಕೆ.ಪಿ.ಎಸ್.ಸಿ.ಯ ಕಾರ್ಯದರ್ಶಿ ಅಥವಾ ಕೆ.ಪಿ.ಎಸ್.ಸಿ.ಯ ಪರೀಕ್ಷಾ ನಿಯಂತ್ರಕರು ಅಥವಾ ಕೆ.ಪಿ.ಎಸ್.ಸಿ.ಯ ಗೆಜೆಟೆಡ್ ಅಧಿಕಾರಿಯು ದೃಢೀಕರಿಸಿ ಸಹಿ ಮಾಡುವ ಬದಲಿಗೆ Computer/Console Operator, Junior Programmer, System Analysist ಇವರುಗಳು ಅಂಕಪಟ್ಟಿಗಳಿಗೆ ಸಹಿ ಮಾಡಿರುವುದು ನಿಯಮಗಳ ಪ್ರಕಾರ ಸರಿ ಇದೆಯೇ ; ಹಾಗಿದ್ದಲ್ಲಿ, ಇವರುಗಳು ಸಹಿ ಮಾಡುವ ಕುರಿತು ನಿಯಮ/ಆದೇಶಗಳವೆಯೇ ; (ಇದ್ದಲ್ಲಿ, ಅವುಗಳ ಪ್ರತಿಗಳೊಂದಿಗೆ ಮಾಹಿತಿ ನೀಡುವುದು)

(ಇ) ಇವರುಗಳ ಬದಲಿಗೆ ಕಾರ್ಯದರ್ಶಿ ಅಥವಾ Controller of Examination ಅಥವಾ ಕೆ.ಪಿ.ಎಸ್.ಸಿ.ಯು ಗೆಜೆಟೆಡ್ ಅಧಿಕಾರಿಗಳಿಂದ ೨೦೧೫ನೇ ಬ್ಯಾಚ್ ನ ಅಭ್ಯರ್ಥಿಗಳು ಗಳಿಸಿರುವ ಅಂಕಗಳಿಗೆ ಮತ್ತು ಅಂಕಪಟ್ಟಿಗಳಿಗೆ ದೃಢೀಕರಣ ಮಾಡಿಕೊಡಲು ಇರುವ ತೊಂದರೆಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ನಿರ್ವಹಿಸುವ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೬ (೧೪೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ನೌಕರರು ಮತ್ತು ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯು ಆದೇಶ/ಸುತ್ತೋಲೆಗಳನ್ನು ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ದಿನಾಂಕದಿಂದ ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸೂಚಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡದೇ ತೊಂದರೆಯಾಗುತ್ತಿರುವ ಬಗ್ಗೆ ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಯಾವ ಯಾವ ಇಲಾಖೆಗಳಲ್ಲಿ ನಿರ್ವಹಣೆ ಮಾಡಲಾಗುತ್ತಿದೆ ; ಯಾವ ಯಾವ ಇಲಾಖೆಗಳಲ್ಲಿ ನಿರ್ವಹಣೆ ಮಾಡಲಾಗುತ್ತಿಲ್ಲ ಮತ್ತು ದಾಖಲೆ ಹಾಗೂ ನಿರ್ವಹಣೆ ಮಾಡದೇ ಇದ್ದಲ್ಲಿ ಕಾರಣಗಳೇನು ; (ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು e-PRS (e-Performance Reporting System) ತಂತ್ರಾಂಶದ ಮೂಲಕ ದಾಖಲಿಸುವಂತೆ ಹಾಗೂ ಈ ಉದ್ದೇಶಕ್ಕಾಗಿ Custodian, Alternate Custodian, PAR Manager ಗಳನ್ನು ವಿವಿಧ ಇಲಾಖೆಗಳಲ್ಲಿ ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ಅವುಗಳ ಸಂಪೂರ್ಣ ಮಾಹಿತಿ ನೀಡುವುದು ; ಗುರುತಿಸದೇ ಇದ್ದಲ್ಲಿ, ಕಾರಣಗಳೇನು ; ಯಾವಾಗ ಗುರುತಿಸಲಾಗುವುದು ;

(ಈ) ಅಧಿಕಾರಿ/ಸಿಬ್ಬಂದಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳನ್ನು ಆನ್‌ಲೈನ್‌ನಲ್ಲಿ ದಾಖಲಿಸಲು ಮತ್ತು ನಿರ್ವಹಣೆ ಮಾಡುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರದ ನಿಲುವೇನು ;

(ಉ) ಸಿಆಸು ಇಲಾಖೆಯಿಂದ ಬಡ್ತಿ, ಜ್ಯೇಷ್ಠತಾ ಪಟ್ಟಿ ಪ್ರಕಟಣೆ, ವಾರ್ಷಿಕ ಕಾರ್ಯನಿರ್ವಹಣಾ ವರದಿ, ಇನ್ನು ಮುಂತಾದ ವಿಷಯಗಳಿಗೆ ಸಂಬಂಧಿಸಿದಂತೆ ಆದೇಶ/ಸುತ್ತೋಲೆಗಳನ್ನು ವಿವಿಧ ಇಲಾಖೆಗಳು ಸಮಯೋಚಿತವಾಗಿ ಅನುಷ್ಠಾನಗೊಳಿಸುವಲ್ಲಿ ವಿಳಂಬ ಮತ್ತು ವಿಫಲವಾಗುತ್ತಿರಲು ಕಾರಣಗಳೇನು ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲ್ಯಾಣ ಕರ್ನಾಟಕದ ಉದ್ಯೋಗಿಗಳಿಗೆ ಶೇ.೮ ರಷ್ಟು ಬಡ್ತಿ ನೀಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೭ (೧೪೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಃ೭೧ಜೆ ಕಲಂ ನಿಯಮದಂತೆ ಕಲಬುರಗಿ ವಿಭಾಗ ಹೊರತುಪಡಿಸಿ ಉಳಿದ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಕಲ್ಯಾಣ ಕರ್ನಾಟಕದ ಉದ್ಯೋಗಿಗಳಿಗೆ ಶೇಕಡಾ ೮ ರಷ್ಟು ಬಡ್ತಿ ನೀಡಬೇಕಾಗಿದ್ದು, ಇದುವರೆಗೂ ನೀಡದಿರಲು ಕಾರಣವೇನು ?

## ಕೆ.ಎಸ್.ಆರ್.ಪಿ ಸಿಬ್ಬಂದಿಗಳ ವರ್ಗಾವಣೆ ಮತ್ತು ನೇಮಕಾತಿಗೆ ಸಂಬಂಧಿಸಿದಂತೆ

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೮ (೧೪೫೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಪಿ ಘಟಕಗಳಲ್ಲಿ ಖಾಲಿ ಇರುವ ಸ್ಪೇ.ಆರ್.ಪಿ.ಐ ಹುದ್ದೆಗೆ ಪದೋನ್ನತಿ ನೀಡಲು ಎರಡು ವರ್ಷಗಳ ಹಿಂದೆಯೆ ಸೇವಾ ಪುಸ್ತಕವನ್ನು ಕರೆದಿದ್ದರೂ ಇನ್ನು ಪದೋನ್ನತಿಯನ್ನು ನೀಡದೆ ಮೀಸಲು ಪಡೆಯ ಸಿಬ್ಬಂದಿಗಳು ಬೇರೆ ಘಟಕಗಳಲ್ಲಿ ಕರ್ತವ್ಯ ನಿರ್ವಹಿಸಲು ಹೆಚ್ಚು ಉತ್ಸುಕರಾಗಿರುವುದು ನಿಜವೇ ; ಎಸ್.ಡಿ.ಆರ್.ಎಫ್ ಘಟಕದಲ್ಲಿ ಕೆ.ಎಸ್.ಆರ್.ಪಿಗೆ ೦೯ ಸ್ಪೇ.ಆರ್.ಪಿ.ಐ ಹುದ್ದೆಗಳು ಖಾಲಿ ಇದ್ದರೂ ವರ್ಗಾವಣೆ/ಪದೋನ್ನತಿಯನ್ನು ನೀಡುವಲ್ಲಿ ಸರ್ಕಾರ ಉದಾಸೀನತೆ ತೋರುತ್ತಿದ್ದು ಹಾಗೂ ೦೨ ಹೊಸ ಐ.ಆರ್.ಬಿ ಪಡೆಗಳನ್ನು ಸ್ಥಾಪಿಸುವ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಕೆ.ಎಸ್.ಆರ್.ಪಿ/ಐ.ಆರ್.ಬಿ ಘಟಕಗಳಲ್ಲಿ ೦೩ ವರ್ಷಕ್ಕಿಂತಲೂ ಅಧಿಕವಾಗಿ ಆರ್.ಪಿ.ಐ MTO, SM ಹಾಗೂ ಶಿಬಿರ ನಾಯಕರು ಒಂದೇ ಕಡೆ ಕರ್ತವ್ಯ ನಿರ್ವಹಿಸುತ್ತಿರುವಂತಹ ಅಧಿಕಾರಿಗಳನ್ನು ವರ್ಗಾವಣೆ ಮಾಡದೆ ಹಾಗೂ ಮಹಿಳಾ ಅಧಿಕಾರಿ ಸಿಬ್ಬಂದಿಗಳಿಗೆ ಪ್ರಸ್ತುತವಾಗಿ ಪ್ರತ್ಯೇಕವಾಗಿ ಪದೋನ್ನತಿಯನ್ನು ನೀಡುತ್ತಿರುವಂತೆ ಪುರುಷ ಅಧಿಕಾರಿ ಸಿಬ್ಬಂದಿಗಳಿಗೆ ಪದೋನ್ನತಿ ನೀಡುವ ನಿಲುವೇನಾದರೂ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಮಹಿಳಾ ಅಧಿಕಾರಿಗಳನ್ನು ಹಾಗೂ ಸಿಬ್ಬಂದಿಗಳನ್ನು ಕೆ.ಎಸ್.ಆರ್.ಪಿ ಯ ಎಲ್ಲಾ ಘಟಕಗಳಿಗೂ ಹಂಚಿಕೆ ಮಾಡಲಾಗುತ್ತದೆಯೇ ;

(ಇ) ಐ.ಆರ್.ಬಿ ಘಟಕದಲ್ಲಿ ನೇಮಕಾತಿ ಹೊಂದಿರುವ ಅಧಿಕಾರಿ ಸಿಬ್ಬಂದಿಗಳನ್ನು ಯಾವ C&R ನಿಯಮದಡಿಯಲ್ಲಿ ನೇಮಕಾತಿಯನ್ನು ಮಾಡಿಕೊಳ್ಳಲಾಗಿದೆ ಹಾಗೂ ಫೇಸ್ ೦೨ ತರಬೇತಿಯು ಅವರಿಗೆ ಕಡ್ಡಾಯವಾಗಿದ್ದರೂ ಅಧಿಕಾರಿಗಳಿಗೆ ಈ ತರಬೇತಿಯನ್ನು ನೀಡಿಲ್ಲದಿರುವುದೇಕೆ ;

(ಈ) ಕೆ.ಎಸ್.ಆರ್.ಪಿ/ಐ.ಆರ್.ಬಿ ಘಟಕಗಳಲ್ಲಿ ಸ್ಪೇ.ಆರ್.ಎಸ್.ಐ, ಸ್ಪೇ.ಆರ್.ಪಿ.ಐ ಆಗಿ ೦೬–೦೭ ವರ್ಷಗಳಿಂದ ಒಂದೇ ಘಟಕದಲ್ಲಿ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಟ್ಟಿದ್ದು ಐ.ಆರ್.ಬಿ ಘಟಕಗಳಿಗೆ ಘಟಕಾಧಿಕಾರಿಗಳನ್ನಾಗಿ ಎಸ್.ಪಿ ದರ್ಜೆಯ ಐ.ಪಿ.ಎಸ್ ಕೇಡರ್ ಅಧಿಕಾರಿಗಳನ್ನು ನೇಮಿಸಬೇಕು ಎಂಬ ಎಂ.ಹೆಚ್.ಎ ಆದೇಶ ಕಡ್ಡಾಯವಾಗಿ ಪಾಲನೆಯಾಗದಿರುವುದು ಯಾಕೆ ?

## ವಿಶ್ವವಿದ್ಯಾಲಯದಿಂದ ರ್‍ಯಾಂಕ್ ಪಡೆದ ಎಸ್.ಸಿ/ಎಸ್.ಟಿ ವಿದ್ಯಾರ್ಥಿಗಳ ನೇಮಕಾತಿಯ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯ (೧೪೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೮೫ರ ವಿಶೇಷ ನೇಮಕಾತಿ ನಿಯಮಾವಳಿಗಳು ಡಿಪಿಎಆರ್ ೩೪ ಎಸ್ ಇ ಸಿ/೮೪ರ ಪ್ರಕಾರ ಪ್ರತಿವರ್ಷ ವಿಶ್ವವಿದ್ಯಾಲಯಗಳಿಂದ ಪ್ರಥಮ, ದ್ವಿತೀಯ ಮತ್ತು ತೃತೀಯ ರ್‍ಯಾಂಕ್ ಪಡೆದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಗುಂಪು ಎ ಮತ್ತು ಬಿ ಹುದ್ದೆಗಳನ್ನು ನೀಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ; ಕರ್ನಾಟಕ ಸಿವಿಲ್ ಸೇವೆ (ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ) ಅಭ್ಯರ್ಥಿಗಳಿಗೆ ೧೯೮೫ರ ಪತ್ರಾಂಕಿತ ಹುದ್ದೆಗಳನ್ನು ನೀಡುವಲ್ಲಿ ಸರ್ಕಾರ ಇಲ್ಲಿವರೆಗೂ ಕೈಗೊಂಡ ಕ್ರಮಗಳೇನು ;

(ಆ) ಕ್ರಮ ಕೈಗೊಂಡಿದ್ದರೆ, ೧೯೮೫ರ ವಿಶೇಷ ನೇಮಕಾತಿ ನಿಯಮಾವಳಿ ಪ್ರಕಾರ ೨೦೦೮ ರಿಂದ ೨೦೨೫ ರವರೆಗೆ ವರ್ಷವಾರು ಎಷ್ಟು ಅಭ್ಯರ್ಥಿಗಳಿಗೆ ಹುದ್ದೆಗಳನ್ನು ನೀಡಲಾಗಿದೆ

ಹಾಗೂ ೧೯೮೫ ವಿಶೇಷ ನೇಮಕಾತಿ ನಿಯಮಾವಳಿ ಜಾರಿಯಲ್ಲಿರುವುದರಿಂದ ಹುದ್ದೆಗಳನ್ನು ನೀಡುವಲ್ಲಿ ಸರ್ಕಾರ ಏಕೆ ಕ್ರಮ ಕೈಗೊಂಡಿರುವುದಿಲ್ಲ ;

(ಇ) ಡಿಪಿಎಆರ್ ಇಲಾಖೆ ಅಭ್ಯರ್ಥಿಗಳ ನೈಜತೆ ಪರಿಶೀಲಿಸಿದ್ದರೂ ಸಹ ಇಲ್ಲಿಯವರೆಗೆ ಎ ಮತ್ತು ಬಿ ಹುದ್ದೆಗಳನ್ನು ನೇಮಕಾತಿ ಮಾಡದೆ ೧೯೮೫ರಲ್ಲಿ ರ್‍ಯಾಂಕ್ ಪಡೆದ ಅಭ್ಯರ್ಥಿಗಳ ವಯೋಮಿತಿ ಮೀರುತ್ತಿರುವುದರಿಂದ ನೇಮಕಾತಿ ಮಾಡಿಕೊಳ್ಳುವಲ್ಲಿ ಸರ್ಕಾರ ತೆಗೆದುಕೊಂಡ ನಿಲುವುಗಳೇನು ;

(ಈ) ೧೯೮೫ರ ವಿಶೇಷ ನಿಯಮಾವಳಿ ಪ್ರಕಾರ ಪ್ರತಿವರ್ಷ ವಿಶ್ವವಿದ್ಯಾಲಯಗಳಿಂದ ಉತ್ತೀರ್ಣರಾಗಿ ಬರುವ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಪ್ರಥಮ, ದ್ವಿತೀಯ ಮತ್ತು ತೃತೀಯ ರ್‍ಯಾಂಕ್ ಪಡೆದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ಹಾಗೂ ರ್‍ಯಾಂಕ್ ಪಡೆದ ಅಭ್ಯರ್ಥಿಗಳ ಪಟ್ಟಿ ತಯಾರಿಸಲು ಡಿಪಿಎಆರ್ ಹಾಗೂ ಸರ್ಕಾರ ತೆಗೆದುಕೊಂಡ ಸಮಯ ಹಾಗೂ ಅಭ್ಯರ್ಥಿಗಳ ಪಟ್ಟಿಯಲ್ಲಿರುವ ಹೆಸರುಗಳನ್ನು ಪ್ರಕಟಿಸಲು ಕೈಗೊಂಡ ಕ್ರಮಗಳೇನು ?

## CL-2, CL-4A, CL-9,CL-7 & CL-11C ಗಳ ಪರವಾನಗಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೦ (೧೪೫೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ CL-2, CL-4A, CL-9,CL-7 & CL-11C ಪರವಾನಗಿಗಳ ಸಂಖ್ಯೆ ಎಷ್ಟು ; ಪರವಾನಗಿ ನೀಡುವಾಗ ಸರ್ಕಾರದ ಶುಲ್ಕ ಎಷ್ಟು; (ಪ್ರತ್ಯೇಕವಾಗಿ ವಿವರಗಳೊಡನೆ ಮಾಹಿತಿ ನೀಡುವುದು)

(ಆ) ಸದರಿ ಸನ್ನದುಗಳ ಪರವಾನಗಿಯಿಂದ ಸರ್ಕಾರಕ್ಕೆ ಬರುವ ವಾರ್ಷಿಕ ಆದಾಯವೆಷ್ಟು ;

(ಇ) CL-2, ಪರವಾನಗಿಯನ್ನು ಜನಸಂಖ್ಯೆಗನುಗುಣವಾಗಿ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಈ) ಕೊಪ್ಪಳ ಜಿಲ್ಲೆಯಲ್ಲಿರುವ CL-2 & CL-7 ಪರವಾನಗಿಯನ್ನು ಹೊಂದಿರುವವರ ಸಂಖ್ಯೆ ಎಷ್ಟು ? (ಮಾಲೀಕರ ಹೆಸರು ವಿಳಾಸ ಸಹಿತ ತಾಲ್ಲೂಕುವಾರು ಮಾಹಿತಿ ನೀಡುವುದು)

## ಕೊಪ್ಪಳ ಜಿಲ್ಲೆಯಲ್ಲಿರುವ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯ ಕಾಮಗಾರಿ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೧ (೧೪೫೪) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩ ರಿಂದ ೨೦೨೫ನೇ ಸಾಲಿನವರೆಗೆ ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆಯಿಂದ ಕೊಪ್ಪಳ ಜಿಲ್ಲೆಗೆ ವಿವಿಧ ಯೋಜನೆಗಳಡಿ ಮಂಜೂರಾದ ಅನುದಾನವೆಷ್ಟು ; (ವರ್ಷವಾರು ಮತ್ತು ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಇದರಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಕಾಮಗಾರಿವಾರು ಮತ್ತು ವರ್ಷವಾರು ವಿವರ ನೀಡುವುದು)

(ಇ) ಸದರಿ ಅನುದಾನದಲ್ಲಿ ಪೂರ್ಣಗೊಂಡಿರುವ ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವುವು ; (ಕಾಮಗಾರಿವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಈ ಅನುದಾನದಲ್ಲಿ ಬಳಕೆಯಾಗದೆ ಉಳಿದಿರುವ ಅನುದಾನವೆಷ್ಟು ? (ವರ್ಷವಾರು ವಿವರ ನೀಡುವುದು)

## ಬಚಾವತ್ ತೀರ್ಪಿನ ಆದೇಶದನ್ವಯ ನೀರಿನ ವಿಷಯದಲ್ಲಿ ಮಹಾರಾಷ್ಟ್ರ ರಾಜ್ಯದಿಂದ ಕರ್ನಾಟಕ ರಾಜ್ಯದ ಜನರಿಗೆ ಅನ್ಯಾಯವಾಗುತ್ತಿರುವ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೨ (೧೪೦೧) ಮಾನ್ಯ ಉಪ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನ್ಯಾಯಮೂರ್ತಿ ಬಚಾವತ್ ತೀರ್ಪಿನ ಪ್ರಕಾರ ಮಹಾರಾಷ್ಟ್ರ ರಾಜ್ಯವು ತನ್ನ ಪಾಲಿನ ೯೫ ಟಿ.ಎಂ.ಸಿ ಗಿಂತಲೂ ಹೆಚ್ಚು ನೀರನ್ನು ಅನಧಿಕೃತವಾಗಿ ಬಳಕೆ ಮಾಡಿಕೊಳ್ಳುತ್ತಿರುವುದರಿಂದ ಬೇಸಿಗೆ ದಿನಗಳಲ್ಲಿ ಭೀಮಾ ನದಿಯ ನೀರು ಬತ್ತಿ ಹೋಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಉನ್ನತ ಮಟ್ಟದ ನೀರಾವರಿ ತಜ್ಞರ ತಂಡವನ್ನು ಮಹಾರಾಷ್ಟ್ರಕ್ಕೆ ಕಳುಹಿಸಿ ಅವರು ಬಳಸುತ್ತಿರುವ ನೀರಿನ ಪ್ರಮಾಣವನ್ನು ತಿಳಿದುಕೊಳ್ಳಲಾಗುತ್ತಿದೆಯೇ ; ತಿಳಿದುಕೊಂಡಿದ್ದರೆ ಅದರ ಅಂಕಿ–ಅಂಶಗಳೇನು ;

(ಈ) ರಾಜ್ಯದ ಪಾಲಿನ ೧೫ ಟಿ.ಎಂ.ಸಿ ನೀರನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳುತ್ತಿರುವ ಬಗ್ಗೆ ಸರ್ಕಾರದ ಸಮರ್ಥನೆ ಏನು ?

## ಕಲ್ಯಾಣ ಕರ್ನಾಟಕದ ಕಲಬುರಗಿ, ಯಾದಗಿರಿ ಮತ್ತು ರಾಯಚೂರು ಭಾಗದಲ್ಲಿ ಟಾಡಿ (ಸೇಂದಿ). ಸಂಪೂರ್ಣವಾಗಿ ಬಂದ್ ಆಗಿರುವ ಬಗ್ಗೆ

**ಶ್ರೀ ಜಗದೇವ್ ಗುತ್ತೇದಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೩ (೧೪೦೨) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕದ ಕಲಬುರಗಿ, ಯಾದಗಿರಿ ಮತ್ತು ರಾಯಚೂರು ಭಾಗದಲ್ಲಿ (ಸೇಂದಿ) ಸಂಪೂರ್ಣವಾಗಿ ಬಂದ್ ಆಗಿರುವುದರಿಂದ ಈಡಿಗ ಸಮಾಜದ ಮರ ಕೆತ್ತುವವರಿಗೆ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ;

(ಆ) ಇದ್ದರೆ, ಯಾವಾಗ ಜಾರಿಗೆ ಮಾಡಲಾಗುವುದು ಹಾಗೂ ಪರ್ಯಾಯ ವ್ಯವಸ್ಥೆ ಯಾವುದು ;

(ಇ) ಇಲ್ಲದಿದ್ದಲ್ಲಿ, ಪರ್ಯಾಯ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಸರ್ಕಾರಿ ನೌಕರರ ವರ್ಗಾವಣೆ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೪ (೧೪೨೮) ಮಾನ್ಯ ಮುಖ್ಯಮಂತ್ರಿಗಳ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೦೭.೦೬.೨೦೧೩ರ ವರ್ಗಾವಣೆ ಮಾರ್ಗಸೂಚಿಯಲ್ಲಿದ್ದ ಲೋಪಗಳೇನು ;

(ಆ) ದಿನಾಂಕ: ೨೫.೦೬.೨೦೨೪ರ ಹೊಸ ವರ್ಗಾವಣೆ ಮಾರ್ಗಸೂಚಿಯಲ್ಲಿ ಅವಧಿಪೂರ್ವ/ಅವಧಿ ಮೀರಿದ ವರ್ಗಾವಣೆಗಳನ್ನು ಮಾಡಬೇಕಾದಲ್ಲಿ, ಸೂಕ್ತ ಕಾರಣಗಳನ್ನು ಕಡ್ಡಾಯವಾಗಿ ಲಿಖಿತವಾಗಿ ದಾಖಲಿಸಿ ವರ್ಗಾವಣೆಗಳನ್ನು ಮಾಡುವ ಮುನ್ನ ಇಲಾಖೆಗಳು ಮಾನ್ಯ ಮುಖ್ಯಮಂತ್ರಿಗಳ ಪೂರ್ವಾನುಮೋದನೆಯನ್ನು ಪಡೆಯಬೇಕೆಂಬ ನಿಬಂಧನೆಯನ್ನು ಕೈಬಿಡಲು ಕಾರಣವೇನು ;

(ಇ) ದಿನಾಂಕ:೨೫.೦೬.೨೦೨೪ರ ಹೊಸ ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ಧಪಡಿಸಲು ಅವಲಂಭಿಸಿದ ದಾಖಲೆಗಳಾವುವು ;

(ಈ) ಜ್ಯೇಷ್ಠತಾ ಪಟ್ಟಿ ಇಲ್ಲದ ಸಂದರ್ಭದಲ್ಲಿ ವರ್ಗಾವಣೆಗಾಗಿ ಜ್ಯೇಷ್ಠತಾ ಘಟಕವನ್ನು ಯಾವ ರೀತಿ ನಿರ್ಧರಿಸಲಾಗುತ್ತದೆ ಹಾಗೂ ವರ್ಗಾವಣೆಗಳಲ್ಲಿ ಪಾರದರ್ಶಕತೆ ಕಾಪಾಡಲು ಇಲಾಖೆಗಳು ಅನುಸರಿಸಬೇಕಾದ ಕ್ರಮಗಳಾವುವು ; (ವಿವರಣೆಯೊಂದಿಗೆ ಪೂರಕ ಸುತ್ತೋಲೆ/ಮಾರ್ಗಸೂಚಿಗಳನ್ನು ಒದಗಿಸುವುದು)

(ಉ) ೨೦೨೩–೨೪ ಸಾಲಿನಲ್ಲಿ ನಡೆದಿರುವ ಪಿ.ಡಿ.ಓ ಹುದ್ದೆಗಳ ಅಕ್ರಮ ವರ್ಗಾವಣೆಗಳ ದೂರಿನಲ್ಲಿ ವಿವರಿಸಿದ ೬ ಅಂಶಗಳ ಬಗ್ಗೆ ಸರ್ಕಾರವು ತನಿಖೆ ನಡೆಸಿ ಯಾವ ಕ್ರಮ ಕೈಗೊಂಡಿದೆ ಹಾಗೂ ಸದರಿ ಇಲಾಖೆಯು ದಿನಾಂಕ:೦೭.೦೬.೨೦೨೩ರ ವರ್ಗಾವಣೆ ಮಾರ್ಗಸೂಚಿಯಲ್ಲಿ ತಿಳಿಸಿದಂತೆ ಅನುಬಂಧ–೨ರಲ್ಲಿ ಕ್ರೋಢಿಕರಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಸಲ್ಲಿಸಿರುವ ಮಾಹಿತಿಗಳಾವುವು ? (ಪ್ರತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ೨೦೨೪–೨೫ನೇ ಸಾಲಿನಲ್ಲಿ ಇಲಾಖಾವಾರು ನಿಗದಿಪಡಿಸಿದ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೦೫ (೧೯೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ೨೦೨೪–೨೫ನೇ ಸಾಲಿನಲ್ಲಿ ಬಜೆಟ್‌ನಲ್ಲಿ ಇಲಾಖಾವಾರು ನಿಗಧಿಯಾಗಿದ್ದ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ೨೦೨೪–೨೫ನೇ ಸಾಲಿನಲ್ಲಿ ಇಲಾಖಾವಾರು ಬಿಡುಗಡೆಯಾದ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ; ಬಿಡುಗಡೆಯಾಗದೆ ಬಾಕಿ ಇರುವ ಅನುದಾನ ಎಷ್ಟು ; (ವಿವರ ನೀಡುವುದು)

(ಇ) ಆರ್ಥಿಕ ವರ್ಷದ ಅಂತ್ಯಕ್ಕೆ ಹಲವು ಇಲಾಖೆಗಳಿಗೆ ನಿಗಧಿ ಪಡಿಸಲಾದ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನಿಗಧಿ ಪಡಿಸಿದ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಯಾವ ಕ್ರಮಕೈಗೊಳ್ಳುವುದು ?

## ಹೈದರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿರುವ ಐತಿಹಾಸಿಕ ಸ್ಥಳಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೩೦೬ (೧೯೬೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿರುವ ಒಟ್ಟು ಐತಿಹಾಸಿಕ ಸ್ಥಳಗಳೆಷ್ಟು ; ಈ ಐತಿಹಾಸಿಕ ಸ್ಥಳಗಳ ನಿರ್ವಹಣೆಗಾಗಿ ಸರ್ಕಾರ ನಿಗಧಿ ಪಡಿಸಿರುವ ವಾರ್ಷಿಕ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಬಹಳಷ್ಟು ಐತಿಹಾಸಿಕ ಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇದ್ದು, ಸದರಿ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಹೈದರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಐತಿಹಾಸಿಕ ಸ್ಥಳಗಳ ನಿರ್ವಹಣೆಯನ್ನು ಖಾಸಗಿ ಸಂಸ್ಥೆಗಳ ಸಹಭಾಗಿತ್ವದೊಂದಿಗೆ ಅಭಿವೃದ್ಧಿ ಪಡಿಸಿ ಜನಾಕರ್ಷಣೆಯ ಸ್ಥಳಗಳಾಗಿ ಪರಿವರ್ತಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಕೆರೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೩೦೭ (೧೬೦೩) ಮಾನ್ಯ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕು, ಕಣಜನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು; (ಗ್ರಾಮವಾರು ವಿವರ ನೀಡುವುದು)

(ಆ) ಸದರಿ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಕೆರೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಇ) ಕೈಗೊಳ್ಳದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು ; (ವಿವರ ನೀಡುವುದು)

(ಈ) ಸದರಿ ಗ್ರಾಮಗಳಲ್ಲಿ ಕೆರೆ ಕಟ್ಟೆಗಳ ದುರಸ್ಥಿಗೊಳಿಸಿ ಹಾಗೂ ಹೂಳೆತ್ತುವ ಕಾರ್ಯವನ್ನು ಯಾವಾಗ ಮಾಡಲಾಗುವುದು ; (ವಿವರ ನೀಡುವುದು)

(ಉ) ಕೆರೆಗಳನ್ನು ಭರ್ತಿ ಮಾಡಿ ಸಣ್ಣ ಸಣ್ಣ ರೈತರುಗಳಿಗೆ ಅನುಕೂಲ ಮಾಡಿಕೊಡಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O273/500 ಪ್ರತಿಗಳು/13–03–2025